ಸಂಪುಟ: ೦೭/ ಸಂಚಿಕೆ: ೧೯೨/ ಶುಕ್ರವಾರ ದಿನಾಂಕ : ೧೯-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 192/ FRIDAY Date : 19-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

### ರಾಜ್ಯದಲ್ಲಿ ಈಶಾನ್ಯ ಮುಂಗಾರು

## ಕರ್ನಾಟಕದಲ್ಲಿ ನೀರಿನ ಕೊರತೆ ಇಲ್ಲ

**ಬೆಂಗಳೂರು:** ಈಶಾನ್ಯ ಮಾನ್ಸೂನ್ ಸಾಮಾನ್ಯವಾಗಿರಲಿದೆ ಎಂದು ನಿರೀಕ್ಷಿಸಲಾಗಿದ್ದು, ಬೇಸಿಗೆಯಲ್ಲಿ ರಾಜ್ಯದಲ್ಲಿ ನೀರಿನ ಕೊರತೆ ಇರುವುದಿಲ್ಲ ಎಂದು ತಜ್ಞರು ಹೇಳಿದ್ದಾರೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ನಿರ್ವಹಣಾ ಕೇಂದ್ರದ ಮಾಹಿತಿಯ ಪ್ರಕಾರ, ಜೂನ್‌ನಿಂದ ಇಲ್ಲಿಯವರೆಗೆ ರಾಜ್ಯವು ಸಾಮಾನ್ಯ ಮಳೆಯನ್ನು ಕಂಡಿದೆ. ದಕ್ಷಿಣ-ಒಳಾಂಗಣ ಪ್ರದೇಶದಲ್ಲಿ ಸಾಮಾನ್ಯ 299 ಮಿಮೀ ಮಳೆಗೆ ಬದಲಾಗಿ 292 ಮಿಮೀ ಮಳೆಯಾಗಿದ್ದರೆ, ಉತ್ತರ-ಒಳಾಂಗಣ ಪ್ರದೇಶದಲ್ಲಿ ಸಾಮಾನ್ಯ 404 ಮಿಮೀ ಮಳೆಯ ಬದಲು 467 ಮಿಮೀ ಮಳೆಯಾಗಿದೆ.

ಮಲೆನಾಡು ಪ್ರದೇಶದಲ್ಲಿ ಸಾಮಾನ್ಯ 1,474 ಮಿಮೀ ಮಳೆಗೆ ಬದಲಾಗಿ 1,370 ಮಿಮೀ ಮಳೆಯಾಗಿದೆ. ಈ ಅವಧಿಯಲ್ಲಿ ಕರಾವಳಿ ಪ್ರದೇಶದಲ್ಲಿ ಸಾಮಾನ್ಯ 3027 ಮಿಮೀ ಮಳೆಗೆ ಬದಲಾಗಿ 2,983 ಮಿಮೀ ಮಳೆಯಾಗಿದೆ. ಒಟ್ಟಾರೆಯಾಗಿ, ರಾಜ್ಯವು ಸಾಮಾನ್ಯ ಮಳೆಯನ್ನು ಕಂಡಿದೆ.

ಮಾರ್ಚ್‌ನಿಂದ ಜೂನ್‌ವರೆಗೆ ರಾಜ್ಯದಲ್ಲಿ ಸಾಮಾನ್ಯ ಪೂರ್ವ ಮಾನ್ಸೂನ್ ಮಳೆಗಿಂತ ಶೇಕಡಾ 200 ರಷ್ಟು ಹೆಚ್ಚು ಮಳೆಯಾಗಿದೆ ಎಂದು ಕೆಎಸ್‌ಎನ್‌ಡಿಎಂಸಿಯ ಮಾಜಿ ನಿರ್ದೇಶಕ ಶ್ರೀನಿವಾಸ್ ರೆಡ್ಡಿ ಹೇಳಿದ್ದಾರೆ. ಇದು ಜಲಾನಯನ ಪ್ರದೇಶಗಳಲ್ಲಿ ಮಣ್ಣಿನ ಶುದ್ಧತ್ವ ಮತ್ತು ಒಳಹರಿವು ಸುಧಾರಿಸಿದ್ದಲ್ಲದೆ, ನೈಋತ್ಯ ಮಾನ್ಸೂನ್‌ನ ಮೇಲೆ ಕಡಿಮೆ ಒತ್ತಡವನ್ನುಂಟು ಮಾಡಿದೆ ಎಂದು ಹೇಳಿದ್ದಾರೆ.

### ಸಂಪುಟ ಸಭೆಯಲ್ಲಿ ಜಾತಿ ಮರು ಸಮೀಕ್ಷೆ ಚರ್ಚೆ

## ಸಮೀಕ್ಷೆಗೆ ಕೆಲ ಸಚಿವರಿಂದ ಆಕ್ಷೇಪ

**ಬೆಂಗಳೂರು:** ಗೊಂದಲಕ್ಕೀಡಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಮರು ಸಮೀಕ್ಷೆಯನ್ನು ಮಾಡುವುದೇ ಬೇಡ ಎಂಬ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಹಲವು ಸಚಿವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ಮರು ಸಮೀಕ್ಷೆ ಬಗ್ಗೆ ಗಂಭೀರವಾಗಿ ಚರ್ಚೆ ನಡೆಸಲಾಯಿತು. ಸಚಿವರಾದ ಈಶ್ವರ ಖಂಡ್ರೆ, ಡಿ.ಕೆ.ಶಿವಕುಮಾರ್, ಎಸ್.ಎಸ್ ಮಲ್ಲಿಕಾರ್ಜುನ್ ಜಾತಿ ಸಮೀಕ್ಷೆ ಬೇಡ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ಜಾತಿ ಪಟ್ಟಿಯಲ್ಲಿ 331 ಜಾತಿಗಳ ಸೇರ್ಪಡೆಯಿಂದ ಜಾತಿ ಜಾತಿ ಮಧ್ಯೆ ಬಿರುಕು ಉಂಟಾಗಲು ಕಾರಣವಾಗಿದೆ. ಇದರಿಂದ ರಾಜ್ಯ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತಿದೆ. ಈ ಗೊಂದಲದ ಮಧ್ಯೆ ಜಾತಿ ಗಣತಿ ಮಾಡಿದರೆ ಸರ್ಕಾರಕ್ಕೆ ಹಿನ್ನಡೆಯಾಗಲಿದೆ ಎಂದು ಆಕ್ರೋಶ ಹೊರ ಹಾಕಿದರು. ಈ ಗೊಂದಲಗಳ ಮಧ್ಯೆ, ಸಮೀಕ್ಷೆ ಮುಂದೂಡಿಕೆ ಮಾಡಿದರೆ ಹೇಗೆ ಎಂಬ ಬಗ್ಗೆಯೂ ಚರ್ಚೆ ನಡೆಯಿತು. ಹೆಚ್ಚುವರಿ ಜಾತಿಗಳು ಸೇರ್ಪಡೆಯಾಗಿವೆ. 321 ಜಾತಿಗಳು ಹೆಚ್ಚುವರಿಯಾಗಿ ಸೇರ್ಪಡೆ ಆಗಿವೆ. ಇದನ್ನು ಪರಿಗಣಿಸುವುದು ಹೇಗೆ?. ಇದನ್ನೇ ಮುಂದಿಟ್ಟು ಸಮೀಕ್ಷೆ ಮಾಡುವುದಕ್ಕೆ ಸಾಧ್ಯ ಇಲ್ಲ. ಸಮೀಕ್ಷೆಯನ್ನೇ ಮುಂದೂಡಿಕೆ ಮಾಡಿ ಎಂದು ಕೆಲ ಸಚಿವರು ಆಗ್ರಹಿಸಿದರು.

ಇದಕ್ಕೆ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಪ್ರತಿಕ್ರಿಯೆ ನೀಡಿ, ಜಾತಿ ಗಣತಿ ಕಾಲಂಗಳಲ್ಲಿ ಸಂಪೂರ್ಣವಾಗಿ ಗೊಂದಲ ಮಾಡಿದ್ದಾರೆ. ಇದರಿಂದ ದೊಡ್ಡ ಡ್ಯಾಮೇಜ್ ಆಗುತ್ತೆ. ಸದ್ಯಕ್ಕೆ ಈ ಗೊಂದಲ ಪರಿಹರಿಸಿ ಎಂದು ಮನವಿ ಮಾಡಿದರು.

ಗೊಂದಲ ಹಿನ್ನೆಲೆ ವಿಧಾನಸೌಧದಲ್ಲಿ ತುರ್ತು ಸಭೆ: ಜಾತಿ ಗಣತಿ ಸಮೀಕ್ಷೆ ಗೊಂದಲ ಹಿನ್ನೆಲೆ ಇಂದು ಸಂಜೆ ವಿಧಾನಸೌಧದಲ್ಲಿ ಸಚಿವ ಹೆಚ್.ಕೆ ಪಾಟೀಲ್ ನೇತೃತ್ವದಲ್ಲಿ ಸಚಿವರು ತುರ್ತು ಸಭೆ ನಡೆಸಲಿದ್ದಾರೆ. ಸಭೆಯಲ್ಲಿ ಸಚಿವ ಮಹದೇವಪ್ಪ, ಕೆ.ಹೆಚ್.ಮುನಿಯಪ್ಪ, ಭೈರತಿ ಸುರೇಶ್, ಎಂ.ಬಿ ಪಾಟೀಲ್, ಈಶ್ವರ್ ಖಂಡ್ರೆ ಸೇರಿದಂತೆ ಕೆಲ ಸಚಿವರು ಭಾಗವಹಿಸಿ ಸಮೀಕ್ಷೆಯ ಸಾಧಕ ಬಾಧಕ, ಹೆಚ್ಚುವರಿ ಜಾತಿ ಸೇರ್ಪಡೆ ಸೇರಿದಂತೆ ಗೊಂದಲಗಳ ಬಗ್ಗೆ ಚರ್ಚಿಸಲಿದ್ದಾರೆ. ಸಭೆಯಲ್ಲಿ ಚರ್ಚಿಸಿದ ಬಳಿಕ ಸಿಎಂ ಸಿದ್ದರಾಮಯ್ಯಗೆ ವರದಿ ನೀಡಿ ಮುಂದಿನ ತೀರ್ಮಾನ ಕೈಗೊಳ್ಳಲು ನಿರ್ಧರಿಸಿದ್ದಾರೆ.



### ನನ್ನನ್ನೇ ಟಾರ್ಗೆಟ್ ಮಾಡುತ್ತಿದ್ದಾರೆ

ಇದೇ ವೇಳೆ ಸಿಎಂ ಸಿದ್ದರಾಮಯ್ಯ ಬೇಸರ ವ್ಯಕ್ತಪಡಿಸಿ, ನನಗೆ ಜಾತಿವಾದಿ ಅಂತ ಪಟ್ಟ ಕಟ್ಟುತ್ತಿದ್ದಾರೆ. ಎಲ್ಲಾ ಜಾತಿಯಲ್ಲೂ ಬಡವರಿದ್ದಾರೆ. ಅದನ್ನು ಸರಿಪಡಿಸಲು ಸಮೀಕ್ಷೆ ಮಾಡ್ತಿರೋದು. ಆದರೆ, ಇದು ಕೇವಲ ಜಾತಿ ಸಮೀಕ್ಷೆ ಎಂದು ಬಿಂಬಿಸುತ್ತಿದ್ದಾರೆ. ಬಡವರ ಪರ ಸಮೀಕ್ಷೆ ಆಗಲಿ ಎಂಬುದು ನಮ್ಮ ಉದ್ದೇಶ ಎಂದು ಸಂಪುಟ ಸಭೆಯಲ್ಲಿ ಅಸಮಾಧಾನ ಹೊರಹಾಕಿದರು. ತಮ್ಮ ವಿರುದ್ಧ ಅನಗತ್ಯ ಆರೋಪ ಮಾಡಲಾಗುತ್ತಿದೆ. ಹಿಂದುಳಿದ, ದಲಿತ, ಅಲ್ಪಸಂಖ್ಯಾತರ ಪರ ಎಂದು ಹೇಳುತ್ತಾರೆ. ಈ ಮೂಲಕ ಮೇಲ್ವರ್ಗದ ವಿರೋಧಿ ಎಂಬಂತೆ ಬಿಂಬಿಸಲಾಗುತ್ತಿದೆ. ಹೀಗಿರುವಾಗ ಸಮೀಕ್ಷೆ ಆರ್ಥಿಕ ಪರಿಸ್ಥಿತಿ ಅರಿಯಲು ಎಂದು ಹೇಗೆ ಜನರಿಗೆ ಮನವರಿಕೆ ಮಾಡುತ್ತೀರಿ ಎಂದು ಗರಂ ಆದರು.

### ದೌರ್ಜನ್ಯಕ್ಕೊಳಗಾಗಿ ಮೃತಪಟ್ಟ ಎಸ್ಸಿ-ಎಸ್ಟಿ ಅವಲಂಬಿತರಿಗೆ ಅನುಕಂಪದಡಿ ನೇಮಕಾತಿ

## ನಿಯಮ ತಿದ್ದುಪಡಿಗೆ ಸಂಪುಟ ಅಸ್ತು

**ಬೆಂಗಳೂರು:** ದೌರ್ಜನ್ಯಕ್ಕೊಳಗಾಗಿ ಮೃತಪಟ್ಟ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ ಸೇರಿದ ವ್ಯಕ್ತಿಗಳ ಅವಲಂಬಿತರಿಗೆ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ ನೀಡಲು ಸಚಿವ ಸಂಪುಟ ಅನುಮೋದನೆ ನೀಡಿದೆ.

ದೌರ್ಜನ್ಯಕ್ಕೊಳಗಾಗಿ ಮೃತಪಟ್ಟ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ ಸೇರಿದ ವ್ಯಕ್ತಿಗಳ ಅವಲಂಬಿತರಿಗೆ ಒಟ್ಟು 87 ಪ್ರಕರಣಗಳನ್ನು ಅನುಕಂಪದ ಆಧಾರದ ಮೇಲೆ ವಿಶೇಷ ಪ್ರಕರಣಗಳೆಂದು ಒಂದು ಬಾರಿಗೆ ಮಾತ್ರ ಪರಿಗಣಿಸಿ, ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳಿಗೆ ನೇಮಕಾತಿ ಮಾಡಲು ತೀರ್ಮಾನಿಸಲಾಗಿದೆ.

ಅಪ್ರಾಪ್ತ ವಯಸ್ಸಿನ ಪ್ರಕರಣಗಳಲ್ಲಿ ಇನ್ನು ಮುಂದೆ ಅನುಕೂಲವಾಗುವಂತೆ ಕರ್ನಾಟಕ ನಾಗರೀಕ ಸೇವಾ (ದೌರ್ಜನ್ಯದಿಂದ ಮೃತಪಟ್ಟ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಕ್ಕೆ ಸೇರಿದ ವ್ಯಕ್ತಿಗಳ ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರಿತ ನೇಮಕಾತಿ) (ವಿಶೇಷ) (ತಿದ್ದುಪಡಿ) ನಿಯಮಗಳು 2022ರ ನಿಯಮ 4(1)ಕ್ಕೆ ತಿದ್ದುಪಡಿ ಮಾಡುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ನಿರ್ದೇಶನ ನೀಡಲು ತೀರ್ಮಾನಿಸಲಾಗಿದೆ.



## ಧರ್ಮಸ್ಥಳ ಪ್ರಕರಣ

### ವಕೀಲರಿಂದ ದಾಖಲೆ ಕೇಳಿದ ಹೈಕೋರ್ಟ್

**ಬೆಂಗಳೂರು:** ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಬಳಿ ಇರುವ ದಾಖಲೆಯನ್ನು ಸೆಪ್ಟೆಂಬರ್ 25ರ ಒಳಗೆ ನ್ಯಾಯಾಲಯಕ್ಕೆ ಸಲ್ಲಿಸುವಂತೆ ಪುರಂದರ ಗೌಡ ಹಾಗೂ ತುಕಾರಾಂ ಗೌಡ ಅವರಿಗೆ ಹೈಕೋರ್ಟ್ ನಿರ್ದೇಶಿಸಿದೆ.

ಧರ್ಮಸ್ಥಳ ಗ್ರಾಮದಲ್ಲಿ ತಾವು ಗುರುತಿಸಿರುವ ಜಾಗಗಳಲ್ಲಿ ಸ್ಥಳ ಪರಿಶೀಲನೆ ಹಾಗೂ ಶವಗಳ ಉತ್ಖನನ ನಡೆಸಲು ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವಂತೆ ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ನಿರ್ದೇಶಿಸುವಂತೆ ಕೋರಿ ಪುರಂದರ ಗೌಡ ಹಾಗೂ ತುಕಾರಾಂ ಗೌಡ ಸಲ್ಲಿಸಿರುವ ರಿಟ್ ಅರ್ಜಿ ಕುರಿತು ಗುರುವಾರ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ನಿರ್ದೇಶನ ನೀಡಿತು.

ಪ್ರಕರಣದ ದೂರು ದಾಖಲಾದಾಗಿನಿಂದ ಈವರೆಗಿನ ಬೆಳವಣಿಗೆಗಳ ಕುರಿತು ಹೆಚ್ಚುವರಿ ವಿಶೇಷ ಸರ್ಕಾರಿ ಅಭಿಯೋಜಕ ಬಿ.ಎನ್. ಜಗದೀಶ ಅವರಿಂದ ಮಾಹಿತಿ ಪಡೆದ ನ್ಯಾಯಪೀಠ, ಮೂಲ ದೂರುದಾರನ ಬಳಿ ಇರುವ ಮಾಹಿತಿ ಹೊರತುಪಡಿಸಿ ನಿಮ್ಮ ಬಳಿ ಹೆಚ್ಚಿನ ಮಾಹಿತಿ ಏನಿದೆ ಎಂದು ಅರ್ಜಿದಾರರ ಪರವಾಗಿ ವಿಡಿಯೊ ಕಾನ್ಫರೆನ್ಸ್ ಮೂಲಕ ಹಾಜರಿದ್ದ ಹಿರಿಯ ವಕೀಲ ದೀಪಕ್ ಖೋಸ್ಲಾ ಅವರನ್ನು ಪ್ರಶ್ನಿಸಿತು. ಅಂತಿಮವಾಗಿ, ಅರ್ಜಿದಾರರ ಬಳಿ ಇರುವ ದಾಖಲೆಯನ್ನು ಮುಂದಿನ ವಿಚಾರಣೆ ವೇಳೆಗೆ ಸಲ್ಲಿಸುವಂತೆ ಸೂಚಿಸಿ, ವಿಚಾರಣೆಯನ್ನು ಸೆಪ್ಟೆಂಬರ್ 25ಕ್ಕೆ ಮುಂದೂಡಿತು. **ಅರ್ಜಿಯಲ್ಲೇನಿದೆ:** ಪುರಂದರ ಗೌಡ ಹಾಗೂ ತುಕಾರಾಂ ಗೌಡ ಅವರು ಸಲ್ಲಿಸಿರುವ ಮನವಿ ಪರಿಗಣಿಸಿ, ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲು ಎಸ್‌ಐಟಿಗೆ ನಿರ್ದೇಶಿಸಬೇಕು. ಅರ್ಜಿದಾರರು ತೋರಿಸುವ ಸ್ಥಳಗಳಲ್ಲಿ ಉತ್ಖನನಕ್ಕೆ ಅನುವಾಗುವಂತೆ ಅರ್ಜಿದಾರರಿಗೆ ಜತೆಯಾಗಿ ರಿಜಿಸ್ಟ್ರಾರ್ (ನ್ಯಾಯಾಂಗ) ಅಥವಾ ನಿವೃತ್ತ ಜಿಲ್ಲಾ ನ್ಯಾಯಾಧೀಶರಂತಹ ಕೋರ್ಟ್ ಕಮಿಷನರ್ ಒಬ್ಬರನ್ನು ನೇಮಕ ಮಾಡಬೇಕು ಹಾಗೂ ಈ ಕುರಿತ ತತ್ವಪೂರ್ಣವಾದ ವಾಸ್ತವಿಕ ವರದಿಗಳನ್ನು ಕೋರ್ಟ್‌ಗೆ ಸಲ್ಲಿಸುವಂತೆ ಆದೇಶಿಸಬೇಕು. ಇದಲ್ಲದೆ, ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಅಂತ್ಯಸಂಸ್ಕಾರಗಳಿಗೆ ಸಂಬಂಧಿಸಿದಂತೆ ಸಮಗ್ರ ಹಾಗೂ ವಸ್ತುನಿಷ್ಠ ತನಿಖೆ ನಡೆದಿದೆ ಎಂಬುದನ್ನು ಖಾತ್ರಿಪಡಿಸಲು ತನಿಖೆಯ ಪ್ರಗತಿ ವರದಿಯನ್ನು ಕಾಲಕಾಲಕ್ಕೆ ನ್ಯಾಯಾಲಯಕ್ಕೆ ಸಲ್ಲಿಸಲು ಎಸ್‌ಐಟಿಗೆ ನಿರ್ದೇಶಿಸಬೇಕು ಎಂದು ಮನವಿ ಮಾಡಲಾಗಿದೆ.




## ತನಿಖೆಗೆ ಸಹಕರಿಸದ ಚುನಾವಣಾ ಆಯೋಗದ ಮೇಲೆ ಅನುಮಾನ ಸಹಜ

**ಬೆಂಗಳೂರು:** "ಆಳಂದ ಕ್ಷೇತ್ರದ ಮತ ಅಕ್ರಮದ ಬಗ್ಗೆ ಸಿಐಡಿ ತನಿಖೆಗೆ ಚುನಾವಣಾ ಆಯೋಗ ಸಹಕಾರ ನೀಡದಿರುವುದನ್ನು ನೋಡಿದರೆ, ಅವರೂ ಷಡ್ಯಂತ್ರದಲ್ಲಿ ಭಾಗಿಯಾಗಿದ್ದಾರೆಂಬ ಅನುಮಾನ ಸಹಜವಾಗಿ ಮೂಡುತ್ತದೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗಳ ಜತೆ ಶಿವಕುಮಾರ್ ಅವರು ಗುರುವಾರ ಮಾತನಾಡಿದರು. ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತಗಳ್ಳತನವಾಗಿರುವ ಬಗ್ಗೆ ನವದೆಹಲಿಯಲ್ಲಿ ರಾಹುಲ್ ಗಾಂಧಿ ಅವರು ಮಾಧ್ಯಮಗೋಷ್ಠಿ ನಡೆಸಿರುವ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಅವರು ಈ ಬಗ್ಗೆ ನಮ್ಮ ಬಳಿ ಸಂಪೂರ್ಣ ಮಾಹಿತಿ ಪಡೆದು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ್ದಾರೆ. ಕೇವಲ ಆಳಂದ ವಿಧಾನಸಭಾ ಕ್ಷೇತ್ರ ಮಾತ್ರವಲ್ಲ, ಬೇರೆ ಕ್ಷೇತ್ರಗಳಲ್ಲೂ ಈ ರೀತಿ ಅಕ್ರಮಗಳು ನಡೆದಿವೆ" ಎಂದು ಆರೋಪಿಸಿದರು.

"ಸುಮಾರು 6 ಸಾವಿರ ಮತಗಳನ್ನು ತೆಗೆದು ಹಾಕಲಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹಾಗೂ ಆಳಂದ ಶಾಸಕರು ದೂರು ನೀಡಿದ್ದರು. ಈ ಕುರಿತು ಪ್ರಕರಣವೂ ದಾಖಲಾಯಿತು. ಈ ಮಧ್ಯೆ ಚಿಲುಮೆ ಸಂಸ್ಥೆ ಅಕ್ರಮದ ವಿಚಾರವಾಗಿ ನಾವು ಹೋರಾಟ ಮಾಡಿ ಕೇಂದ್ರ ಚುನಾವಣಾ ಆಯೋಗವನ್ನು ಭೇಟಿ ಮಾಡಿದ್ದೆವು. ಆಳಂದ ಕ್ಷೇತ್ರದ ಪ್ರಕರಣದ ಬಗ್ಗೆ ಸಿಐಡಿ ತನಿಖೆ ಆರಂಭಿಸಿ ಚುನಾವಣಾ ಆಯೋಗದಿಂದ ಮಾಹಿತಿ ಕೇಳಿತ್ತು. ಆದರೆ ಆಯೋಗವು ತನಿಖೆಗೆ ಸಹಕಾರ ನೀಡಲಿಲ್ಲ" ಎಂದು ತಿಳಿಸಿದರು.

"ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುವಂತಹ ಪರಿಶಿಷ್ಟರು, ಅಲ್ಪಸಂಖ್ಯಾತರು, ಸಾಮಾನ್ಯ ವರ್ಗದವರು ಸೇರಿದಂತೆ ಎಲ್ಲ ಜನ ಸಾಮಾನ್ಯರ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಗಡಿ ಭಾಗದಲ್ಲಿರುವ ಬೇರೆ ರಾಜ್ಯದವರ ಹೆಸರನ್ನು ಸೇರಿಸಲಾಗಿತ್ತು. ಒಟ್ಟಾರೆ ಇದೆಲ್ಲವನ್ನೂ ಪೂರ್ವ ನಿಯೋಜಿತವಾಗಿ ಮಾಡಲಾಗಿತ್ತು. ಹೀಗಾಗಿ ನಮ್ಮ ನಾಯಕರಾದ ರಾಹುಲ್ ಗಾಂಧಿ ಅವರು ಈ ವಿಚಾರವನ್ನು ಪ್ರಸ್ತಾಪಿಸಿದ್ದು, ಅವರು ಮಾಡಿರುವ ಆರೋಪಗಳೆಲ್ಲವೂ ನಿಜ" ಎಂದು ತಿಳಿಸಿದರು.



**ಮತದಾನದ ಹಕ್ಕು ಕಾಯುವುದು ಆಯೋಗದ ಕರ್ತವ್ಯ, ಕಸಿಯುವುದಲ್ಲ:** ಕೇಂದ್ರ ಸರ್ಕಾರದ ಜೊತೆ ಕೇಂದ್ರ ಚುನಾವಣಾ ಆಯೋಗ ಶಾಮೀಲಾಗಿ ಈ ಷಡ್ಯಂತ್ರ ರೂಪಿಸುತ್ತಿದೆ ಎಂಬ ರಾಹುಲ್ ಗಾಂಧಿ ಅವರ ಆರೋಪದ ಬಗ್ಗೆ ಕೇಳಿದಾಗ, "ಅವರು ಮಾಡಿರುವ ಆರೋಪ ಸತ್ಯ ಎಂದು ನಾನು ಹೇಳುತ್ತಿದ್ದೇನೆ. ಯಾವುದೇ ವ್ಯಕ್ತಿ ಮತಪಟ್ಟಿಯಿಂದ ಹೆಸರು ತೆಗೆಸಲು ಅರ್ಜಿ ನೀಡಿದರೆ ಆತ ತನ್ನ ಮೊಬೈಲ್ ಸಂಖ್ಯೆ ನೀಡಬೇಕು ಹಾಗೂ ಆ ಸಂಖ್ಯೆಗೆ ಓಟಿಪಿ ಹೋಗಬೇಕಲ್ಲವೇ? ಈ ಎಲ್ಲವನ್ನೂ ಪರಿಶೀಲನೆ ಮಾಡಿದ ಬಳಿಕ ಮತಪಟ್ಟಿಯಲ್ಲಿ ಹೆಸರು ತೆಗೆಯಬೇಕು. ಈ ವಿಚಾರವಾಗಿಯೇ ರಾಹುಲ್ ಗಾಂಧಿ ಅವರು ದೇಶಾದ್ಯಂತ ಹೋರಾಟ ಮಾಡುತ್ತಿದ್ದಾರೆ. ನಮ್ಮ ಮತ, ನಮ್ಮ ಹಕ್ಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಹಕ್ಕು ಕಾಯುವುದು ಚುನಾವಣಾ ಆಯೋಗದ ಕರ್ತವ್ಯ, ಕಸಿಯುವುದಲ್ಲ. ಪ್ರತಿಯೊಬ್ಬರ ಹಕ್ಕು ರಕ್ಷಣೆ ಮಾಡಿ, ರಾಜಕೀಯ ಪಕ್ಷಗಳ ಮೇಲೆ ಅವಲಂಬಿತರಾಗಬೇಡಿ ಎಂದು ಸುಪ್ರೀಂ ಕೋರ್ಟ್ ಕೂಡ ಹೇಳಿದೆ. ರಾಜಕೀಯ ಪಕ್ಷಗಳು ಆಕ್ಷೇಪ ವ್ಯಕ್ತಪಡಿಸುತ್ತವೆಯೋ ಇಲ್ಲವೋ ಅದು ಬೇರೆ ಪ್ರಶ್ನೆ. ಆದರೆ ಆಯೋಗ ನ್ಯಾಯಬದ್ಧವಾಗಿ ಮತದಾನದ ಹಕ್ಕು ಕಾಪಾಡಬೇಕು" ಎಂದು ತಿಳಿಸಿದರು.ಆಯೋಗ ಮಾಹಿತಿ ನೀಡದಿದ್ದಾಗ ನ್ಯಾಯಾಲಯದ ಮೊರೆ ಏಕೆ ಹೋಗಲಿಲ್ಲ ಎಂದು ಕೇಳಿದಾಗ, "ಸರ್ಕಾರ ಏಕೆ ನ್ಯಾಯಾಲಯದ ಮೊರೆ ಹೋಗಬೇಕು? ಮತದಾನದ ಹಕ್ಕು ತಪ್ಪಿರುವ ಜನಸಾಮಾನ್ಯರು ಹೋಗುತ್ತಾರೆ" ಎಂದರು.

ರಾಹುಲ್ ಗಾಂಧಿ ಅವರ ಆರೋಪ ಸುಳ್ಳು ಎಂದು ಬಿಜೆಪಿ ನಾಯಕ ರವಿಶಂಕರ್ ಪ್ರಸಾದ್ ಹಾಗೂ ಕೇಂದ್ರ ಚುನಾವಣಾ ಆಯೋಗ ಹೇಳಿಕೆ ನೀಡಿರುವ ಬಗ್ಗೆ ಕೇಳಿದಾಗ, "ಆಯೋಗಕ್ಕೆ ಮಾಹಿತಿ ಕೇಳಿ ಬರೆದಿರುವ ಪತ್ರವನ್ನು ಬಿಡುಗಡೆ ಮಾಡಲಾಗಿದೆ. ಇದಕ್ಕಿಂತ ಸಾಕ್ಷಿ ಇನ್ನೇನು ಬೇಕು?" ಎಂದು ಪ್ರಶ್ನಿಸಿದರು. ಬಿಹಾರ ಮಾದರಿಯಲ್ಲಿ ರಾಜ್ಯದಲ್ಲೂ ಮತದಾರರ ಪಟ್ಟಿ ಪರಿಷ್ಕರಣೆ ಬಗ್ಗೆ ಕೇಳಿದಾಗ, "ಮೊದಲು ಅವರು ತನಿಖೆಗೆ ಸಹಕಾರ ನೀಡಿ ಅಗತ್ಯ ಮಾಹಿತಿ ಒದಗಿಸಲಿ. ತನಿಖೆ ಬಳಿಕ ತಪ್ಪು ಯಾರು ಮಾಡಿದ್ದಾರೆ ಎಂಬುದು ಬಹಿರಂಗವಾಗಲಿ" ಎಂದು ತಿಳಿಸಿದರು.

## ಭಾರಿ ಮಳೆಗೆ ಕಟ್ಟಡ ಕುಸಿತ: ಕನಿಷ್ಠ 12 ಮಂದಿ ನಾಪತ್ತೆ

**ಚಮೋಲಿ:** ಭಾರಿ ಮಳೆಯಿಂದಾಗಿ ಹಲವು ಕಟ್ಟಡಗಳು ಕುಸಿದು, ಕನಿಷ್ಠ 12 ಮಂದಿ ನಾಪತ್ತೆಯಾಗಿರುವ ಘಟನೆ ಗುರುವಾರ ಬೆಳಗ್ಗೆ ಉತ್ತರಾಖಂಡದ ಚಮೋಲಿ ಜಿಲ್ಲೆಯ ನಂದಾನಗರದಲ್ಲಿ ನಡೆದಿದೆ. ಇದರ ಬೆನ್ನಿಗೇ ಜಿಲ್ಲಾಡಳಿತವು ರಕ್ಷಣಾ ಹಾಗೂ ಶೋಧ ಕಾರ್ಯಾಚರಣೆಗೆ ಚಾಲನೆ ನೀಡಿದೆ. ಉತ್ತರಾಖಂಡದ ಡೆಹ್ರಾಡೂನ್ ಹಾಗೂ ಅಕ್ಕಪಕ್ಕದ ಜಿಲ್ಲೆಗಳಲ್ಲಿ ಸಂಭವಿಸಿದ ಮೇಘ ಸ್ಫೋಟದಲ್ಲಿ 23 ಮಂದಿ ಮೃತಪಟ್ಟ ನಂತರ, ಈ ಘಟನೆ ನಡೆದಿದೆ. ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಜಿಲ್ಲಾಡಳಿತ ಹಾಗೂ ರಕ್ಷಣಾ ತಂಡಗಳು, ನಾಪತ್ತೆಯಾಗಿರುವವರಿಗಾಗಿ ಶೋಧ ಕಾರ್ಯಾಚರಣೆ ಪ್ರಾರಂಭಿಸಿವೆ. ರಾಜ್ಯ ವಿಪತ್ತು ನಿರ್ವಹಣಾ ಪಡೆಯು ನಂದ್ ಪ್ರಯಾಗ್ ಅನ್ನು ತಲುಪಿದ್ದು, ಇಲ್ಲಿ ಕಟ್ಟಡಗಳ ಅವಶೇಷಗಳಿಂದಾಗಿ ರಸ್ತೆ ಮುಚ್ಚಿಹೋಗಿದೆ. ರಕ್ಷಣಾ ಕಾರ್ಯಾಚರಣೆಯಲ್ಲಿ ಪಾಲ್ಗೊಳ್ಳಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯೂ ತೆರಳಿದೆ.

## ಹೊಸ ಜಿಎಸ್‌ಟಿಯಿಂದ ವಿದ್ಯುತ್ ವೆಚ್ಚ ಉಳಿಕೆ

**ನವದೆಹಲಿ:** ಹೊಸ ಜಿಎಸ್‌ಟಿಯಿಂದ ಡಿಸ್ಕಾಂಗಳ ವಿದ್ಯುತ್ ಖರೀದಿ ಹೊರೆ ತಗ್ಗಿಸಲಿದ್ದು, ದೇಶಾದ್ಯಂತ ವಾರ್ಷಿಕ 2-3 ಸಾವಿರ ಕೋಟಿ ರೂ. ವಿದ್ಯುತ್ ಖರೀದಿ ವೆಚ್ಚ ಉಳಿತಾಯವಾಗಲಿದೆ. ಅಲ್ಲದೇ, ಪಿಎಂ ಸೂರ್ಯಘರ್ ಮತ್ತು ಪಿಎಂ ಕುಸುಮ್ ಘಟಕಗಳ ವೆಚ್ಚವೂ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಲಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸ ಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಜಿಎಸ್‌ಟಿ 2ರಲ್ಲಿ ನವೀಕರಿಸಬಹುದಾದ ಇಂಧನ ಸಾಧನ-ಸಲಕರಣೆಗಳ ಮೇಲಿನ ತೆರಿಗೆಯನ್ನು ಶೇ.12ರಿಂದ ಶೇ.5ಕ್ಕೆ ಇಳಿಸಲಾಗಿದ್ದು, ಇದು ಭಾರತದ ಶುದ್ಧ ಇಂಧನ ಪರಿವರ್ತನಾ ಗುರಿಯ ಮತ್ತಷ್ಟು ವೇಗಕ್ಕೆ ಮತ್ತು ಅತ್ಯಂತ ಕಡಿಮೆ ವಿದ್ಯುತ್ ಉತ್ಪಾದನಾ ವೆಚ್ಚಕ್ಕೆ ನಾಂದಿ ಹಾಡಲಿದೆ. ಶುದ್ಧ ಇಂಧನ ಯೋಜನೆಗಳ ವೆಚ್ಚ ಸಹ ಕಡಿಮೆಯಾಗುತ್ತದೆ. ಮನೆಗಳು, ರೈತರು, ಕೈಗಾರಿಕೆ ಮತ್ತು ಡೆವಲಪರ್‌ಗಳಿಗೆ ಇದರ ನೇರ ಪ್ರಯೋಜನವಾಗುತ್ತದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪಿಎಂ ಸೂರ್ಯಘರ್ ಅಗ್ಗ: ಪಿಎಂ ಸೂರ್ಯ ಘರ್ ಯೋಜನೆಯಡಿ ಸೋಲಾರ್ ಮೇಲ್ಛಾವಣಿ 3 ಕಿಲೋವ್ಯಾಟ್ ಘಟಕ ಅಳವಡಿಕೆ 9,000ರೂ.ನಿಂದ 10,500 ರೂ.ವರೆಗೆ ಅಗ್ಗವಾಗಲಿದೆ. ಇದು ಲಕ್ಷಾಂತರ ಕುಟುಂಬಗಳು ಸೌರಶಕ್ತಿ ಅಳವಡಿಸಿಕೊಳ್ಳುವುದನ್ನು ಉತ್ತೇಜಿಸಲಿದೆ. ಅಲ್ಲದೇ, ವಿದ್ಯುತ್ ಬಳಕೆಯನ್ನೂ ಹೆಚ್ಚಿಸಲಿದೆ ಎಂದು ಅವರು ಹೇಳಿದ್ದಾರೆ. ಪಿಎಂ-ಕುಸುಮ್ ಅಡಿ ರೈತರು ಸುಮಾರು 2.5 ಲಕ್ಷ ರೂ. ವೆಚ್ಚದ 5 ಹೆಚ್.ಪಿ. ಸೌರ ಪಂಪ್ ಅಳವಡಿಸಿಕೊಳ್ಳುವುದಾದರೆ ಸುಮಾರು 17,500 ರೂ. ಕಡಿಮೆಯಾಗಲಿದೆ. ಈ ಯೋಜನೆಯಡಿ ರೈತರು ಸಹ ಗಣನೀಯವಾಗಿ ಪ್ರಯೋಜನ ಪಡೆಯುತ್ತಾರೆ. ದೇಶದಲ್ಲಿ 10 ಲಕ್ಷ ಸೌರ ಪಂಪ್‌ಗಳ ಪ್ರಮಾಣದಲ್ಲಿ ಒಟ್ಟಾರೆ 1,750 ಕೋಟಿ ರೂ.ಉಳಿಸಬಹುದು ಎಂದು ಅವರು ತಿಳಿಸಿದ್ದಾರೆ.



**ಉದ್ಯೋಗ ಸೃಜನೆ:** ಮಾಡ್ಯೂಲ್ ಮತ್ತು ಘಟಕ ವೆಚ್ಚದಲ್ಲಿ ಶೇ.3ರಿಂದ 4ರಷ್ಟು ಕಡಿಮೆ ಮಾಡುವುದು ಹಾಗೂ ಆರ್‌ಇ ಸಲಕರಣೆಗಳ ಉತ್ಪಾದನೆ ಹೆಚ್ಚಿಸುವುದು ಇದರ ಸದುದ್ದೇಶವಾಗಿದೆ. ಈ ಮಟ್ಟದ ಜಿಎಸ್‌ಟಿ ಸುಧಾರಣೆಯಿಂದ ನವೀಕರಿಸಬಹುದಾದ ಇಂಧನ ವಲಯದಲ್ಲಿ ಮುಂದಿನ ದಶಕದಲ್ಲಿ ಸರಿ ಸುಮಾರು 5ರಿಂದ 7 ಲಕ್ಷ ಹಸಿರು ಉದ್ಯೋಗಗಳು ಸೃಜನೆಯಾಗಲಿವೆ ಎಂದಿದ್ದಾರೆ.

ಸಾಮಾನ್ಯವಾಗಿ ಪ್ರತಿ ಮೆಗಾವ್ಯಾಟ್ ವಿದ್ಯುತ್ ಘಟಕಕ್ಕೆ ಸುಮಾರು 3.5 -4 ಕೋಟಿ ರೂ.ಮೊತ್ತದ ಅವಶ್ಯಕತೆ ಇರುತ್ತದೆ. ಈಗ ಸೌರ ಯೋಜನೆ ಬಂಡವಾಳ ವೆಚ್ಚವು ಪ್ರತಿ ಮೆಗಾವ್ಯಾಟ್‌ಗೆ 2025 ಲಕ್ಷ ರೂ.ಉಳಿತಾಯವಾಗಲಿದೆ. 500 ಮೆಗಾವ್ಯಾಟ್ ಸೌರ ಪಾರ್ಕ್‌ನ ಪ್ರಮಾಣದಲ್ಲಿ ಇದು 100 ಕೋಟಿ ರೂ.ಗಿಂತ ಹೆಚ್ಚಿನ ಯೋಜನಾ ವೆಚ್ಚವನ್ನು ಉಳಿಸುತ್ತದೆ ಎಂದು ಸಚಿವ ಜೋಶಿ ತಿಳಿಸಿದ್ದಾರೆ.

## ಮತಗಳ್ಳತನ ವಿರುದ್ಧದ ಹೋರಾಟದಿಂದ ಹಿಂದೆ ಸರಿಯುವ ಮಾತಿಲ್ಲ: ಮುಖ್ಯಮಂತ್ರಿ

**ಬೆಂಗಳೂರು:** 'ಇದು ನಾಡಿನ ಪ್ರತಿ ಮತದಾರನ, ಯುವಜನರ ಮತದಾನದ ಹಕ್ಕಿನ ಪಾವಿತ್ರ್ಯತೆ ಮತ್ತು ಭವಿಷ್ಯದ ಪ್ರಶ್ನೆ. ಮತಗಳ್ಳತನ ಯಶಸ್ವಿಯಾಗಲು ಕಾಂಗ್ರೆಸ್ ಪಕ್ಷ ಬಿಡುವುದಿಲ್ಲ. ಪಾರದರ್ಶಕ, ನಿಷ್ಪಕ್ಷಪಾತ ಚುನಾವಣೆ ಪ್ರಕ್ರಿಯೆಯ ಹೊಣೆಗಾರಿಕೆಯನ್ನು ಸಂಬಂಧಪಟ್ಟವರು ವಹಿಸಿಕೊಳ್ಳುವವರೆಗೆ ಮತ್ತು ದೇಶದ ಪ್ರಜಾಪ್ರಭುತ್ವಕ್ಕೆ ರಕ್ಷಣೆ ದೊರೆಯುವ ವರೆಗೆ ನಾವು ನಮ್ಮ ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಪ್ರಕಟಿಸಿದ್ದಾರೆ.

ಗುರುವಾರ ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಅವರು ನಮ್ಮ ನಾಯಕರಾದ ರಾಹುಲ್ ಗಾಂಧಿ ಇಂದು ಬಯಲು ಮಾಡಿರುವ ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದ ಸತ್ಯಾಂಶಗಳು ಆಘಾತಕಾರಿಯಾಗಿವೆ. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೇಗೆ ಮತಗಳ್ಳತನದ ಮೂಲಕ ವ್ಯವಸ್ಥಿತವಾಗಿ ಬುಡಮೇಲು ಗೊಳಿಸಲಾಗುತ್ತಿದೆ ಎಂಬ ಕರಾಳ ಸತ್ಯವನ್ನು ಮತ್ತೊಮ್ಮೆ ರಾಹುಲ್ ಗಾಂಧಿ ದೇಶದ ಜನರೆದುರು ತೆರೆದಿಟ್ಟಿದ್ದಾರೆ. ಕಲಬುರಗಿ ಜಿಲ್ಲೆಯ ಆಳಂದ ಕ್ಷೇತ್ರದ ಪ್ರಕರಣವು ಕೇವಲ ಈ ಒಂದು ಕ್ಷೇತ್ರಕ್ಕೆ ಸೀಮಿತವಾದುದ್ದಲ್ಲ, ಇದು ದೇಶಾದ್ಯಂತ ವ್ಯಾಪಿಸಿರುವ ಬೃಹತ್ ಚುನಾವಣಾ ಅಕ್ರಮ ಜಾಲದ ಒಂದು ಕೊಂಡಿಯಷ್ಟೇ. ಇದೇ ಮಾದರಿಯಲ್ಲಿ ಇಡೀ ದೇಶದಲ್ಲಿ ಚುನಾವಣಾ ಪ್ರಕ್ರಿಯೆಯ ದುರುಪಯೋಗದ ಮೂಲಕ ಭಾರತೀಯರನ್ನು ಅವರ ಮತದಾನದ ಹಕ್ಕಿನಿಂದ ವಂಚಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

'2022ರ ಫೆಬ್ರವರಿಯಿಂದ 2023ರ ಫೆಬ್ರವರಿ ವರೆಗೆ ಆಳಂದ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ಅಪ್ಲಿಕೇಷನ್ ಮೂಲಕ ಫಾರ್ಮ್ 7ರ ಅಡಿ ಮತದಾರರ ಹೆಸರುಗಳನ್ನು ಅಳಿಸಿಹಾಕುವಂತೆ ಒಟ್ಟು 6,018 ಅರ್ಜಿಗಳು ಸಲ್ಲಿಕೆಯಾಗಿದ್ದವು. ಈ ಪೈಕಿ ಕೇವಲ 24 ಅರ್ಜಿಗಳು ಅಸಲಿಯಾಗಿದ್ದು, ಉಳಿದ 5,994 ಅರ್ಜಿಗಳು ನಕಲಿ ಎಂಬುದು ತನಿಖೆಯ ಮೂಲಕ ತಿಳಿದು ಬಂದಿದೆ. ಮತದಾರರ ಮಾಹಿತಿ ಕಳವು, ನಕಲಿ ಲಾಗಿನ್‌ಗಳು ಹಾಗೂ ಹೊರರಾಜ್ಯದ ಮೊಬೈಲ್ ಸಂಖ್ಯೆಗಳ ಮೂಲಕ ಬೇನಾಮಿ ಅರ್ಜಿಗಳ ಸಲ್ಲಿಕೆ ಮಾಡಲಾಗಿದೆ. ಕುಟುಂಬವೊಂದರ ಅರಿವಿಗೆ ಬಾರದೆಯೇ ಇಡೀ ಕುಟುಂಬದ ಮತದಾರರ ಹೆಸರನ್ನು ಪಟ್ಟಿಯಿಂದ ಕೈಬಿಡುವಂತೆ ಅರ್ಜಿ ಸಲ್ಲಿಕೆಯಾಗಿತ್ತು. ಈ ಬಗ್ಗೆ ದೂರು ದಾಖಲಾಗಿದ್ದು, ಸಿಐಡಿ ತನಿಖೆ ನಡೆಸುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಚುನಾವಣಾ ಆಯೋಗವು ಈ ಮಾಹಿತಿಯನ್ನು ಒದಗಿಸಲು ನಿರಾಕರಿಸುತ್ತಾ ಬಂದಿದೆ ಎಂದು ಸಿದ್ದರಾಮಯ್ಯ ಉಲ್ಲೇಖಿಸಿದ್ದಾರೆ.



## ೯ಜನ ಐಎಎಸ್ ಅಧಿಕಾರಿಗಳ ವರ್ಗಾವಣೆ ಮಾಡಿ ಆದೇಶ

**ಬೆಂಗಳೂರು:** ರಾಜ್ಯ ಸರಕಾರವು 9 ಮಂದಿ ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಗುರುವಾರ ಆದೇಶ ಹೊರಡಿಸಿದೆ.

ಸಕಾಲ ಯೋಜನೆಯ ಹೆಚ್ಚುವರಿ ಯೋಜನಾ ನಿರ್ದೇಶಕಿ ಪಲ್ಲವಿ ಆಕೃತಿ ಅವರನ್ನು ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿಯ ವಿಶೇಷ ಅಧಿಕಾರಿಯಾಗಿ ವರ್ಗಾವಣೆ ಮಾಡಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ನಿರ್ದೇಶಕ ಗಿರೀಶ್ ಆರ್. ಅವರನ್ನು ರಾಷ್ಟ್ರೀಯ ತೋಟಗಾರಿಕೆ ಯೋಜನೆ ಹಾಗೂ ತೋಟಗಾರಿಕೆ ಇಲಾಖೆಯ ನಿರ್ದೇಶಕ ಹಾಗೂ ಸ್ಥಳ ನಿಯುಕ್ತಿಯ ನಿರೀಕ್ಷೆಯಲ್ಲಿದ್ದ ಗಂಗೂಬಾಯಿ ರಮೇಶ್ ಮಣಕರ್ ಅವರನ್ನು ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿಯ ಒಂಬುಡ್ಸ್ ಮನ್‌ರನ್ನಾಗಿ ವರ್ಗಾವಣೆ ಮಾಡಲಾಗಿದೆ.

ಕರ್ನಾಟಕ ಪಬ್ಲಿಕ್ ಲ್ಯಾಂಡ್ಸ್ ಕಾರ್ಪೋರೇಷನ್‌ನ ವ್ಯವಸ್ಥಾಪಕ ನಿರ್ದೇಶಕ ವಸಂತ ಕುಮಾರ್ ಪಿ. ಅವರನ್ನು ಕೃಷಿ ಇಲಾಖೆಯ ಜಂಟಿ ಕಾರ್ಯದರ್ಶಿ, ಸ್ಥಳ ನಿಯುಕ್ತಿಯ ನಿರೀಕ್ಷೆಯಲ್ಲಿದ್ದ ರಮ್ಯಾ ಎಸ್. ಅವರನ್ನು ರಾಜ್ಯ ವಿದ್ಯುತ್ ಕಾರ್ಖಾನೆ ನಿಗಮದ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ವರ್ಗಾವಣೆ ಮಾಡಲಾಗಿದೆ.

ಸ್ಥಳ ನಿಯುಕ್ತಿಯ ನಿರೀಕ್ಷೆಯಲ್ಲಿದ್ದ ಶಿವಪ್ರಸಾದ್ ಪಿ.ಆರ್. ಅವರನ್ನು ಮೂಲಸೌಕರ್ಯ ಅಭಿವೃದ್ಧಿ ಇಲಾಖೆಯ ಜಂಟಿ ಕಾರ್ಯದರ್ಶಿ, ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿಯ ವಿಶೇಷ ಅಧಿಕಾರಿಯಾಗಿ ಪೂವಿತಾ ಎಸ್. ಅವರನ್ನು ರಾಜ್ಯ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಜಂಟಿ ವ್ಯವಸ್ಥಾಪಕ ನಿರ್ದೇಶಕಿಯನ್ನಾಗಿ ವರ್ಗಾವಣೆ ಮಾಡಲಾಗಿದೆ. ಅಲ್ಲದೇ, ಎಚ್.ಆರ್.ಎಂ.ಎಸ್ 2.0 ಹಣಕಾಸು ಇಲಾಖೆಯ ಉಪ ಯೋಜನಾ ನಿರ್ದೇಶಕಿಯ ಹೆಚ್ಚುವರಿ ಹೊಣೆಗಾರಿಕೆ ವಹಿಸಲಾಗಿದೆ.

ಸ್ಥಳ ನಿಯುಕ್ತಿಯ ನಿರೀಕ್ಷೆಯಲ್ಲಿದ್ದ ಲಿಂಗಮೂರ್ತಿ ಜಿ. ಅವರನ್ನು ಕರ್ನಾಟಕ ಪಬ್ಲಿಕ್ ಲ್ಯಾಂಡ್ಸ್ ಕಾರ್ಪೋರೇಷನ್‌ನ ವ್ಯವಸ್ಥಾಪಕ ನಿರ್ದೇಶಕ ಹಾಗೂ ರಾಜ್ಯ ವಿತ್ತೀಯ ಕಾರ್ಯನೀತಿ ಸಮಸ್ಥೆಯ ಹೆಚ್ಚುವರಿ ನಿರ್ದೇಶಕ ರಂಗಪ್ಪ ಎಸ್. ಅವರನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ನಿರ್ದೇಶಕರನ್ನಾಗಿ ವರ್ಗಾವಣೆ ಮಾಡಲಾಗಿದೆ.

### ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

# ಧಾರವಾಡದಿಂದ ವಿಧಾನಸೌಧದವರೆಗೆ ಬೈಕ್ ಜಾಥಾ




**ಧಾರವಾಡ** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಕರ್ನಾಟಕ ಕಾಲೇಜು ಮೈದಾನದಿಂದ ಸೆಪ್ಟೆಂಬರ 14, 2025 ರಂದು ಜಿಲ್ಲಾಡಳಿತ ಜಿಲ್ಲಾ ಪಂಚಾಯಿತಿ ಕ್ರೀಡಾ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಯು ಆಯೋಜಿಸಿದ್ದ ಬೈಕ್ ರ್‍ಯಾಲಿ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಉದ್ಘಾಟಿಸಿದ್ದರು.

ವಿಜೇತಕುಮಾರ ಹೊಸಮತ ಅವರ ನಾಯಕತ್ವದಲ್ಲಿ 10 ಬೈಕ್ ರೈಡರ್‌ಗಳು ಧಾರವಾಡದಿಂದ ವಿಧಾನಸೌಧದವರೆಗೆ ಬೈಕ್ ಮುಖಾಂತರ ಜಾಥಾ ಹಮ್ಮಿಕೊಂಡಿದ್ದರು.

ಸೆ. 14 ರಂದು ಧಾರವಾಡ ನಿರ್ಗಮಿಸಿ, ಸೆ.14 ರಂದು ರಾತ್ರಿ ಬೆಂಗಳೂರು ತಲುಪಿ 15 ರಂದು ವಿಧಾನಸೌಧದ ಮುಂದೆ ನಡೆದ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸೆ.16 ರಂದು ಧಾರವಾಡಕ್ಕೆ ಮರಳಿದ್ದಾರೆ.

ಸೆ.14 ರಂದು ನಡೆದ ಬಿಳ್ಕೊಡುಗೆ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಶುಭ ಪಿ., ಕ್ರೀಡಾ ಇಲಾಖೆಯ ಪ್ರಭಾರ ಸಹಾಯಕ ನಿರ್ದೇಶಕ ಸದಾನಂದ ಅಮರಾಪುರ ಅವರು ಉಪಸಿತರಿದ್ದರು.

# ಸಾಲ ಮರುಪಾವತಿಯಿಂದ ಸಂಘದ ಬೆಳವಣಿಗೆ ಸಾಧ್ಯ




**ಮುದ್ದೇಬಿಹಾಳ** ಶ್ರೀ ಬಸವಜ್ಯೋತಿ ಪತ್ತಿನ ಸಹಕಾರಿ ಸಂಘವು 2008 ರಲ್ಲಿ 442 ಸದಸ್ಯರು ಈಗ 1115 ಸದಸ್ಯ ಶೇರು ಬಂಡವಾಳ ನಿಧಿಗಳಿಂದ ಈ ವರ್ಷ 10 ಲಕ್ಷ ರೂ ನಿವ್ವಳ ಲಾಭ ಗಳಿಸಿದೆ ಎಂದು ಶ್ರೀ ಬಸವಜ್ಯೋತಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಬಿ.ಎಂ ಇಸ್ಲಾಂಪೂರ ಹೇಳಿದರು.

ಪಟ್ಟಣದ ಶ್ರೀ ಬಸವಜ್ಯೋತಿ ಪತ್ತಿನ ಸಹಕಾರಿ ಸಂಘದ 17 ನೇ ವಾರ್ಷಿಕ ಸರ್ವ ಸದಸ್ಯರ ಮಹಾಸಭೆ ಗುರುವಾರ ಜರುಗಿತು ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದ ಕಳೆದ ವರ್ಷದಿಂದ ಸದಸ್ಯರ ಖಾತೆಗೆ ಡಿವಿಡೆಂಡ್ ಹಾಕಲಾಗಿದೆ. ಸಕಕಾಲಕ್ಕೆ ಸಾಲ ಮರುಪಾವತಿಯಿಂದ ಸಂಘ ಬೆಳವಣಿಗೆ ಸಾಧ್ಯ ಸಾಲಕ್ಕೆ ಜಾಮೀನು ಆಗುವವರು ಸಹ ಸಾಲಗಾರನಷ್ಟೇ ಜವಾಬ್ದಾರಿ ಆಗಿರುತ್ತಾರೆ ಪ್ರಾಮಾಣಿಕತೆ ಸಂಘ ಒತ್ತು ನೀಡುತ್ತದೆ. ಸಂಘದ ಶೇರುದಾರರು ಸಾಲವನ್ನು ತೆಗೆದುಕೊಂಡು ಸಾಲವನ್ನು ಸರಿಯಾದ ಸಮಯಕ್ಕೆ ಕಟ್ಟಿದರೆ ಬೆಳವಣಿಗೆ ಸಹಕಾರವಾಗುತ್ತೇದೆ ಎಂದರು. ಈ ಇದೇ ವ್ಯವಸ್ಥಾಪಕ ಎಸ್ ಎಸ್ ಮಾಗಿ ಸಭೆಯಲ್ಲಿ ಚರ್ಚಿಸತಕ್ಕ ವಿಷಯಗಳು ,ವಾರ್ಷಿಕ ವರದಿವಾಚಿಸಿ ಶೇರು ಬಂಡವಾಳ, ಸಂಘಧ ಆರ್ಥಿಕ ನೋಟ, ನಿಧಿಗಳ ವಿವರ ವಿವರಿಸಿದರು. ನಿರ್ದೇಶಕ ಸಿ.ಎಂ ಹಾವರಗಿ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಈ ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಶ್ರೀಶೈಲ ಕಡಿ,ನಿರ್ದೇಶಕರಾದ ಎ ಎಸ್ ಕೋಟಿ, ಬಸವರಾಜ ಅಮರಾವತಿ, ಗುರುನಾಥ ಕಡಕೋಳ, ಚಂದಪ್ಪ ಬೇನಾಳ, ಬಸಪ್ಪ ಕಲ್ಲೂರ, ಗಂಗೂಬಾಯಿ ಉಪ್ಪಲದಿನ್ನಿ, ಸುವರ್ಣ ಚಿತ್ತವಾಡಗಿ, ಮಲಕವ್ವ ಕೋಲಕಾರ, ಮಹಾಂತೇಶ ಗಂಜಿಹಾಳ, ಡಾ.ಆನಂದ ಚೌದರಿ ಸಂಗಮೇಶ ಹೊನ್ನಳ್ಳಿ ಹಾಗೂ ಗಣ್ಯರಾದ ತಂಗಡಗಿ ಪಿಕೆಪಿಎಸ್ ಅಧ್ಯಕ್ಷ ಶ್ರೀಶೈಲ ಮರೋಳ, ಗುತ್ತಿಗೆದಾರ ರಾಜುಗೌಡ ಕೊಂಗಿ, ಸಿಬ್ಬಂದಿಗಳಾದ ವಿರೇಶ ಶಿಕಳವಾಡಿಮಠ, ಯಲ್ಲಾಲಿಂಗ ಹುಬ್ಬಳ್ಳಿ ಶಿವಶರಣ ಶಹಾಬಾದಿ ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು.

# ಸಂಭ್ರಮದ ವಿಶ್ವಕರ್ಮ ಜಯಂತ್ಯೋತ್ಸವ



**ಸಮೀಪದ ಮುನವಳ್ಳಿ ಪಟ್ಟಣದ ಶ್ರೀ ಪಂಚಲಿಂಗೇಶ್ವರ ಮಹಾದ್ವಾರ ಬಳಿ ವಿಶ್ವಕರ್ಮ ಜಯಂತಿಯನ್ನು ಶ್ರೀ ಮುರುಘೇಂದ್ರ ಸ್ವಾಮೀಜಿಯವರು ಉದ್ಘಾಟಿಸಿದರು.**

**ಯರಗಟ್ಟಿ:** ಸಮೀಪದ ಮುನವಳ್ಳಿ ಪಟ್ಟಣದ ವಿಶ್ವಕರ್ಮ ಸಮಾಜದ ವತಿಯಿಂದ ವಿಶ್ವಕರ್ಮ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ಶ್ರೀ ಪಂಚಲಿಂಗೇಶ್ವರ ದೇವಸ್ಥಾನದಿಂದ ಪ್ರಾರಂಭ ವಾದ ಭವ್ಯ ಮೆರವಣಿಗೆಯ ಉದ್ಘಾಟನೆಯನ್ನು ಶ್ರೀ ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಸ್ವಾಮೀಜಿ ನೆರವೇರಿಸಿ ಮಾತನಾಡುತ್ತ ಎಲ್ಲ ಜನರಿಗೂ, ಎಲ್ಲ ವರ್ಗದವರಿಗೂ ವಿಶ್ವಕರ್ಮ ಸಮಾಜದ ಕೊಡುಗೆ ಅಪಾರವಾಗಿದ್ದು, ಸರಕಾರ ಹಾಗೂ ಜನತೆ ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಸೂಕ್ತ ಸ್ಥಾನಮಾನ ನೀಡಬೇಕೆಂದರು.

ಮುಖಂಡರಾದ ವಿರೂಪಾಕ್ಷ ಮಾಮನಿ, ಅಂಬರೀಷ ಯಲಿಗಾರ, ಪಂಚನಗೌಡ ದ್ಯಾಮನಗೌಡರ, ರಮೇಶ ಗೋಮಾಡಿ, ಪುರಸಭೆ ಅಧ್ಯಕ್ಷ ಸಿ.ಬಿ.ಬಾಳಿ, ಸವದತ್ತಿ ಎ.ಪಿ.ಎಂ.ಸಿ. ಅಧ್ಯಕ್ಷ ಚಂದ್ರು ಪೂಜೇರ(ಜಂಬ್ರಿ), ಸುಭಾಸ ಗೀದಿಗೌಡ್ರ, ಶ್ರೀಕಾಂತ ಮಲಗೌಡ್ರ, ಗುರುಶಾಂತ ಚಂದರಗಿ, ಡಿ.ಡಿ.ಕಿನ್ನೂರಿ, ಚಂದ್ರು ಮುಚ್ಚಂಡಿ,

ಶ್ರೀ ವಿಶ್ವಕರ್ಮರ ಭಾವಚಿತ್ರದ ಭವ್ಯ ಮೆರವಣಿಗೆ ಸಕಲ ಮಂಗಲವಾದ್ಯ ವೈಭವಗಳೊಂದಿಗೆ, ಜನಪದ ಮಜಲುಗಳೊಂದಿಗೆ, ಆರತಿ ಕುಂಭ ಹೊತ್ತ ಸುಮಂಗಲೆಯರೊಂದಿಗೆ ಸಂಭ್ರಮ ಹಾಗೂ ಸಡಗರದಿಂದ ಊರಿನ ಪ್ರಮುಖ ಬೀದಿಗಳಲ್ಲಿ ಸಾಗಿತು. ಶ್ರೀ ಪಂಚಲಿಂಗೇಶ್ವರ ದೇವಸ್ಥಾನದಿಂದ ಹಿರೇ ಅಗಸಿ, ಬಜಾರ ರಸ್ತೆ, ಶ್ರೀ ದಾನಮ್ಮ ಗುಡಿ ರಸ್ತೆ, ಸೂಲಕಟ್ಟಿ ಅಗಸಿ ಶ್ರೀ ಕಾಳಿಕಾದೇವಿ ದೇವಸ್ಥಾನ ತಲುಪಿತು. ನಂತರ ವೇದಿಕೆ ಕಾರ್ಯಕ್ರಮ ಜರುಗಿತು. ವಿಶ್ವಕರ್ಮ ಯುವಕ ಮಂಡಳ, ಶ್ರೀ ಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಹಾಗೂ ಗಾಯತ್ರಿ ಮಹಿಳಾ ಮಂಡಳ ಸದಸ್ಯರು ಸೇರಿದಂತೆ ಗಣ್ಯರು ಸೇರಿದಂತೆ ಇತರರು ಇದ್ದರು.

# ಬರುವ ವರ್ಷದಲ್ಲಿ ಗೊಬ್ಬರ ಕೊರತೆ ನಿಗುಸುತ್ತೇವೆ

**ಮುದ್ದೇಬಿಹಾಳ:** ಈ ವರ್ಷ ಸಂಘದಲ್ಲಿ ಮುದ್ದೇಬಿಹಾಳ ಮುಖ್ಯ ಕಾರ್ಯಾಲಯ ಹಾಗೂ ತಾಳಿಕೋಟಿ ನಾಲತವಾಡ ಶಾಖೆಯ ವಾರ್ಷಿಕ ಲಾಭ ಶಿಲ್ಕು 6.71.500 ರೂ ಇರುತ್ತದೆ ಎಂದು ಟಿಎಪಿಸಿಎಂ ಎಸ್ ಸಂಘದ ಅಧ್ಯಕ್ಷ ಎಂ.ಎಸ್ ಮೇಟಿ ಹೇಳಿದರು. ಮುದ್ದೇಬಿಹಾಳ ತಾಲೂಕ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘದ ಸನ್ 2024 –25 ನೇ ಸಾಲಿನ 68 ನೇ ವಾರ್ಷಿಕ ಮಹಾಸಭೆ ಗುರುವಾರ ಜರುಗಿತು.

ಈ ಸಭೆಯಲ್ಲಿ ಅವರ ಮಾತನಾಡಿದ ಕಳೆದ 68 ನೇ ವರ್ಷಗಳಿಂದ ಸಂಘವು ರೈತರು ಬೆಳೆದ ಒಕ್ಕಲುತನ ಹುಟ್ಟುವಳಿ ಮಾರಾಟ ಮಾಡಿಸುವಲ್ಲಿ ಹೆಚ್ಚಿನ ಕಾಳಜಿ ವಹಿಸಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಇದೇ ವೇಳೆ ಸಹಕಾರಿ ಅಭಿವೃದ್ಧಿ ಅಧಿಕಾರಿ ವಿ.ಎಸ್ ಉತ್ನಾಳ, ಸಹಾಯಕ ವ್ಯವಸ್ಥಾಪಕ ಜಿ.ಎಸ್ ಕೋನರೆಡ್ಡಿ ವಾರ್ಷಿಕ ವರದಿ, ಸಂಯುಕ್ತ ಲಾಭ ಹಾನಿ, ಸನ್ 2024/25 ನೇ ಸಾಲಿನ ಬಜೆಟ್ ಹೆ ಹೆಚ್ಚಾದ ಖರ್ಚು ಮಂಜೂರಿ, ಆಯ ವ್ಯಯ ಅಂದಾಜು ಪತ್ರಿಕೆ ವರದಿ ವಾಚಿಸಿದರು. ಈ ವರ್ಷದ ರೈತರಿಗೆ ಗೊಬ್ಬರದ ಕೊರತೆ ಉಂಟಾಗಿದೆ ಎಂದು ಸಂಘದ ಸದಸ್ಯರು ಹೇಳಿದಾಗ ನಿರ್ದೇಶಕ ಎಂ.ಎಸ್ ಸರಶೆಟ್ಟಿ ಫೆಡರೇಶನ್ ನಿಂದ ಸಮರ್ಪಕವಾಗಿ ಗೊಬ್ಬರ ಪೂರೈಕೆ ಆಗಿಲ್ಲ ಬರುವ ವರ್ಷದಲ್ಲಿ ಗೊಬ್ಬರ ಕೊರತೆ ನಿಗುಸುತ್ತೇವೆ ಈಗಾಗಲೇ ಸಂಬಂಧಿಸಿದ ಇಲಾಖೆಯ ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದರು.

ಈ ಸಂದರ್ಭದಲ್ಲಿ ಟಿಎಪಿಸಿಎಂಎಸ್ ಉಪಾಧ್ಯಕ್ಷ ಜಿ.ಬಿ ಹತ್ತೂರ, ನಿರ್ದೇಶಕರಾದ ಎಸ್ ಜಿ ಹಿಪ್ಪರಗಿ, ಸಿ.ಎಂ ಸೀತಿಮನಿ, ಪಿ.ಪಿ ಯಾಳವಾರ, ಎಂ ಕೆ ಮುತ್ತಣ್ಣನವರ, ಎಸ್ ಎಸ್ ಮಾಲಗತ್ತಿ, ಸಿ.ಎಸ್ ಲಕ್ಕುಂಡಿ, ಗಣ್ಯರಾದ ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಬಿ ಕೆ ಬಿರಾದಾರ, ಬಸನಗೌಡ ಮೇಟಿ, ಹಂಪಯ್ಯಾ ಹಿರೇಮಠ, ಸೋಮನಗೌಡ ಬಿರಾದಾರ, ಎಸ್ ಎಂ ಗುಡದಿನ್ನಿ ಸೇರಿದಂತೆ ಸಂಘದ ಸದಸ್ಯರು ಸಿಬ್ಬಂದಿಗಳಾದ ಬಿ ಎಂ ಬಿರಾದಾರ, ಎಸ್ ಜಿ ಚಿನಿವಾಲರ, ಎಂ ಎಂ ಪಾಟೀಲ್, ಎಸ್ ಜಿ ಕೂಳ್ಳಿ, ಎಸ್ ಎಂ ಚೌಧರಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.




# ನಾಳೆ ಮುಖ್ಯಮಂತ್ರಿ ಜಿಲ್ಲಾ ಪ್ರವಾಸ

**ಗದಗ:** ರಾಜ್ಯದ ಮಾನ್ಯಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೆಪ್ಟೆಂಬರ್ 20 ರಂದು ಬೆಳಿಗ್ಗೆ 11.10 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.25 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಹೆಲಿಪ್ಯಾಡ್‌ಗೆ ಆಗಮಿಸುವರು. ನಂತರ ನಗರದ ಮುಳಗುಂದ ರಸ್ತೆಯ ಕನಕ ಭವನದ ಶ್ರೀ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಗದಗ ತಾಲೂಕು ಕುರುಬರ ಸಂಘ (ರಿ) ಗದಗ ವತಿಯಿಂದ ಆಯೋಜಿಸಿರುವ " ತಾಲೂಕು ಸಂಘದ ರಜತ ಮಹೋತ್ಸವ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ " ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಸಂಘಜೀವಿ ಶ್ರೀ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 3.30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿ ಆವರಣ ಹೆಲಿಪ್ಯಾಡ್‌ದಿಂದ ಹೆಲಿಕಾಪ್ಟರ್ ಮುಖಾಂತರ ಹುಬ್ಬಳ್ಳಿಗೆ ಪ್ರಯಾಣಿಸಿ ನಂತರ ಬೆಂಗಳೂರಿಗೆ ಹೊರಡುವರು.

# 23ರಂದು ರಾಷ್ಟ್ರೀಯ ಆಯುರ್ವೇದ ದಿನಾಚರಣೆ

**ಕೊಪ್ಪಳ:** 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯ ಅಂಗವಾಗಿ ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಸೆಪ್ಟೆಂಬರ್ 23 ರಂದು ಜನರಿಗಾಗಿ ಮತ್ತು ಜಗತ್ತಿಗಾಗಿ ಆಯುರ್ವೇದ ಎಂಬ ಘೋಷವಾಕ್ಯದೊಂದಿಗೆ ಜಾಗೃತಿ ಜಾಥಾ ಹಾಗೂ ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಆಯುರ್ವೇದ ಜಾಗೃತಿ ಜಾಥಾವು ಅಂದು ಬೆಳಿಗ್ಗೆ 8.30 ಗಂಟೆಗೆ ನಗರದ ಶ್ರೀ ಗವಿಮಠದ ಆವರಣದಿಂದ ಪ್ರಾರಂಭವಾಗಿ ಗಡಿಯಾರ ಕಂಬ, ಅಶೋಕ ವೃತ್ತ ಮೂಲಕ ತಾಲ್ಲೂಕು ಕ್ರೀಡಾಂಗಣದವರೆಗೆ ನಡೆಯಲಿದೆ. ನಂತರ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಜಿಲ್ಲಾ ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಸರ್ವ ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಪರ್ವತಗೌಡ ಬ.ಹಿರೇಗೌಡರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ: ಇಂದು ವಿದ್ಯುತ್ ವ್ಯತ್ಯಯ

**ಕೊಪ್ಪಳ:** ಕೊಪ್ಪಳ ಜೆಸ್ಕಾಂ ಉಪ ವಿಭಾಗ ವ್ಯಾಪ್ತಿಯ 110/11 ಕೆ.ವಿ ಚಿಲಕಮುಖಿ ಸ್ಟೇಷನ್‌ನ ತುರ್ತು ಕಾಮಗಾರಿ ನಡೆಸುತ್ತಿರುವ ಪ್ರಯುಕ್ತ ಸೆಪ್ಟೆಂಬರ್ 19 ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ಚಿಲಕಮುಖಿ ಸ್ಟೇಷನ್‌ಗೆ ಒಳಪಡುವ ವಿವಿಧ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

110/11 ಕೆ.ವಿ ಚಿಲಕಮುಖಿ ಸ್ಟೇಷನ್ ವ್ಯಾಪ್ತಿಯ ಎಫ್–7 ಕೊಡದಾಳ ಎನ್.ಜೆ.ವೈ ಫೀಡರ್‌ಗೆ ಒಳಪಡುವ ಇರಕಲ್‌ಗಡಾ, ಯಲಮಗೇರಾ, ಹನುಮನಹಟ್ಟಿ ಮತ್ತು ವಡ್ಡರಹಟ್ಟಿ ಗ್ರಾಮದ 11 ಕೆವಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು.

ಮೇಲಿನ ಕೆಲಸವು ಬೇಗನೆ ಮುಕ್ತಾಯಗೊಂಡಲ್ಲಿ, ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು. ಆದ್ದರಿಂದ ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕೆಲಸ–ಕಾರ್ಯಗಳನ್ನು ಮಾಡಬಾರದೆಂದು ಈ ಮೂಲಕ ಕೋರಲಾಗಿದೆ. ಒಂದು ವೇಳೆ ವಿದ್ಯುತ್ ಅಫಘಾತ ಸಂಭವಿಸಿದಲ್ಲಿ ಕಂಪನಿಯು ಜವಾಬ್ದಾರರಾಗಿರುವುದಿಲ್ಲ ಎಂದು ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಉಚಿತ ಆರೋಗ್ಯ ತಪಾಸಣಾ ಶಿಬಿರ

**ಬೆಳಗಾವಿ:** ತಾಲೂಕಿನ ಸುಳೇಭಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದ ಸೇವಾ ಪಾಕ್ಷಿಕ ಅಭಿಯಾನ ಹಾಗೂ ವಿಶ್ವ ನಾಯಕ ಜನಪ್ರೀಯ ಪ್ರಧಾನ ಮಂತ್ರಿ ನರೇಂದ್ರ ಮೋದಿ ರವರ 75 ನೇಯ ಜನ್ಮದಿನದ ಅಂಗವಾಗಿ ನಡೆದ ಆರೋಗ್ಯ ತಪಾಸಣಾ ಶಿಬಿರ ಹಾಗೂ ರಕ್ತದಾನ ಶಿಬಿರ ನಡೆಯಿತು ಮಾಜಿ ಸಿ.ಎಂ ಹಾಗೂ ಸಂಸದರಾದ ಜಗದೀಶ್ ಶೆಟ್ಟರ್ ರವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಸುಭಾಷ್ ಪಾಟೀಲ, ಮಾಜಿ ಶಾಸಕರಾದ ಸಂಜಯ ಪಾಟೀಲ, ಮಂಡಳ ಅಧ್ಯಕ್ಷ ಯುವರಾಜ ಜಾಧವ, ಜಿಲ್ಲಾ ಎಸ್.ಸಿ ಮೋರ್ಚಾ ಅಧ್ಯಕ್ಷ ಯಲ್ಲೇಶ ಕೋಲಕಾರ, ಪ್ರಕೋಷ್ಠಗಳ ಜಿಲ್ಲಾ ಸಂಯೋಜಕ ಮಹೇಶ ಮೋಹಿತೆ, ಜಿಲ್ಲಾ ವೈದ್ಯಕೀಯ ಪ್ರಕೋಷ್ಠದ ಸಂಚಾಲಕ ಡಾ. ಗುರು ಕೋತಿನ,ಮನೋಜ ಪಾಟೀಲ,ಅಡಿವೇಶ ಅಂಗಡಿ, ವೀರಭದ್ರ ನೇಸರಗಿ,ರಮೇಶ್ ಸರವದೇ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಬಿಜೆಪಿ ವೈದ್ಯಕೀಯ ಪ್ರಕೋಷ್ಠದ ಜಿಲ್ಲಾ ಸಂಚಾಲಕ ಡಾ.ಗುರು ಕೋತಿನ ಹಾಗೂ ಪ್ರಮುಖರು ಈ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರ ಮಾಡಿ ಮೇಲ್ದರ್ಜೆಗೆ ಏರಿಸಬೇಕು ಇದರಿಂದ ಸಾರ್ವಜನಿಕರಿಗೆ ಅನುಕೂಲ ಆಗುತ್ತದೆ ಎಂದು ಮನವಿ ಕೊಟ್ಟರು ಇದಕ್ಕೆ ಪ್ರತಿಕ್ರಿಯಿಸಿದ ಜಗದೀಶ ಶೆಟ್ಟರ ಆದಷ್ಟು ಬೇಗನೆ ಪ್ರಸ್ತಾವನೆ ಸಲ್ಲಿಸಿ ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೆ ಏರಿಸುವ ಭರವಸೆ ನೀಡಿದರು.

# ಶಿಷ್ಯವೇತನ ಮಂಜೂರಾತಿ ಪತ್ರ ವಿತರಣೆ ಕಾರ್ಯಕ್ರಮ

**ಯರಗಟ್ಟಿ:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ (ರಿ.) ಯರಗಟ್ಟಿ ವತಿಯಿಂದ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರ ವಿತರಣೆ ಕಾರ್ಯಕ್ರಮ ಪಟ್ಟಣದ ಯೋಜನಾ ಕಚೇರಿ ಸಭಾಂಗಣದಲ್ಲಿ ಜರಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಲಯ ಹಿರಿಯರಾದ ಭಾಸ್ಕರ್ ಹಿರೇಮೆತ್ರಿ ವಹಿಸಿದ್ದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿಲ್ಲಾ ನಿರ್ದೇಶಕರಾದ ರವಿಕುಮಾರ ಯೋಜನೆಯು ನಡೆದು ಬಂದ ದಾರಿ, ಪೂಜ್ಯರು ಸಮಾಜಕ್ಕೆ ಕೊಟ್ಟ ಕೊಡುಗೆಗಳು, ಕ್ಷೇತ್ರದಿಂದ ನಡೆಯುವ ಸೇವಾ ಚಟುವಟಿಕೆಗಳು ಬಗ್ಗೆ ಮಾಹಿತಿ ನೀಡಿತ್ತಾ, ಬೆಳಗಾವಿ ಜಿಲ್ಲಾಧ್ಯಂತ 891 ಮಕ್ಕಳಿಗೆ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಆದೇಶ ಪತ್ರವನ್ನು ನೀಡಲಾಗಿದೆ. ಒಟ್ಟು 55,14,000 ರೂಪಾಯಿ ವಿನಿಯೋಗಿಸಲಾಗುತ್ತಿದೆ ಎಂದರು.

ಹಿರಿಯರಾದ ಭಾಸ್ಕರ್ ಹಿರೇಮೆತ್ರಿ ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರ ವಿತರಣೆ ಮಾಡಿ ಮಾತನಾಡಿ ಧರ್ಮಸ್ಥಳದಿಂದ ಶಿಕ್ಷಣಕ್ಕೆ ಒತ್ತು ನೀಡಿ ನೀಡುವ ಜ್ಞಾನದೀಪ ಶಿಕ್ಷಕರು, ಬೆಂಚು ಡೆಸ್ಕ್ , ಶಾಲಾ ಕಟ್ಟಡ, ಶೌಚಾಲಯ, ಲೈಬ್ರರಿ, ಕಂಪ್ಯೂಟರ್, ನೈತಿಕ ಶಿಕ್ಷಣ ಮುಂತಾದ ಪ್ರೋತ್ಸಾಹ, ಸರಕಾರಿ ಶಾಲೆ ಉಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದರು. ವಿದ್ಯಾರ್ಥಿಗಳು ಶ್ರೀ ಕ್ಷೇತ್ರದಿಂದ ಪ್ರಸಾದ ರೂಪದಲ್ಲಿ ಸಿಗುವಂತ ವಿದ್ಯಾರ್ಥಿ ವೇತನವನ್ನು ಸದುಪಯೋಗ ಪಡೆದುಕೊಂಡು ಉತ್ತಮ ವಿದ್ಯಾರ್ಥಿಗಳಾಗಿ ಭವಿಷ್ಯ ರೂಪಿಸಿಕೊಂಡು ಮುಂದೆ ತಾವುಗಳು ಸಮಾಜ ಸೇವೆ ಮಾಡುವ ಗುಣ ಹೊಂದಿ ಎಂದರು. ತಾಲೂಕು ಯೋಜನಾಧಿಕಾರಿ ಶ್ರೀಕಾಂತ ಎಂ. ಮಾತನಾಡಿದ ಅವರು ಪ್ರಸ್ತುತ ವರ್ಷ ಆಯ್ಕೆಯಾದ 174 ಪೈಕಿ 101 ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ವಿದ್ಯಾರ್ಥಿ ವೇತನ ಪತ್ರ ವಿತರಣೆ ಮಾಡಲಾಯಿತು.



ಈ ಸಂದರ್ಭದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಿಬ್ಬಂದಿಯಾದ ದಶರತ, ನಾಗರಾಜ ನಾಯ್ಕ, ಗೀತಾ ಹಟ್ಟಿ, ಬಿಬಿಜಾನ ನಧಾಪ, ಮಂಜುಳಾ ನರಗಟ್ಟಿ, ಫಕ್ಕೀರಮ್ಮಾ ಬಾಣಾವರ, ಮಹಾದೇವಿ ತುಪ್ಪದ, ಸೇವಾ ಪ್ರತಿನೀಧಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಾಳೆ ಗ್ರಾಹಕರ ಕುಂದುಕೊರತೆ ಸಭೆ


**ಧಾರವಾಡ:** ಸೆಪ್ಟೆಂಬರ 20, 2025 ರಂದು ಮದ್ಯಾಹ್ನ 3 ಗಂಟೆಗೆ ಧಾರವಾಡ ವಿಜಯಾರಸ್ತೆ, ಹೆಸ್ಕಾಂನ ಕಾರ್ಯ ಮತ್ತು ಪಾಲನೆ ಉಪ ವಿಭಾಗ–2 ಕಛೇರಿಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ (ವಿ) ದೇವರಾಜ ಹೆಗಡೆ ಅವರ ಅಧ್ಯಕ್ಷತೆಯಲ್ಲಿ ಗ್ರಾಹಕರ ಕುಂದು ಕೊರೆತಗಳ ಸಭೆಯನ್ನು ಆಯೋಜಿಸಲಾಗಿದೆ.

ಆದ್ದರಿಂದ ಶಹರ ಉಪ ವಿಭಾಗ–2 ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಗ್ರಾಹಕರು ಸಭೆಗೆ ಹಾಜರಾಗಿ, ತಮ್ಮ ವಿದ್ಯುತ್ ಬಗ್ಗೆ ಇದ್ದ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕೆಂದು ಪ್ರಕಟಣೆ ತಿಳಿಸಿದೆ.

# ಜಲಕೃಷಿಗಾಗಿ ಅರ್ಜಿ ಆಹ್ವಾನ

**ಕಾರವಾರ:** ಐ.ಸಿ.ಎ.ಆರ್ ಕೇಂದ್ರೀಯ ಸಮುದ್ರ ಮೀನುಗಾರಿಕಾ ಸಂಶೋಧನಾ ಸಂಸ್ಥೆಯ ಕಾರವಾರ ಪ್ರಾದೇಶಿಕ ಸ್ಟೇಶನ್ ವತಿಯಿಂದ ಪರಿಶಿಷ್ಟ ಜಾತಿಯ ಉಪ ಯೋಜನೆಯಡಿ, ಕರ್ನಾಟಕದ ಕರಾವಳಿ ಜಿಲ್ಲೆಗಳಲ್ಲಿ ವಾಸಿಸುವ ಪರಿಶಿಷ್ಟ ಜಾತಿ ಸಮುದಾಯದ ವೈಯಕ್ತಿಕ/ಸ್ವಸಹಾಯ ಗುಂಪುಗಳು (ಎಸ್‌ಎಚ್‌ಜಿ) ಜಲಕೃಷಿ ಚಟುವಟಿಕೆಗಳಿಗೆ ಹಣಕಾಸಿನ ನೆರವು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಜಲಕೃಷಿ ಚಟುವಟಿಕೆ ಕೈಗೊಳ್ಳಲು ಇಚ್ಛಿಸುವ ಪರಿಶಿಷ್ಟ ಜಾತಿಗೆ ಸೇರಿದ ಆಸಕ್ತ ಫಲಾನುಭವಿಗಳು ಸಂಸ್ಥೆಯ ಕಾರವಾರ ಕಚೇರಿ ದೂ.ಸಂ. 08382–222639 ಗೆ ಕಚೇರಿ ವೇಳೆಯಲ್ಲಿ ಕರೆ ಮಾಡಿ ತಮ್ಮ ಹೆಸರನ್ನು ನೋಂದಾಯಿಸಬಹುದಾಗಿದೆ ಮತ್ತು ನಂತರದಲ್ಲಿ ತಮ್ಮ ಪರಿಶಿಷ್ಟ ಜಾತಿ ಪ್ರಮಾಣ ಪತ್ರದೊಂದಿಗೆ ಆಧಾರ್‌ಕಾರ್ಡ್ ಪ್ರತಿಯನ್ನು ಅಂಚೆಯ ಮುಖಾಂತರ ಪ್ರಭಾರ ವಿಜ್ಞಾನಿಗಳು, ಐ.ಸಿ.ಎ.ಆರ್–ಸಿ.ಎಮ್.ಎಫ್.ಆರ್.ಐ ನ ಕಾರವಾರ ಪ್ರಾದೇಶಿಕ ಸ್ಟೇಶನ್, ಪಿ. ಬಿ. ನಂ. 05, ಕಾರವಾರ 581 302, ಉತ್ತರ ಕನ್ನಡ ವಿಳಾಸಕ್ಕೆ ಅಂಚೆ ಮೂಲಕ ಅಥವಾ ವೈಯಕ್ತಿಕವಾಗಿ 15 ದಿನದೊಳಗಾಗಿ ಅರ್ಜಿಗಳನ್ನು ಕಚೇರಿಗೆ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸದೆ.

# ಸಾವಿತ್ರಿಬಾಯಿ ಫುಲೆ ಚಲನಚಿತ್ರ ಪ್ರದರ್ಶನಕ್ಕೆ ಚಾಲನೆ



**ಗೋಕಾಕ:** ತಾಲೂಕಿನ ಮಮದಾಪೂರ ಗ್ರಾಮದ ಸರ್ಕಾರಿ ಕನ್ನಡ ಹೆಣ್ಣುಮಕ್ಕಳ ಶಾಲೆ ಮಮದಾಪೂರ ಇಲ್ಲಿ ನಾಡಿನ ಸಮಾಚಾರ ಸೇವಾ ಸಂಘದ (ರಿ) ಗೋಕಾಕ ಇವರಿಂದ ಉಚಿತವಾಗಿ ಸಾವಿತ್ರಿಬಾಯಿ ಫುಲೆ ಚಲನಚಿತ್ರ ಪ್ರದರ್ಶನಕ್ಕೆ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಗೋಕಾಕ ತಾಲೂಕಾ ಘಟಕದ ಅಧ್ಯಕ್ಷರಾದ ವಿನಾಯಕ ಮಾಳಿ ರವರು ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಸ್ಥಳೀಯ ಶಾಲೆಯ ದೈಹಿಕ ಶಿಕ್ಷಕರಾದ ಎ.ಎಲ್. ಬಾರಿಗಿಡದ ಇವರಿಗೆ ಗೋಕಾಕ ತಾಲೂಕಿನ ಅತ್ಯುತ್ತಮ ದೈಹಿಕ ಶಿಕ್ಷಕ ಪ್ರಶಸ್ತಿ ಲಭಿಸಿದ ಕಾರಣ ಅವರನ್ನು ಸನ್ಮಾನಿಸಲಾಯಿತು. ಈ ಕಾರ್ಯಕ್ರಮದ ನೇತೃತ್ವವನ್ನು ನಾಡಿನ ಸಮಾಚಾರ ಸೇವಾ ಸಂಘದ ಅಧ್ಯಕ್ಷರಾದ ಬಸವರಾಜ ವಾಯ್. ಉಪ್ಪಾರಟ್ಟಿ ವಹಿಸಿದ್ದರು.

ಈ ಸಂದರ್ಭದಲ್ಲಿ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷರಾದ ಮಹೇಶ ಪಾಟೀಲ, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಾದ ಶಿವಾಜಿ ಸಿದ್ದಪ್ಪ ಪೂಜೇರಿ ಹಾಗೂ ಗ್ರಾ.ಪಂ. ಸದಸ್ಯರಾದ ವೀರಭದ್ರ ಮೈಲನ್ನವರ, ಶಿವನಗೌಡ ಕಮತ್, ಮಾಯಪ್ಪ ಪಡಿಮನಿ, ಶಾಲೆಯ ಪ್ರಧಾನ ಗುರುಗಳಾದ ಎಸ್.ಪಿ. ಥೋರಾತ್, ಸುರೇಶ ನವಲಗುಂದ, ಶ್ರೀದೇವಿ ಪತಕಿ, ಡಿ.ಜಿ. ನಾಯಕ, ಡಿ. ಬಿ. ಕೊಳ್ಳಿ, ಆರ್.ಬಿ.ಬೆಟಗೇರಿ, ಮುಖ್ಯೋಪಾಧ್ಯಾಯರು, ಕೆ.ಜಿ.ಎಸ್. ಮಮದಾಪೂರ ಹಾಗೂ ಗ್ರಾಮದ ಕೆ.ಬಿ.ಎಸ್. ಮತ್ತು ಕೆ.ಜಿ.ಎಸ್. ಶಾಲೆಯ ಎಲ್ಲ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು

# ಸಜ್ಜೆ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮ

**ಕೊಪ್ಪಳ:** ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರಿನ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದವರಿಂದ ಸಜ್ಜೆ ಬೆಳೆಯ ಮುಂಚೂಣಿ ಪ್ರಾತ್ಯಕ್ಷಿಕೆಯ ಕ್ಷೇತ್ರೋತ್ಸವನ್ನು ಸೆಪ್ಟೆಂಬರ್ 16 ರಂದು ಕುದುರಿಮೋತಿ ಗ್ರಾಮದಲ್ಲಿ ಆಯೋಜಿಸಲಾಗಿತ್ತು.

ಮುಂಚೂಣಿ ಪ್ರಾತ್ಯಕ್ಷಿಕೆಯ ಕ್ಷೇತ್ರೋತ್ಸವದಲ್ಲಿ ಅಳವಡಿಸಿಕೊಳ್ಳಲಾದ ವಿ.ಪಿ.ಎಂ. ಹೆಚ್. 14 ಎನ್ನುವ ಸಜ್ಜೆಯ ಬೆಳೆಯ ಸಂಕರಣ ತಳಿಯನ್ನು ವಿಜಯಪುರ ಕೃಷಿ ಸಂಶೋಧನಾ ಕೇಂದ್ರದಿಂದ ಅಭಿವೃದ್ಧಿ ಪಡಿಸಲಾಗಿದ್ದು, ಆಯ್ದ ರೈತರಿಗೆ ಪ್ರಾತ್ಯಕ್ಷೆಯನ್ನು ಜೂನ್ ತಿಂಗಳಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕುದರಿಮೋತಿಯ ಪ್ರಾತ್ಯಕ್ಷಿಕೆಯ ಕ್ಷೇತ್ರೋತ್ಸವದಲ್ಲಿ ಗ್ರಾಮದ 20ಕ್ಕೂ ಹೆಚ್ಚು ರೈತರು ಭಾಗವಹಿಸಿದ್ದರು. ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ಸಹಾಯಕ ಪ್ರಾಧ್ಯಾಪಕರಾದ ವಾಮನ ಮೂರ್ತಿ ಅವರು ವಿ.ಪಿ.ಎಂ.ಹೆಚ್. 14 ಸಂಕರಣ ತಳಿಯ ಕೆಲವು ವಿಶೇಷತೆಗಳನ್ನು ತಿಳಿಸಿದರು. ಈ ಸಂಕರಣ ತಳಿಯು ಕಟಾವಿಗೆ ಬಂದಿದ್ದು, ಮಳೆ ಆಶ್ರಯದಲ್ಲಿ ಕೂಡ 1 ಎಕರೆಯಲ್ಲಿ 8–10 ಕ್ವಿಂಟಲ್ ಕಾಳಿನ ಇಳುವರಿ ಮತ್ತು 4 ಟನ್‌ನಷ್ಟು ಮೇವಿನ ಇಳುವರಿ ಕೊಡುತ್ತದೆ ಎಂದು ತಿಳಿಸಿದರು. ಪ್ರಸ್ತುತ ಈ ಬೆಳೆಗೆ ಪ್ರಮುಖವಾದ ಕೀಟ ಮತ್ತು ರೋಗದ ಬಾಧೆ ಕಂಡುಬಂದಿರುವುದಿಲ್ಲ. ಬೀಜ ಮತ್ತು ಕೊಟ್ಟಿಗೆ ಗೊಬ್ಬರದ ಹೊರತಾಗಿ ಯಾವುದೇ ಖರ್ಚು ಮಾಡಿರುವುದಿಲ್ಲ. ಇದೊಂದು ಉತ್ತಮ ಸಂಕರಣ ತಳಿಯಾಗಿದ್ದು, ರೈತರಿಗೆ ಹೆಚ್ಚಿನ ಲಾಭ ಕೊಡಬಲ್ಲದು ಎಂದು ತಿಳಿಸಿದರು.

ಫಲಾನುಭವಿ ರೈತರಾದ ಶರಣೇಗೌಡ ಮಾತನಾಡಿ, ಇದೊಂದು ಉತ್ತಮ ತಳಿಯಾಗಿದ್ದು, ಕುರಿ ಸಾಕಾಣಿಕೆ ಮಾಡುತ್ತಿರುವ ನನಗೆ ಹೆಚ್ಚಿನ ಮೇವಿನ ಉತ್ಪನ್ನವನ್ನು ಕೊಡುತ್ತದೆ ಎಂದು ಶ್ಲಾಘಿಸಿದರು. ಇದೇ ಸಂದರ್ಭದಲ್ಲಿ ಹಿರಿಯ ಪ್ರಯೋಗಶಾಲಾ ಸಹಾಯಕರಾದ ಪ್ರಕಾಶ ಬಣಕಾರ ಅವರು ಮುಂಚೂಣಿ ಪ್ರಾತ್ಯಕ್ಷಿಕೆ ಕೈಗೊಳ್ಳುವ ಮೊದಲು ಗುಚ್ಛ ಗ್ರಾಮಗಳ ಮತ್ತು ರೈತರ ಆಯ್ಕೆ ಪ್ರಕ್ರಿಯೆ ಬಗ್ಗೆ ವಿವರಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ರೈತರು ಬೆಳೆಯನ್ನು ನೋಡಿ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಡಾ. ಎಂ.ವಿ.ರವಿ., ವಿಸ್ತರಣಾ ಮುಂದಾಳು, ಮೊ.ನಂ. 9480247745 ಮತ್ತು ಶ್ರೀ. ವಾಮನಮೂರ್ತಿ, ಸಹಾಯಕ ಪ್ರಾಧ್ಯಾಪಕರು, ಮೊ.ನಂ. 8217696837, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಕೊಪ್ಪಳದ ವಿಜ್ಞಾನಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.



# ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ

**ಯರಗಟ್ಟಿ :** ಪಟ್ಟಣದ ತಹಶೀಲ್ದಾರ ಕಚೇರಿಯಲ್ಲಿ ವಿಶ್ವಕರ್ಮ ಜಯಂತಿ ಆಚರಿಸಲಾಯಿತು.ಈ ವೇಳೆ ತಹಶೀಲ್ದಾರ ಎಮ್ ವ್ಹಿ ಗುಂಡಪ್ಪಗೋಳ ವಿಶ್ವಕರ್ಮ ಭಾವಚಿತ್ರ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪೂಜ್ಯ ಗಣಪತಿ ಮಹಾರಾಜರು, ಪಿಎಸ್‌ಐ ಎಲ್. ಬಿ. ಮಾಳಿ, ಪಶು ವೈದ್ಯಾಧಿಕಾರಿ ಎಂ. ವ್ಹಿ. ಪಾಟೀಲ, ವಿಶ್ವಕರ್ಮ ಸಮಾಜ ಬಾಂಧವರಾದ ಶ್ರೀಕಾಂತ ಪತ್ತಾರ, ಪ್ರಭು ಕಮ್ಮಾರ, ಅರ್ಜುನ ಕಂಬಾರ, ಲಕ್ಷ್ಮಣ ಬಡಿಗೇರ, ಮಂಜುನಾಥ ಬಡಿಗೇರ, ವಿಜಯ ಬಡಿಗೇರ, ಆನಂದ ಬಡಿಗೇರ, ಪ್ರಮೋದ ಬಡಿಗೇರ, ಸಂತೋಷ ಕಂಬಾರ, ಹಾಗೂ ಯುವಕರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ತಹಶೀಲ್ದಾರ ಕಚೇರಿಯ ಸಿಬ್ಬಂದಿ ವರ್ಗದವರು ಇದ್ದರು.

### ಜಿಲ್ಲಾಡಳಿತದ ವತಿಯಿಂದ ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ

# ವಿಶ್ವಕರ್ಮರ ಕೊಡುಗೆ ಅಪಾರ: ಡಾ.ದುರಗೇಶ್

**ಗದಗ:** ದೇಶಕ್ಕೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ದೇಶದ ಬೆನ್ನೆಲುಬು ರೈತನಾದರೆ ರೈತನಿಗೆ ಹೊಲದಲ್ಲಿ ಉಳುಮೆ ಮಾಡಲು ಉಪಯೋಗಿಸುವ ಸಲಕರಣೆಗಳನ್ನು ಪೂರೈಕೆ ಮಾಡುವವರು ವಿಶ್ವಕರ್ಮದವರಾಗಿದ್ದಾರೆ. ಭಾರತೀಯ ಸಂಸ್ಕೃತಿಯನ್ನು ಬೆಳೆಸಿದವರು ವಿಶ್ವಕರ್ಮರು. ಭಾರತ ದೇಶದಲ್ಲಿ ವಿವಿಧ ಐತಿಹಾಸಿಕ ದೇವಾಲಯಗಳನ್ನು ನಿರ್ಮಾಣ ಮಾಡಿದ ಹಿರಿಮೆ ವಿಶ್ವಕರ್ಮರಿಗೆ ಸಲ್ಲುತ್ತದೆ. ಶ್ರಮ ಹಾಗೂ ಕಾಯಕ ನಿಷ್ಠೆ ಇನ್ನೊಂದು ಹೆಸರೇ ವಿಶ್ವಕರ್ಮರು. ವಿಶ್ವಕರ್ಮನೆಂಬುವನು ಇಲ್ಲದಿದ್ದರೆ ಈ ಜಗತ್ತಿಗೆ ಅಸ್ತಿತ್ವವೇ ಇರುತ್ತಿರಲಿಲ್ಲ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ. ವೇದೋಪನಿಷತ್‌ಗಳು ಸಹ ವಿಶ್ವ ಕರ್ಮನನ್ನು ಕೊಂಡಾಡಿವೆ ಎಂದರು.

ರಾಜ ವಿಷ್ಣುವರ್ಧನನು ಹೊಯ್ಸಳ ಸಾಮ್ರಾಜ್ಯದ ಪ್ರಸಿದ್ಧ ರಾಜನಾಗಿದ್ದ. ಇವನ ರಾಣಿ ಶಾಂತಲೆಯು ಶಿಲ್ಪಕಲೆ ಹಾಗೂ ಸಂಸ್ಕೃತಿಯಲ್ಲಿ ಹೆಚ್ಚಿನ ಹೆಚ್ಚಿನ ಆಸಕ್ತಿಯುಳ್ಳವಳಾಗಿದ್ದಳು. ಬೇಲೂರಿನ ಚನ್ನಕೇಶವ ದೇವಾಲಯ, ಹಳೇಬೀಡಿನ ಹೊಯ್ಸಳೇಶ್ವರ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳ ನಿರ್ಮಾತೃ ವಿಶ್ವಕರ್ಮ ಸಮಾಜದ ಅಮರ ಶಿಲ್ಪಿ ಜಕಣಾಚಾರಿಯವರಾಗಿದ್ದಾರೆ. ಈಗಿನ ಮಕ್ಕಳಿಗೆ ವಿಶ್ವಕರ್ಮರ ಮಾರ್ಗದರ್ಶನ ತಿಳಿಸಬೇಕು ಹಾಗೂ ಸಾಹಿತ್ಯದ ಒಲವನ್ನು ಬೆಳೆಸಲು ಪ್ರೇರೇಪಿಸಬೇಕು. ಎಲ್ಲರೂ ಕಾಯಕ ತತ್ವ ಬೆಳೆಸಿಕೊಳ್ಳಬೇಕು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಅವರು ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ರಾಜ್ಯ ಸರ್ಕಾರದಿಂದ ವಿಶ್ವ ಕರ್ಮ ಜಯಂತಿ ಆಚರಿಸುತ್ತಿರುವುದು ಬಹಳ ಸಂತೋಷ ವಿಷಯವಾಗಿದೆ. ಯಾವುದೇ ಸಾಧನೆಯಾಗಬೇಕಾದರೆ ಸಂಘಟನೆಯು ಬಹಳ ಮುಖ್ಯವಾಗಿರುತ್ತದೆ. ವಿಶ್ವ ಕರ್ಮ ಸಮಾಜದವರು ಒಗ್ಗಟ್ಟಾಗಿ ಮುಂದೆ ಬರಬೇಕು. ಸರ್ಕಾರದ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಹಿರಿಯ ಸಾಹಿತಿ ಡಿ.ವಿ.ಬಡಿಗೇರ ಉಪನ್ಯಾಸ ನೀಡುತ್ತಾ ಮಾತನಾಡಿ, ವಿಶ್ವಕರ್ಮರ ಪೂಜೆ ಈ ಮೊದಲು ವ್ಯಕ್ತಿಗರ ಹಾಗೂ ಮನೆಗಳಿಗೆ ಸೀಮಿತವಾಗಿತ್ತು. ಆದರೆ ಈಗ ರಾಜ್ಯ ಸರ್ಕಾರದ ಆದೇಶದನ್ವಯ ಜಯಂತಿ ಆಚರಣೆ ಅರ್ಥಪೂರ್ಣವಾಗಿ ವಿಜ್ರಂಭಣೆಯಿಂದ ಆಚರಿಸಲಾಗುತ್ತಿದೆ. ಎಲ್ಲಿ ಶ್ರಮದ ಬೆವರ ಹನಿ ಇದೆ ಅಲ್ಲಿ ನಾನು ಇದ್ದೇನೆ ಎಂದು ವಿಶ್ವ ಕರ್ಮರು ಹೇಳುತ್ತಾರೆ. ವಿಶ್ವಕರ್ಮರು ಶ್ರಮ ಪ್ರಿಯರು, ಕಾಯಕ ಪ್ರಿಯರಾಗಿದ್ದಾರೆ. ವೇದ, ಪುರಾಣ, ಶೃತಿ ಸ್ಮೃತಿಗಳಲ್ಲಿ ಸರ್ವಜ್ಞರ ವಚನಗಳಲ್ಲಿಯೂ ಸಹ ವಿಶ್ವ ಕರ್ಮರ ಪ್ರಾಮುಖ್ಯತೆ ಬಗ್ಗೆ ಉಲ್ಲೇಖಿಸಲಾಗಿದೆ. ವಿಶ್ವ ಕರ್ಮನಿಲ್ಲದ ಜಗತ್ತು ಶೂನ್ಯ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ. ವಿಶ್ವ ಕರ್ಮನಿಲ್ಲದಿದ್ದರೆ ಜಗತ್ತಿನ ಅಸ್ತಿತ್ವ ಇರುತ್ತಿರಲಿಲ್ಲ ಎಂದು ಸಂತ ಕವಿ ವೇಮನರು ತಿಳಿಸಿದ್ದಾರೆ. ಸಕಲ ಚರಾಚರ ವಸ್ತುಗಳಲ್ಲ ವಿಶ್ವ ಕರ್ಮ ಇದ್ದಾನೆ. ವಿಶ್ವಕರ್ಮರು ಕಾಯಕ ಯೋಗಿಗಳು ಎಂದು ವಿವರಿಸುತ್ತಾ ತಮ್ಮ ಚುಟುಕು ಸಾಹಿತ್ಯದ ಮೂಲಕ ವಿಶ್ವ ಕರ್ಮರನ್ನು ಕೊಂಡಾಡಿರುವುದು ನೆರೆದ ಜನಸ್ತೋಮದ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ವಿಶ್ವ ಕರ್ಮ ಸಮಾಜ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ, ವಿಶ್ವಕರ್ಮ ನೌಕರರ ಸಂಘದ ಅಧ್ಯಕ್ಷ ಆರ್.ಡಿ.ಕಡ್ಲಿಕೊಪ್ಪ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೈಶೈಲ ಸೋಮನಕಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಶ್ರೀಧರ್ ಚಿನಗಡಿ, ಹರಿನಾಥಬಾಬು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿಶ್ವ ಕರ್ಮ ಸಮುದಾಯದ ಗಣ್ಯರು, ಹಿರಿಯರು ಹಾಜರಿದ್ದರು. ಸುತಾರ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ವಿಶ್ವನಾಥ ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.



## ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮ

**ಬಾಗಲಕೋಟೆ:** ತಾಲೂಕಿನ ಬೇವಿನಮಟ್ಟಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಸರಕಾಋಇ ಪ್ರಾಥಮಿಕ ಶಾಲೆ ಆವರಣದಲ್ಲಿ ಸ್ವಚ್ಛತಾ ಹಿ ಸೇವಾ ಕಾರ್ಯಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಸ್ವಚ್ಛತೆಯ ಬಗ್ಗೆ ಪ್ರಮಾಣ ವಚನ ಸ್ವೀಕರಿಸಲಾಯಿತು. ನಂತರ ಸರಕಾರಿ ಪ್ರೌಢ ಶಾಲೆಯಲ್ಲಿ ಕಂಪ್ಯೂಟರ್ ಕೇಂದ್ರ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಜಿ.ಪಂ ಯೋಜನಾ ನಿರ್ದೇಶಕ ಎಸ್.ಸಿ.ಕಾಂಬಳೆ, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಸೇರಿದಂತೆ ಗ್ರಾಮ ಪಂಚಾಯತಿ ಅಧ್ಯಕ್ಷರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ ಸಹಾಯಕ ನಿರ್ದೇಶಕರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಶಾಲಾ ಶಿಕ್ಷಕರು ಹಾಗೂ ಇತರರು ಉಪಸ್ಥಿತರಿದ್ದರು.

## ಕಾರ್ ಸರ್ವಿಸ್ ಟೆಕ್ನಿಶಿಯನ್ ತರಬೇತಿ

**ಹುಬ್ಬಳ್ಳಿ:** ಜಿಟಿಟಿಸಿ – ಮಲ್ಟಿ ಸ್ಕಿಲ್ ಡೆವಲಪಮೆಂಟ್ ಸೆಂಟರನಲ್ಲಿ ಬೆಂಗಳೂರಿನ ಬಾಷ್ ಇಂಡಿಯಾ ಪ್ರತಿಷ್ಠಾನದ ಸಹಯೋಗದಲ್ಲಿ 3 ತಿಂಗಳ ಕಾರ್ ಸರ್ವಿಸ್ ಟೆಕ್ನಿಶಿಯನ್ ತರಬೇತಿಯನ್ನು ಆಯೋಜಿಸಲಾಗಿದೆ.

ಹತ್ತನೇ ತರಗತಿ ಪಾಸ್, ಪಿಯುಸಿ, ಡಿಪ್ಲೋಮಾ, ಯಾವುದೇ ಡಿಗ್ರಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ 18 ರಿಂದ 28 ವಯೋಮಿತಿಯೊಳಗಿನ ಅಭ್ಯರ್ಥಿಗಳು ಈ ತರಬೇತಿ ಪ್ರವೇಶ ಪಡೆಯಲು ಅರ್ಹರಿರುತ್ತಾರೆ. ಅಭ್ಯರ್ಥಿಗಳಿಗೆ ವಾಹನ ವ್ಯವಸ್ಥೆ ಅಧ್ಯಯನ, ಕಾರ್ ವಾಹನದ ತಪಾಸಣೆ, ದುರಸ್ತಿ, ನಿರ್ವಹಣೆ, ಬಿಡಿ ಭಾಗಗಳ ಜೋಡಣೆ, ಉಪಕರಣಗಳ ಬಳಕೆ, ಸಂವಹನ, ವ್ಯಕ್ತಿತ್ವ ವಿಕಸನ ಮತ್ತು ಕಂಪ್ಯೂಟರ್ ತರಬೇತಿ ನೀಡಲಾಗುವುದು. ಈ ತರಬೇತಿಗಳು ಕೈಗಾರಿಕೆಗಳ ಅವಶ್ಯಕತೆಗಳಿಗೆ ಅನುಗುಣವಾದ ಪಠ್ಯಕ್ರಮವನ್ನು ಹೊಂದಿವೆ. ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಆಟೋಮೊಬೈಲ್ ಉದ್ಯಮ ಪರಿಣಿತರಿಂದ ತರಬೇತಿ ನೀಡಲಾಗುತ್ತದೆ. ತರಬೇತಿಗಳು ಅಕ್ಟೋಬರ 01 ರಿಂದ ಪ್ರಾರಂಭವಾಗಲಿವೆ. ಜಿಟಿಟಿಸಿ ಹುಬ್ಬಳ್ಳಿ ಕೇಂದ್ರದಲ್ಲಿ ಉನ್ನತ ತಂತ್ರಜ್ಞಾನ ಮತ್ತು ತರಬೇತಿ ಸೌಲಭ್ಯಗಳನ್ನು ಸ್ಥಾಪಿಸಲಾಗಿದ್ದು, ತರಬೇತಿ ಪೂರ್ಣಗೊಳಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ, ಕ್ಯಾಂಪಸ್ ಸಂದರ್ಶನಗಳ ಮೂಲಕ ಉದ್ಯೋಗ ದೊರಕಿಸಿ ಕೊಡಲಾಗುತ್ತದೆ.

ಆಸಕ್ತ ಅಭ್ಯರ್ಥಿಗಳು ಸೆಪ್ಟೆಂಬರ್ 30 ರೊಳಗಾಗಿ ಖುದ್ದಾಗಿ ಜಿಟಿಟಿಸಿ ಹುಬ್ಬಳ್ಳಿ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ಜಿಟಿಟಿಸಿ, ಇಂಡಸ್ಟ್ರಿಯಲ್ ಎಸ್ಟೇಟ್, ಗೋಕುಲ ರಸ್ತೆ, ಹುಬ್ಬಳ್ಳಿ ಅಥವಾ ದೂರವಾಣಿ ಸಂಖ್ಯೆ 0836–2333159, 8183860552 ಸಂಪರ್ಕಿಸುವಂತೆ ಜಿಟಿಟಿಸಿ ಪ್ರಾಂಶುಪಾಲರಾದ ಮಾರುತಿ ಭಜಂತ್ರಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ರಫ್ತು ಕುರಿತು ಜಾಗೃತಿ ಕಾರ್ಯಕ್ರಮ



**ಹುಬ್ಬಳ್ಳಿ:** ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಯಾದ ಎಸ್.ಎಂ.ಇ ಗಳ ಉದ್ದೇಶವೇನೆಂದರೆ ದೇಶದಲ್ಲಿ ಸೂಕ್ಷ್ಮ ಮತ್ತು ಮಧ್ಯಮ ವರ್ಗದ ಉದ್ಯಮಿಗಳನ್ನು ಬಲಪಡಿಸುವ ಮೂಲಕ ವಿಜ್ಞಾನ ಮತ್ತು ತಂತ್ರಜ್ಞಾನ ಅಭಿವೃದ್ಧಿಗೊಳಿಸುವುದು. ಉನ್ನತ ರಫ್ತು ಗುಣಮಟ್ಟವನ್ನು ಸುಧಾರಿಸುವುದಾಗಿದೆ. ಇದು ಕೇಂದ್ರದ ಬೆಂಬಲಿತ ಯೋಜನೆಯಾಗಿರುವುದರಿಂದ ವ್ಯಕ್ತಿತ್ವ ವಿಕಸನ ಮತ್ತು ದೇಶದ ಆರ್ಥಿಕತೆಯಲ್ಲಿ ಮಾರುಕಟ್ಟೆಯ ಹೊಸ ಯುವಶಕ್ತಿಯನ್ನು ಬೆಂಬಲಿಸುವುದು ಯೋಜನೆಯ ಉದ್ದೇಶವಾಗಿದೆ ಎಂದು ಕರ್ನಾಟಕ ಸಣ್ಣ ಕೈಗಾರಿಕಾ ಸಂಘದ ಅಧ್ಯಕ್ಷರಾದ ಗಣೇಶರಾವ್ ಬಿ.ಆರ್ ಹೇಳಿದರು.

ಗೋಕುಲ ರಸ್ತೆಯ ಕ್ಲಾಸಿಕ್ ರೆಸಿಡೆನ್ಸಿ ಹೊಟೇಲ್ ನಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ಟ್ರೇಡ್ ಪ್ರೋಮೋಶನ್ ಸೆಂಟರ್ ಮತ್ತು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಇವುಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜೆಡ್, ಲೀನ್ ಯೋಜನೆಗಳು ಮತ್ತು ರಫ್ತು ಕುರಿತು ಒಂದು ದಿನದ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸೂಕ್ಷ್ಮ ಮತ್ತು ಮಧ್ಯಮ ವರ್ಗದ ಉದ್ಯಮಿಗಳನ್ನು ಬಲಪಡಿಸುವುದು ಮತ್ತು ನೇರವಾಗಿ ಮತ್ತು ಪರೋಕ್ಷವಾಗಿ ರಫ್ತು ಮಾರುಕಟ್ಟೆಗಳನ್ನು ತಲುಪುವುದು. ಇದರಿಂದ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆ ಮತ್ತು ದೇಶದ ಆರ್ಥಿಕ ಸ್ಥಿತಿ ಬಲಪಡಿಸಬಹುದು. ವಿಟಿಪಿಸಿ ಉಪ ನಿರ್ದೇಶಕರಾದ ಟಿ. ಎಸ್.ಮಲ್ಲಿಕಾರ್ಜುನ ಮಾತನಾಡಿ, ಕರ್ನಾಟಕ ಸರ್ಕಾರದ ಅಂಗ ಸಂಸ್ಥೆಗಳ ಸಹಯೋಗದೊಂದಿಗೆ ಅಂತರಾಷ್ಟ್ರೀಯ ಮಟ್ಟದಲ್ಲಿ ರಫ್ತು ಮತ್ತು ವ್ಯವಹಾರಗಳನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಉನ್ನತಿಕರಣವಾಗಬೇಕು. ಉತ್ಪನ್ನ ಮಾರಾಟ ರಫ್ತುಗಳಲ್ಲಿ ಭಾರತ ಪ್ರಥಮ ಸ್ಥಾನ, ಮತ್ತು ಕರ್ನಾಟಕ ನಾಲ್ಕನೇ ಸ್ಥಾನದಲ್ಲಿದೆ ಎಂದು ಹೇಳಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಶಿವಪುತ್ರಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ಆರ್.ಎಚ್ ವೀರೇಶ್ ಕುಮಾರ, ಲಿಂಗನ ಬಿರಾದರ, ಧಾರವಾಡ ಜಿಲ್ಲೆಯ ಕೈಗಾರಿಕ ಉದ್ಯಮಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳು ಮೊಬೈಲ್‌ನಿಂದ ದೂರವಿರಿ

**ಗಂಗಾವತಿ:** ಕಲ್ಯಾಣ ಕರ್ನಾಟಕ ದಿನಾಚರಣೆ ಮತ್ತು ಶಿಕ್ಷಕರ ದಿನಾಚರಣೆಯನ್ನು ವಿದ್ಯಾನಗರ ಶಾರದಾ ವಿದ್ಯಾ ಸಂಸ್ಥೆಯಲ್ಲಿ ಅದ್ದೂರಿಯಾಗಿ ಜರುಗಿತು. ವಿದ್ಯಾರ್ಥಿಗಳು ಕುಂಭ ಮೆರವಣಿಗೆ ಮುಖಾಂತರ ಎಲ್ಲಾ ಗಣ್ಯರನ್ನು ಕಾರ್ಯಕ್ರಮಕ್ಕೆ ಬರಮಾಡಿಕೊಂಡರು ನಂತರ ಸಂಸ್ಥೆಯ ಅಧ್ಯಕ್ಷರು ಎಸ್ ಪ್ರಸಾದ್ ಹಾಗೂ ಅತಿಥಿಗಳು ಧ್ವಜಾರೋಹಣ ಮಾಡಿದರು.

ಮುಖ್ಯ ಅತಿಥಿಗಳು ಡಾ. ಸಿ.ಎಚ್. ವಿ. ಎಸ್. ವಿ. ಪ್ರಸಾದ್ ರವರು ಮಾತನಾಡಿ ಶಿಕ್ಷಕರ ಸೇವೆಗೆ ನಾವು ಬೆಲೆ ಕಟ್ಟಲು ಆಗುವುದಿಲ್ಲ ಎಂದು ಹಾಗೂ ಮೊಬೈಲ್ ಗಳಿಂದ ದೂರವಿದ್ದು ಸತತ ಪರಿಶ್ರಮ ಪಡಬೇಕು ಪ್ರತಿಯೊಬ್ಬರೂ ಸೇವಾ ಮನೋಭಾವನೆಯನ್ನು ಇಟ್ಟುಕೊಳ್ಳಬೇಕು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿ ನಾನ್ನು ಅನೇಕ ವಿದ್ಯಾ ಸಂಸ್ಥೆಗಳಿಗೆ ಹಾಗೂ ಸಮಾಜ ಸೇವಕ್ಕೆ ಸಹಾಯ ಸಹಕಾರ ಮಾಡುತ್ತಾ ಬಂದಿದ್ದೇನೆ ಅದೇ ರೀತಿ ಶಾರದಾ ವಿದ್ಯಾ ಸಂಸ್ಥೆಯ ಮೊದಲನೇ ಮಹಡಿಯ ಕಟ್ಟಡ ನಿರ್ಮಾಣಕ್ಕೆ ವೆಚ್ಚವಾಗುವ ಸಂಪೂರ್ಣ ಮೊತ್ತವನ್ನು ನಾನ್ನು ನೀಡುತ್ತೇನೆ ಮುಂದಿನ ದಿನದಲ್ಲಿ ವಿದ್ಯಾರ್ಥಿಗಳಿಗೆ ಬೇಕಾಗುವ ಯಾವುದೇ ಅನುಕೂಲವಾಗಲಿ ನಾನ್ನು ಮಾಡಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಅತಿಥಿಗಳಾಗಿರುವ ಜಾನೆ ಕುಂಟೆ ಬಸವರಾಜ್ ಮಾತನಾಡಿದರು, ಈ ಕಾರ್ಯಕ್ರಮದಲ್ಲಿ ಶಿಕ್ಷಣಾಧಿಕಾರಿ ಎಚ್ ಬಿ ನಟೇಶ್, ಗೌರವಾಧ್ಯಕ್ಷರು ಟಿ.ವಿ ಸತ್ಯನಾರಾಯಣ್, ಸಂಸ್ಥೆ ಉಪಾಧ್ಯಕ್ಷರಾದ ಡಿ. ರಾಮಕೃಷ್ಣರವರು ಖಜಾಂಚಿಗಳಾಗಿರುವ ಎಂ. ಸತ್ಯನಾರಾಯಣ್ ಸಹ ಕಾರ್ಯದರ್ಶಿಗಳಾಗಿರುವ ಕಮ್ಮಾ ಕೋಟೇಶ್ವರರಾವ್,ಕೆ ತ್ರಿನಾಥ್, ಸದಸ್ಯ ಗೊಟ್ಟಿಪಾಟಿ ರವಿಕುಮಾರ್, ಎನ್. ಆರ್. ಶ್ರೀನಿವಾಸ್, ಸಿಎಚ್.ರಾಮಕೃಷ್ಣ ಕಲ್ಯಾಣಂಜಾನಕಿರಾಮ, ಜಿ. ರಾಯುಡು,ಶ್ರೀ ಕೆ. ಬಿ. ಗೋಪಾಲಕೃಷ್ಣ ರೆಡ್ಡಿ, ಪಿ.ಲಕ್ಷ್ಮಣ್‌ರಾವ್, ಜಿ. ಕೃಷ್ಣಾರಾವ್, ಟಿ.ವಿ.ಸುಬ್ಬರಾವ್, ಎಸ್. ವೆಂಕಟೇಶ್ವರ್ ರಾವ್, ಜವ್ವಾದಿ ಸಾಯಿಬಾಬು, ಮೇಕಾ ರಾಮಕೃಷ್ಣ ಸಂಸ್ಥೆಯ ಆಡಳಿತ ಅಧಿಕಾರಿ ವೈ ಸುದರ್ಶನ್ ರಾವ್ ಮತ್ತು ಮುಖ್ಯ ಉಪಾಧ್ಯಾಯನಿ ಉದಯಶ್ರೀ ಶಿಕ್ಷಕ ಮತ್ತು ಸಿಬ್ಬಂದಿ, ಮತ್ತು ಎನ್. ಆರ್. ಶಾಲೆ, ಎಸ್.ಜಿ.ವಿ.ಆರ್. ತೆಲುಗು ಮಾಧ್ಯಮ ಪ್ರೌಢಶಾಲೆ, ಹೆಚ್.ಆರ್. ಸರೋಜಮ್ಮ ಪ್ರಾಥಮಿಕ ಶಾಲೆ, ಎಸ್.ಜಿ.ವಿ. ಆರ್. ಆಂಗ್ಲ ಮಾಧ್ಯಮ ಶಾಲೆ ಮತ್ತು ವೈ.ಜೆ.ಆರ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.




## ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

**ಗದಗ:** ಅಕ್ಟೋಬರ್ 07-10-2025 ರಂದು ಮಹರ್ಷಿ ಶ್ರೀ ವಾಲ್ಮೀಕಿ ಜನ್ಮ ದಿನಾಚರಣೆಯನ್ನು ಆಚರಿಸುವ ಕುರಿತು ದಿನಾಂಕ : 20/09/2025 ರಂದು ಮುಂಜಾನೆ 11-30 ಘಂಟೆಗೆ ಮಾನ್ಯ ತಹಶೀಲ್ದಾರರು ಲಕ್ಷ್ಮೇಶ್ವರ ಇವರ ಕಾರ್ಯಾಲಯದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಎಲ್ಲ ತಾಲೂಕ ಮಟ್ಟದ ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು, ದಲಿತಪರ ಸಂಘಟನೆಗಳ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು, ಸರ್ವ ಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಮತ್ತು ಪತ್ರಿಕಾ ಮಾಧ್ಯಮದವರು ಹಾಗೂ ಸಾರ್ವಜನಿಕರು ಸಕಾಲಕ್ಕೆ ಆಗಮಿಸಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ಈ ಮೂಲಕ ಕೋರಲಾಗಿದೆ ಸದಸ್ಯ ಕಾರ್ಯದರ್ಶಿ ಮಹರ್ಷಿ ಶ್ರೀ ವಾಲ್ಮೀಕಿಜಯಂತಿ ಆಚರಣೆ ಸಮಿತಿ, ಹಾಗೂ ಸಹಾಯಕ ನಿರ್ದೇಶಕರು ಸ.ಕ.ಇ. ಶಿರಹಟ್ಟಿ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸ್ವರಾಂಜಲಿ ಕರೋಕೆ ಶಾಲೆಯವರಿಂದ ನಟ ವಿಷ್ಣುವರ್ಧನರ 75 ನೇ ಹುಟ್ಟುಹಬ್ಬ ಆಚರಣೆ

## ಕನಡ ಚಿತ್ರರಂಗಕ್ಕೆ ನಟ ವಿಷ್ಣುವರ್ಧನ ಸೇವೆ ಅನನ್ಯ

**ಬೆಳಗಾವಿ:** ಕನಡ ಚಿತ್ರರಂಗಕ್ಕೆ ಕರ್ನಾಟಕ ರತ್ನ ನಟ ವಿಷ್ಣುವರ್ಧನರ ಸೇವೆ ಅನನ್ಯವಾದುದು. ನಾನೊಮ್ಮೆ ಪತ್ರಿಕೆಗಾಗಿ ನಟ ವಿಷ್ಣವರ್ಧನರ ಸಂದರ್ಶನ ಮಾಡಿದ್ದೆ. ನಾನು ಕೇಳಿದ ಎಲ್ಲ ಪ್ರಶ್ನೆಗಳಿಗೂ 'ದೇವರ ಇಚ್ಛೆ, ಆಕಾಶದೆಡೆ ಕೈ ಮಾಡಿ ಅವನು ಮಾಡಿಸಿದರೆ ಮಾಡಿಸಬಹುದು. ಭಗವಂತನ ಮುಂದೆ ಯಾರ ಆಟವೂ ನಡೆಯುವದಿಲ್ಲ' ಹೀಗೆ ಉತ್ತರಿಸಿದ್ದರು. ಅವರು ಲೌಕಿಕ ಬಿಟ್ಟು ಸಂಪೂರ್ಣ ಆಧ್ಯಾತ್ಮಿಕದತ್ತ ವಾಲಿದ್ದು ಅವರ ಮಾತಿನಿಂದ ಗೊತ್ತಾಗುತ್ತಿತ್ತು ಎಂದು ಪತ್ರಕರ್ತ, ಲೇಖಕ ಗುಂಡೇನಟ್ಟಿ ಮಧುಕರ ವಿಷ್ಣುವರ್ಧನರನ್ನು ಭೇಟಿಯಾದ ಸಂದರ್ಭವನ್ನು ನೆನಪಿಸಿಕೊಳ್ಳುತ್ತ ಹೇಳಿದರು.



ಹಿಂದವಾಡಿಯಲ್ಲಿರುವ ಸ್ವರಾಂಜಲಿ ಕರೋಕೆ ಸಂಗೀತ ಶಾಲೆಯವರು ನಟ ವಿಷ್ಣುವರ್ಧನ ಅವರ 75 ನೇ ಹುಟ್ಟುಹಬ್ಬವನ್ನು ಅವರ ಭಾವಚಿತ್ರಕ್ಕೆ ಮಾಲೆಯನ್ನು ಹಾಕಿ, ಅವರ ಚಲನಚಿತ್ರಗಳಲ್ಲಿಯ ಹಾಡುಗಳನ್ನು ಹಾಡುವುದರೊಂದಿಗೆ ಆಚರಿಸಿದರು. ಈ ಸಂದರ್ಭದಲ್ಲಿ ಅವರೊಂದಿಗಿನ ಕ್ಷಣಗಳನ್ನು ನೆನಪಿಸಿಕೊಂಡ ಗುಂಡೇನಟ್ಟಿ ಅವರು 'ಭೂತಯ್ನಯ ಮಗ ಅಯ್ಯು' ಚಿತ್ರದ 'ವಿರಸವೆಂಬ ವಿಷಕ್ಕೆ ಬಲಿಯಾದೆ ಏತಕೆ' ಹಾಡನ್ನು ಹಾಡಿದರು.

ಚಂದ್ರಶೇಖರ ಹಿರೇಮಠ, ಮಂಜುನಾಥ ಹಿರೇಮಠ, ಪ್ರಭಾಕರ ಕೊಲ್ಹಾರ, ಸುಧಾಕರ ಚೊಳಚದ, ಚಂದ್ರಕಾಂತ ಅಪ್ಪಣ್ಣವರ, ಪ್ರೇಮಾ ಸರ್ವಗೋಳ, ಇವರು ವಿಷ್ಣುವರ್ಧನ ನಟಿಸಿದ ಚಲನಚಿತ್ರಗಳಲ್ಲಿಯ 'ಕರ್ನಾಟಕದ ಇತಿಹಾಸದಲಿ..' 'ಮಾಮರವೆಲ್ಲೋ.. ಕೋಗಿಲೆಯೆಲ್ಲೋ..' 'ಆಲಾರೇ ಆಲಾರೇ..' 'ಬಾರೇ.. ಬಾರೇ?' ಮುಂತಾದ ಗೀತೆಗಳನ್ನು ಹಾಡಿ ವಿಷ್ಣುವರ್ಧನ್ ಅವರಿಗೆ ಗೌರವ ಸಲ್ಲಿಸಿದರು. ಸ್ವರಾಂಜಲಿ ಸಂಸ್ಥಾಪಕ ಚಂದ್ರಶೇಖರ ಹಿರೇಮಠ ನಿರೂಪಿಸಿದರು.

## ಕೃಷಿ ವಿಜ್ಞಾನ ಕೇಂದ್ರದಲ್ಲಿ ಸಸಿ ನೆಡುವ ಕಾರ್ಯಕ್ರಮ

**ಬೆಳಗಾವಿ:** ಮತ್ತಿಕೊಪ್ಪದ ಐಸಿಎಆರ್–ಕೆವಿಕೆ ಕೃಷಿ ವಿಜ್ಞಾನ ಕೇಂದ್ರ ಹಾಗೂ ಲಿಂಗಾಯತ ಮಹಿಳಾ ಸಮಾಜ, ಬೆಳಗಾವಿ ಇವರ ಸಹಯೋಗದಲ್ಲಿ ಕೇಂದ್ರದ ಆವರಣದಲ್ಲಿ ದಿನಾಂಕ 18.09.2025 ರಂದು ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. "ಎಕ್ ಪೇಡ್ ಮಾ ಕೆ ನಾಮ" ಅಭಿಯಾನದಡಿಯಲ್ಲಿ ಪರಿಸರ ಸಂರಕ್ಷಣೆಯ ಉದ್ದೇಶವಾಗಿ ಮತ್ತು ನೆಚ್ಚಿನ ಗೌರವಾನ್ವಿತ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜಿಯವರ ಹುಟ್ಟುಹಬ್ಬದ ಅಂಗವಾಗಿ ಲಿಂಗಾಯತ ಸಮಾಜದ ಎಲ್ಲ ಪದಾಧಿಕಾರಿಗಳು ತಮ್ಮ ತಾಯಿಯರನ್ನು ಮನಸ್ಸಿನಲ್ಲಿ ನೆನೆಯುತ್ತಾ ಮತ್ತು 33 ಸ್ವಾತಂತ್ರ ಹೋರಾಟ ಮಾಡಿದ ಮಹಿಳೆಯರ ಹಾಗೂ ಶರಣೆಯರ ಹೆಸರಿನಲ್ಲಿ ಗಿಡಗಳನ್ನು ನೈಸರ್ಗಿಕ ಕೃಷಿ ತಾಕುಗಳಲ್ಲಿ ನೆಡುವುದರ ಮೂಲಕ 100 ಕ್ಕೂ ಹೆಚ್ಚು ಪದಾಧಿಕಾರಿಗಳು ಸಾಕ್ಷಿಯಾದರು.



ಕಾರ್ಯಕ್ರಮವನ್ನು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷರಾದ ಮುಕ್ತಾಂಬಾ ಬಿ., ಮಹಿಳಾ ಸಮಾಜ, ಬೆಳಗಾವಿ ಅಧ್ಯಕ್ಷೆ ಮಧುಮತಿ ಹಿರೇಮಠ, ರತ್ನಾ ಬೆಲ್ಲದ, ಶೈಲಜಾ ಬಿಂಗೆ ಇವರು ಸಸಿ ನೆಡುವುದರ ಮೂಲಕ ಉದ್ಘಾಟಿಸಿದರು. ನಂತರ ಮಧುಮತಿ ಹಿರೇಮಠ ಮಾತನಾಡುತ್ತಾ, ಅರಣ್ಯ ನಾಶದಿಂದ ಪರಿಸರ ನಾಶವಾಗುತ್ತಿದೆ, ಈ ಹಿನ್ನಲೆಯಲ್ಲಿ ಪ್ರಕೃತಿ ವಿಕೋಪಗಳು ನಡೆಯುತ್ತಿವೆ. ಆದ್ದರಿಂದ ಅರಣ್ಯ ಸಸಿಗಳನ್ನು ನೆಟ್ಟು ಪರಿಸರ ವ್ಯವಸ್ಥೆಯನ್ನು ಸುಧಾರಿಸುವ ಕ್ರಮಗಳನ್ನು ತೀವ್ರವಾಗಿ ಅಳವಡಿಸಿಕೊಳ್ಳುವುದು ಅತಿ ಅವಶ್ಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಮಂಜುನಾಥ ಚೌರಡ್ಡಿಯವರು ಮಾತನಾಡಿ, ದೇಶದಲ್ಲಿ ಅರಣ್ಯ ನಾಶದಿಂದ ಪರಿಸರಕ್ಕೆ ಹಾನಿಯಾಗುತ್ತಿದೆ. ಆರೋಗ್ಯಯುತ ಪರಿಸರ ನಿರ್ಮಾಣಕ್ಕೆ ದೇಶದಲ್ಲಿ ಪ್ರತಿಶತ 33 ರಷ್ಟು ಅರಣ್ಯ ಕ್ಷೇತ್ರ ಬೇಕಾಗಿದ್ದು, ಈಗ ಪ್ರತಿಶತ 24 ಮಾತ್ರ ಇರುವುದು. ಮನೆಯ ಪರಿಸರದಲ್ಲಿ ಸಸಿಗಳನ್ನು ನೆಡುವುದರ ಮೂಲಕ ಗಿಡ ನೆಡುವ ಆಂದೋಲನಕ್ಕೆ ಸಹಯೋಗ ನೀಡಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಲಿಂಗಾಯತ ಮಹಿಳಾ ಸಮಾಜ, ಬೆಳಗಾವಿಯ ಕಾರ್ಯದರ್ಶಿ ರಕ್ಷಾ ದೇಗಿನಾಳ ಹಾಗೂ ಸಹ ಕಾರ್ಯದರ್ಶಿ ಸರೋಜಾ ನಿಶಾನ್ದಾರ, ರಾಜೇಶ್ವರಿ ಕವಟಗಿಮಠ, ಸಂಬರಗಿಮಠ ಉಪಸ್ಥಿತರಿದ್ದರು.

## ವಾಲ್ಮೀಕಿ ಜಯಂತಿ ಅರ್ಥಪೂರ್ಣ ಆಚರಣೆಗೆ ಜಿಲ್ಲಾಧಿಕಾರಿ ಸೂಚನೆ

**ವಿಜಯಪುರ:** ಜಿಲ್ಲಾಡಳಿತದ ಮೂಲಕ ಅ.7 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ವಿವಿಧ ಇಲಾಖೆಗಳಿಗೆ ವಹಿಸಿದ ಜವಾಬ್ದಾರಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಗುರುವಾರ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯ ಕುರಿತು ಜಿಲ್ಲಾಧಿಕಾರಿಗಳಾದ ಡಾ.ಆನಂದ.ಕೆ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಅ.7ರ ಬೆಳಿಗ್ಗೆ 9:30 ಗಂಟೆಗೆ ನಗರದ ಶ್ರೀ ಸಿದ್ಧೇಶ್ವರ ದೇವಸ್ಥಾನದಿಂದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದವರೆಗೆ ವಿವಿಧ ಸತ್ತಿಗೆ ಕುಣಿತ, ಜಗ್ಗಲಿಗೆ ಕುಣಿತ, ಗೊಂಬೆ ಕುಣಿತ ಸೇರಿದಂತೆ ವಿವಿಧ ಕಲಾತಂಡಗಳೊಂದಿಗೆ ಶ್ರೀ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ, ಬೆಳಿಗ್ಗೆ 10:30ಕ್ಕೆ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು. ಜಯಂತಿ ಕಾರ್ಯಕ್ರಮಕ್ಕೆ ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ, ವೇದಿಕೆ ಅಲಂಕಾರ, ಜಯಂತಿ ಕಾರ್ಯಕ್ರಮಕ್ಕೆ ಅತಿಥಿಗಳಿಗೆ ಆಹ್ವಾನ, ಮಹರ್ಷಿ ವಾಲ್ಮೀಕಿ ಅವರ ಜೀವನ ಚರಿತ್ರೆ ಅವರ ವಿಚಾರಧಾರೆಗಳ ಕುರಿತು ಉಪನ್ಯಾಸ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಯಲ್ಲಿ ಹೆಚ್ಚು ಅಂಕಗಳಿಸಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸುವುದು ಸೇರಿದಂತೆ ವೇದಿಕೆ ಕಾರ್ಯಕ್ರಮಕ್ಕೆ ಅಗತ್ಯ ರೂಪುರೇಷೆ ಸಿದ್ಧಪಡಿಸಿಕೊಳ್ಳುವುದು ಹಾಗೂ ಕುಡಿಯುವ ನೀರಿನ ವ್ಯವಸ್ಥೆ, ವೃತ್ತಗಳಿಗೆ ದೀಪಾಲಂಕಾರ,ಆಸನ ವ್ಯವಸ್ಥೆ,,ವೇದಿಕೆ ಸಿದ್ಧತೆ,ನೃತ್ಯ ರೂಪಕ ಏರ್ಪಡಿಸುವುದೂ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ವಿವಿಧ ಸಮಾಜದ ಮುಖಂಡರು ತಮ್ಮ ಅಗತ್ಯ ಸಲಹೆ ಸೂಚನೆ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ ಅವರು ಎಲ್ಲರನ್ನೂ ಸ್ವಾಗತಿಸಿ, ಕಾರ್ಯಕ್ರಮದ ರೂಪುರೇಷೆ ಕುರಿತು ಮಾಹಿತಿ ನೀಡಿದರು. ಸಭೆಯಲ್ಲಿ ಡಿವೈಎಸ್ಪಿ ಬಸವರಾಜ ಎಲಿಗಾರ,ಜಿಲ್ಲಾ ಶಸ್ತ್ರಚಿಕಿತ್ಸಕರಾದ ಶಿವಾನಂದ ಮಾಸ್ತಿಹೊಳಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬದ್ರುದ್ದಿನ್ ಸೌದಾಗರ್, ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಎಂ.ಎಚ್.ಬಾಂಗಿ,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪುಂಡಲಿಕ ಮಾನವರ, ಕ್ರೀಡಾಧಿಕಾರಿ ರಾಜಶೇಖರ ದೈವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ ವಿವಿಧ ಸಮಾಜದ ಮುಖಂಡರಾದ ಮಲ್ಲಿಕಾರ್ಜುನ ಬಟಗಿ, ಮರಳಸಿದ್ಧ ನಾಯ್ಕೋಡಿ, ಸಿದ್ದು ರಾಯಣ್ಣವರ, ಅಶೋಕ ಛಲವಾದಿ, ಮಹಾದೇ ಕತ್ನಳ್ಳಿ, ಕೃಷ್ಣಾ,ರವಿ ಬಿಸ್ನಾಳ, ಅಮಿತ ನಾಯ್ಕೊಡಿ, ವಿದ್ಯಾವತಿ ಅಂಕಲಗಿ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿರಿದ್ದರು.

## ೩೦ರಂದು ರೇಬಿಸ್ ರೋಗದ ಕುರಿತು ಜಿಲ್ಲಾ ಮಟ್ಟದ ಕಾರ್ಯಕ್ರಮ

**ಕೊಪ್ಪಳ:** ಜಿಲ್ಲೆಯನ್ನು 2030 ರ ಅಂತ್ಯಕ್ಕೆ ಹುಚ್ಚುನಾಯಿ ರೋಗ(ರೇಬಿಸ್) ಮುಕ್ತ ಜಿಲ್ಲೆಯನ್ನಾಗಿಸುವ ನಿಟ್ಟಿನಲ್ಲಿ ಸೆ.30 ರಂದು ರೇಬಿಸ್ ರೋಗದ ಕುರಿತು ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಜಿಲ್ಲಾ ಪ್ರಾಣಿ ದಯಾ ಸಂಘ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಸೆ.30 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತಿಯ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ.ಇಟ್ನಾಳ ಅವರು ವಹಿಸಿಕೊಳ್ಳುವರು. ಕಾರ್ಯಕ್ರಮದಲ್ಲಿ ಜಿಲಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಸಹಾಯಕ ಆಯುಕ್ತರು, ಜಂಟಿ ಕೃಷಿ ನಿರ್ದೇಶಕರು, ಕಿಮ್ಸ್ ನಿರ್ದೇಶಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಭಾಗವಹಿಸುವರು. ರೇಬಿಸ್ ರೋಗದ ಕುರಿತು ತಜ್ಞ ವಿಜ್ಞಾನಿಗಳು ಉಪನ್ಯಾಸ ನೀಡುವರು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ಪಿ.ಎಂ. ಮಲ್ಲಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಗವಾನ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಮಹಾಪೌರರಾದ ಜ್ಯೋತಿ ಪಾಟೀಲ ಅಭಿಮತ

# ವಿಶ್ವಕರ್ಮ ಸಮುದಾಯವು ಕರಕುಶಲತೆಗೆ ಆಧಾರ ಸ್ತಂಭ

**ಧಾರವಾಡ:** ವಿಶ್ವಕರ್ಮ ಸಮುದಾಯವು ಭಾರತೀಯ ಸಂಸ್ಕೃತಿ ಮತ್ತು ಕರಕುಶಲತೆಗೆ ಆಧಾರ ಸ್ತಂಭವಾಗಿದೆ. ಶಿಲ್ಪಕಲೆ, ವಾಸ್ತುಶಿಲ್ಪ ಮತ್ತು ಮರಗೆಲಸ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅವರ ಕೌಶಲ್ಯ ಮತ್ತು ಪರಿಣತಿಯು ಅನನ್ಯವಾದದ್ದು ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಮಹಾಪೌರರಾದ ಜ್ಯೋತಿ ಪಾಟೀಲ ಅವರು ಹೇಳಿದರು.

ಅವರು ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಭಾಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ಭಗವಾನ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ನಮ್ಮ ಸುತ್ತಮುತ್ತ ನಾವು ಕಾಣುವ ಅನೇಕ ಅದ್ಭುತ ಕಲಾಕೃತಿಗಳ ಹಿಂದೆ ವಿಶ್ವಕರ್ಮರ ಶ್ರಮ ಮತ್ತು ಕೌಶಲ್ಯ ಅಡಗಿದೆ. ಆಧುನಿಕ ಯುಗದಲ್ಲಿಯೂ ವಿಶ್ವಕರ್ಮ ಸಮುದಾಯವು ತಮ್ಮ ಸಾಂಪ್ರದಾಯಿಕ ಕೌಶಲ್ಯಗಳನ್ನು ಉಳಿಸಿಕೊಂಡು ಬಂದಿದೆ. ಜೊತೆಗೆ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಸಮಕಾಲೀನ ಸಮಾಜದ ಬೇಡಿಕೆಗಳಿಗೆ ಅನುಗುಣವಾಗಿ ತಮ್ಮ ವೃತ್ತಿಗಳನ್ನು ಮುಂದುವರೆಸುತ್ತಿದ್ದಾರೆ ಎಂದು ಹೇಳಿದರು.




ಸಮಾಜದಲ್ಲಿ ಅವರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಅವರ ಕೌಶಲ್ಯ ಮತ್ತು ಜ್ಞಾನವನ್ನು ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಎಲ್ಲರೂ ಬಡಗಿಯರ ಕಲೆಯ ಮೇಲೆ ಅವಲಂಬಿತರಾಗಿದ್ದಾರೆ. ಕೇವಲ ಮರದಿಂದ ವಸ್ತುಗಳನ್ನು ತಯಾರಿಸುವುದಿಲ್ಲ, ಬದಲಾಗಿ ಪ್ರತಿಯೊಬ್ಬರು ಮನೆ ಕಟ್ಟುವ ಕನಸುಗಳನ್ನು ನನಸಾಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಅವರ ಕೌಶಲ್ಯ, ಶ್ರಮ ಮತ್ತು ಸೃಜನಶೀಲತೆ ಸಮಾಜಕ್ಕೆ ನೀಡುವ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು.

ವೇದಗಳಲ್ಲಿ ಮತ್ತು ಪುರಾಣಗಳಲ್ಲಿ ವಿಶ್ವಕರ್ಮರು ಸೃಷ್ಟಿಯ ರೂವಾರಿಗಳೆಂದು ಉಲ್ಲೇಖವಾಗಿದೆ. ದೇವತೆಗಳ ಅರಮನೆಗಳು, ಆಯುಧಗಳು ಮತ್ತು ವಿವಿಧ ನಿರ್ಮಾಣಗಳ ಶಿಲ್ಪಿ ಎಂದು ಉಲ್ಲೇಖಿಸಿರುವುದನ್ನು ವಿವರಿಸಿದರು. ದ್ವಾರಕಾ ನಗರ ನಿರ್ಮಾಣ, ಇಂದ್ರನ ವಜ್ರಾಯುಧ ಸೃಷ್ಟಿ, ಲಂಕೆಯ ನಿರ್ಮಾಣದಂತಹ ಅದ್ಭುತ ಕೃತಿಗಳಿಗೆ ವಿಶ್ವಕರ್ಮರೇ ಕಾರಣ ಎಂದು ಅವರು ಉದಾಹರಿಸಿದರು. ಇಂದಿನ ಆಧುನಿಕ ಎಂಜಿನಿಯರಿಂಗ್‌ಗೆ ಅಡಿಪಾಯ ಹಾಕಿದವರು ಭಗವಾನ್ ವಿಶ್ವಕರ್ಮರು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಮಾತನಾಡಿ, ಪೂರ್ವಜರು ಕೈಯಿಂದ ಮಾಡಿದ ಕಲೆಗಳು, ಅಂದರೆ ಕರಕುಶಲ ವಸ್ತುಗಳು, ಸಾಂಪ್ರದಾಯಿಕ ಚಿತ್ರಕಲೆಗಳು, ಶಿಲ್ಪಕಲೆಗಳು ಇತ್ಯಾದಿಗಳು ಶತಮಾನಗಳ ಕಾಲ ಉಳಿದು ತಮ್ಮದೇ ಆದ ಮಹತ್ವವನ್ನು ಉಳಿಸಿಕೊಂಡಿವೆ ಎಂದು ಅವರು ಹೇಳಿದರು.

ಕರಕುಶಲ ಕಲೆಗಳು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಭಾಗವಾಗಿವೆ. ಪ್ರತಿಯೊಂದು ಕೈಯಿಂದ ಮಾಡಿದ ವಸ್ತುವು ಅದರ ಸೃಷ್ಟಿಕರ್ತನ ಕೌಶಲ್ಯ, ಶ್ರಮ ಮತ್ತು ಕಥೆಯನ್ನು ಹೇಳುತ್ತದೆ. ಇವುಗಳು ಕೇವಲ ವಸ್ತುಗಳಲ್ಲ, ಬದಲಿಗೆ ನಮ್ಮ ಇತಿಹಾಸ ಮತ್ತು ಭಾವನೆಗಳನ್ನು ಒಳಗೊಂಡಿರುತ್ತವೆ ಎಂದು ತಿಳಿಸಿದರು.

ಕುಲಕಸುಬುಗಳು ಕೇವಲ ಆರ್ಥಿಕ ಮೂಲವಲ್ಲ, ಅವು ನಮ್ಮ ಗುರುತು ಮತ್ತು ಹೆಮ್ಮೆ. ಈ ಕಲೆಗಳನ್ನು ಉಳಿಸಿಕೊಂಡು ಹೋಗುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಧಾರವಾಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಗುರುನಾಥ ಕೆ. ಬಡಿಗೇರ ಅವರು ವಿಶೇಷ ಉಪನ್ಯಾಸ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿದರು. ಮಾಜಿ ಶಾಸಕಿ ಸೀಮಾ ಮಸೂತಿ ಅವರು ಮಾತನಾಡಿದರು. ವೇದಿಕೆಯಲ್ಲಿ ಶ್ರೀ ಮೌನೇಶ್ವರ ಧರ್ಮನಿಧಿ ಸಂಸ್ಥೆ ಟ್ರಸ್ಟ್‌ನ ಅಧ್ಯಕ್ಷ ಮಹಾರುದ್ರ. ಬ. ಬಡಿಗೇರ, ವಿಶ್ವಕರ್ಮ ಮಹಾ ಒಕ್ಕೂಟದ ವಿಭಾಗೀಯ ಅಧ್ಯಕ್ಷ ನಿರಂಜನ ಎನ್.ಬಡಿಗೇರ, ಜಿಲ್ಲಾ ಅಧ್ಯಕ್ಷ ಸಂತೋಷ ಬಡಿಗೇರ, ವಿಶ್ವಕರ್ಮ ಮಹಾಸಭಾ ಜಿಲ್ಲಾಧ್ಯಕ್ಷ ಕಾಳಪ್ಪ ಬಡಿಗೇರ, ವಿಶ್ವಕರ್ಮ ನೌಕರರ ಸಂಘದ ಅಧ್ಯಕ್ಷ ವಿಠ್ಠಲ ಕಮ್ಮಾರ ಹಾಗೂ ಸಮಾಜದ ಮುಖಂಡರಾದ ವಸಂತ ಅರ್ಕಾಚಾರ್, ಭಾಸ್ಕರ್ ಬಡಿಗೇರ, ಸುಮಿತ್ರಾ ಬಡಿಗೇರ ಇದ್ದರು. ಅಶ್ವಿನಿ ಎನ್. ಪತ್ತಾರ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ರವಿ ಕುಲಕರ್ಣಿ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆಗೈದ ಸಾಧಕರಿಗೆ ಕಾರ್ಯಕ್ರಮದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು ಹಾಗೂ ವಿಶ್ವಕರ್ಮ ಸಮಾಜದವರೂ, ಸಾರ್ವಜನಿಕರು ಭಾಗವಹಿಸಿದ್ದರು.

## ಜಿಲ್ಲೆಯಾದ್ಯಂತ ಸ್ವಚ್ಛತಾ ಹೀ ಸೇವಾ ಜನಾಂದೋಲನ




**ಧಾರವಾಡ:** ಮಹಾತ್ಮಗಾಂಧಿ ಜಯಂತಿ ಅಂಗವಾಗಿ ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 2 ರವರೆಗೆ ಜಿಲ್ಲೆಯಾದ್ಯಂತ ಸ್ವಚ್ಛತಾ ಹೀ ಸೇವಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸ್ವಚ್ಚತೆಯೇ ಸೇವೆ-2025 ಎಂಬ ವಿಶೇಷ ಜನಾಂದೋಲನ ಆಯೋಜಿಸಲಾಗಿದೆ. ಸ್ವಚ್ಛೋತ್ಸವ ಎಂಬ ಘೋಷ ವಾಕ್ಯದಡಿ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ತಿಳಿಸಿದ್ದಾರೆ.

ಅದರಂತೆ ಜಿಲ್ಲಾ ಪಂಚಾಯತ ಆವರಣದಲ್ಲಿ ಸಸಿ ನೆಡುವ ಹಾಗೂ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸುವ ಮೂಲಕ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳು ಅಭಿಯಾನಕ್ಕೆ ಚಾಲನೆ ನೀಡಿದರು.

ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವಿವಿಧ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಸದ ಸ್ಥಳ ಗುರುತಿಸಿ ಸ್ವಚ್ಛಗೊಳಿಸುವುದು, ಸ್ವಚ್ಛ ಹಸಿರು ಉತ್ಸವ ಆಚರಣೆ, ವಿವಿಧ ಚಟುವಟಿಕೆ, ಒಂದು ದಿನ ಒಂದು ಗಂಟೆ ಎಲ್ಲರೂ ಒಟ್ಟಿಗೆ ಶ್ರಮದಾನ ಹಾಗೂ ಇತರೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಈ ಅಭಿಯಾನದಲ್ಲಿ ಎಲ್ಲರೂ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಮುಖ್ಯ ಯೋಜನಾಧಿಕಾರಿಗಳು, ವ್ಯವಸ್ಥಾಪಕರು, ಜಿಲ್ಲಾ ಪಂಚಾಯತ ಎಲ್ಲ ಸಿಬ್ಬಂದಿಗಳು ಹಾಗೂ ಸ್ವ-ಸಹಾಯ ಸಂಘದ ಮಹಿಳೆಯರು ಹಾಜರಿದ್ದರು.

## ವಾಲ್ಮೀಕಿ ಜಯಂತಿ ವಿಜೃಂಭಣೆಯಿಂದ ಆಚರಣೆ



**ಹಾವೇರಿ:** ಜಿಲ್ಲಾಡಳಿತದಿಂದ ಜಿಲ್ಲಾ ಮಟ್ಟದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅರ್ಥಪೂರ್ಣ ಹಾಗೂ ವಿಜೃಂಭಣೆ ಆಚರಣೆಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಪೂರ್ವ ಸಿದ್ಧತೆ ಸಭೆ ಅಧ್ಯಕ್ಷತೆ ವಹಿಸಿ, ಸಮಾಜದ ಮುಖಂಡರೊಂದಿಗೆ ಚರ್ಚಿಸಿದ ಅವರು, ಸಮಾಜದ ಮುಖಂಡರ ನಿರ್ಣಯದಂತೆ ಅಕ್ಟೋಬರ್ 7 ರಂದು ಮಧ್ಯಾಹ್ನ 12 ಗಂಟೆಗೆ ಹಾವೇರಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದೆ. ಬೆಳಿಗ್ಗೆ 10ಗಂಟೆಗೆ ಮುರುಘರಾಜೇಂದ್ರ ಮಠದಿಂದ ಮೆರವಣಿಗೆ ಜರುಗಲಿದೆ ಎಂದರು.

ಮೆರವಣಿಗೆಗೆ ಕಲಾ ತಂಡ, ಪೊಲೀಸ್ ಬಂದೋಬಸ್ತ್, ವೇದಿಕೆ, ಆಸನ, ಕುಡಿಯುವ ನೀರು, ಆಮಂತ್ರಣಪತ್ರಿಕೆ, ಉಪಹಾರ, ವಿದ್ಯಾರ್ಥಿಗಳಿಗೆ ಸನ್ಮಾನ, ಉಪನ್ಯಾಸಕರ ಆಯ್ಕೆ ಮಾಡಲು ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪ್ರಭಾರ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಶಾಂತ ವರಗಪ್ಪನವರ ಕಾರ್ಯಕ್ರಮದ ರೂಪರೇಷೆಗಳ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎಲ್.ನಾಗರಾಜ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಅಶೋಕ ಶಾಸ್ತ್ರಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಜಿಲ್ಲಾ ಹಾಗೂ ತಾಲೂಕಾ ಅಧ್ಯಕ್ಷರು,ಸದಸ್ಯರು, ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಪ್ರಾಣಕಳೆ ಕೊಡುವ ಮತ ವಿಶ್ವಕರ್ಮ ಸಮಾಜ

**ಮುದ್ದೇಬಿಹಾಳ:** ಪಂಚಮುಖಗಳಿಂದ ಹುಟ್ಟಿರತಕ್ಕಂತ ವಿಶ್ವಕರ್ಮ ಇಡೀ ವಿಶ್ವದ ಆಗುಹೋಗುಗಳನ್ನು ಬಲ್ಲವನಾಗಿದ್ದಾನೆ ಯಾಕೆಂದರೆ ಒಂದೊಂದು ಮತಗಳಲ್ಲಿ ಒಬ್ಬೊಬ್ಬರನ್ನು ಶ್ರೀ ಕೃಷ್ಣ ಪರಮಾತ್ಮನು ಮಾಡಿರುತ್ತಾನೆ ಅದರಲ್ಲಿ ವಿಶ್ವಕರ್ಮ ಎನ್ನುವದು ಒಂದು ಮತವಾಗಿದ್ದು ಇದು ಪ್ರಾಣಕಳೆ ಕೊಡುವಂತ ವಿಶ್ವಕರ್ಮ ಮತದ ಸಮಾಜ ಇದಾಗಿದೆ ಎಂದು ಮುರನಾಳದ ಮಳೆರಾಜೇಂದ್ರಸ್ವಾಮಿಮಠದ ಶ್ರೀ ಜಗನ್ನಾಥ ಮಹಾಸ್ವಾಮಿಗಳು ನುಡಿದರು.

ಬುಧವಾರರಂದು ಪಟ್ಟಣದ ಹುಡ್ಕೋ ಹತ್ತಿರದ ಶಿರವಾಳ ಬಡಾವಣೆಯಲ್ಲಿ ವಿಶ್ವಕರ್ಮ ಸಮಾಜ ಬಾಂಧವರ ವತಿಯಿಂದ ಏರ್ಪಡಿಸಲಾದ ವಿಶ್ವಕರ್ಮ ಜಯಂತ್ಯೋತ್ಸವದ ಸಾನಿಧ್ಯ ವಹಿಸಿ ಮಾತನಾಡುತ್ತಿದ್ದ ಅವರು ಕಲ್ಲಿನಲ್ಲಿ ಕಟ್ಟಿಗೆಯಲ್ಲಿ ಹಾಗೂ ಮಣ್ಣಿನಲ್ಲಿ ದೇವರನ್ನು ಕಾಣುತ್ತಲಿದ್ದೇವೆ ಎಲ್ಲದಕ್ಕೂ ಸಹ ಜಡವಾದದ್ದು ಸಂಸ್ಕಾರವಾಗಿದ್ದು ಸಂಸ್ಕಾರವಾದಾಗ ಭಗವಂತನಾಗುತ್ತಾನೆಂದರು ನಾವೂ ಕೂಡಾ ಸಂಸ್ಕಾರವಂತರಾಗಿದ್ದೇವೆ ಎಂದು ಹೇಳಿದ ಶ್ರೀಗಳು ಸಾನಗ, ಸನಾತನ, ಅಬೂವನ, ಅಂದರೆ ಶಿಲ್ಪಾಚಾರ್ಯರು ಎಂದು ಪರಿಗಣಿಸಲಾಗುತ್ತದೆ ಈ ಎಲ್ಲರೂ ಮೂರ್ತಿಯನ್ನು ಮಾಡುವವರಾಗಿದ್ದು ವಿಶ್ವಕರ್ಮ ಸಮಾಜ ಈ ಸೇವಾ ಕಾರ್ಯದಲ್ಲಿ ಮುಂದುವರೆದಿದ್ದರೂ ಚಿನ್ನದ ಬೆಲೆ ಏರಿದೆ ಆದರೆ ವಿಶ್ವಕರ್ಮ ಸಮಾಜದವರು ಅದರಂತೆ ಮೇಲ್ಮಟ್ಟಕ್ಕೇರುವಂತಹ ಹವ್ಯಾಸ ಬೆಳೆಸಿಕೊಳ್ಳಬೇಕು ಸಮಾಜ ಬಾಂಧವರೆಲ್ಲರೂ ಸಂಘಟಿತವಾಗಬೇಕೆಂದು ಬಹುಮಾರ್ಮಿಕವಾಗಿ ವಿವರಿಸಿದರು.



ಇನ್ನೋರ್ವ ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಗಣಿ ಆರ್‌ಸಿ ಸರ್ಕಾರಿ ಪದವಿಪೂರ್ವ ಕಾಲೇಜ್ ನ ಉಪನ್ಯಾಸಕರಾದ ಬೀಮರಾವ ಬಡಿಗೇರ ಅವರು ಮಾತನಾಡಿ ವಿಶ್ವಕರ್ಮ ದೇವಾದಿದೇವತೆಗಳಿಗೆ ಆಯುಧಗಳನ್ನು ಮಾಡಿಕೊಟ್ಟಿದ್ದಾನೆ ಆ ಆಯುಧಗಳಿಂದಲೇ ದುಷ್ಟರನ್ನು ಸಂಹಾರ ಮಾಡಲಾಗಿದೆ ಎಂದ ಅವರು 81 ಮತ್ತು 82 ನೇ ಸೂಕ್ತದಲ್ಲಿರುವ ವಿಶ್ವಕರ್ಮನ 10 ನೇ ಮಂಡಲದಲ್ಲಿ ಜಗತ್ತನ್ನು ಸೃಷ್ಟಿ ಮಾಡಿದ ವಿಶ್ವಕರ್ಮ ಪರಬ್ರಹ್ಮನ ವಂಶಸ್ಥನೆನ್ನಲಾಗಿದ್ದು ಪೌರಾಣಿಕ ಇತಿಹಾಸ ಹಿನ್ನೆಲೆಯಲ್ಲಿ ರಾಮಸೇತುವೆ ನಿರ್ಮಾಣ ಮಾಡಿದಂತಹ ನಳನು ಇದೇ ವಂಶಸ್ಥನಾಗಿದ್ದು ಇಂದಿನ ದಿನಮಾನದಲ್ಲಿ ಕಲೆ ಹಾಗೂ ಕಲಾಕೃತಿಗಳನ್ನು ನಿರ್ಮಾಣ ಮಾಡಿ ಅದಕ್ಕೆ ಸೂಕ್ತ ರೂಪಗಳನ್ನು ನೀಡಿ ವಿದೇಶಕ್ಕೆ ರಫ್ತು ಮಾಡುವಂತಹ ಕಾರ್ಯ ಮಾಡಬೇಕು ಶಿಕ್ಷಣವಂತರಾಗುವದು ಇನ್ನು ಅತ್ಯಗತ್ಯವಾಗಿದೆ ಸಮಾಜ ಬಾಂಧವರು ಸ್ವತಂತ್ರವಾಗಿ ಉದ್ಯಮ ಸ್ಥಾಪಿಸಿ ಸರ್ಕಾರಿ ಉದ್ಯೋಗದಲ್ಲಿ ತೊಡಗುವಂತಹ ವ್ಯವಸ್ಥೆಯಾಗದಿದ್ದರೂ ಗುಡಿ ಕೈಗಾರಿಕೆ ಮೂಲಕ ಉದ್ಯಮವನ್ನು ಆರಂಭಿಸಿ ಮಹತ್ವದ ಸಾಧನೆ ಮಾಡುತ್ತಾ ಸಾಗಿ ಇಡೀ ಸಮಾಜವೇ ಒಗ್ಗಟ್ಟಾಗಿ ರಾಜಕೀಯ ಮೀಸಲಾತಿಯನ್ನು ಪಡೆಯಲು ಅರ್ಹರಾಗುವ ಕಾರ್ಯಕ್ಕೆ ಮುಂದಾಗಬೇಕೆಂದರು.

ವಿಶ್ವಕರ್ಮ ಮಹಾಸಭಾದ ತಾಲೂಕಾ ಅಧ್ಯಕ್ಷರಾದ ಮಲ್ಲಣ್ಣ ಪತ್ತಾರ(ತಾರನಾಳ), ಶಿಕ್ಷಕಿ ಗೀತಾ ಶಿರವಾಳ ಅವರು ಮಾತನಾಡಿದರು.

ಕಾಳಿಕಾದೇವಿ ಮಂದಿರದಿಂದ ಶಿರವಾಳ ಬಡಾವಣೆ ವರೆಗೆ ಸಕಲವಾಧ್ಯ ವೈಭವದೊಂದಿಗೆ ವಿಶ್ವಕರ್ಮ ಸಮಾಜ ಬಾಂದವರಿಂದ ವಿಶ್ವಕರ್ಮ ಅವರ ಭಾವಚಿತ್ರದ ಮೆರವಣಿಗೆ ಜರುಗಿ ನಂತರ ಸಭೆಯಾಗಿ ಮಾರ್ಪಟ್ಟಿತು.

ಈ ಸಭೆಯ ದಿವ್ಯ ಸಾನಿಧ್ಯವನ್ನು ನಾಲತವಾಡದ ಬ್ರಹ್ಮಾಂಡಬೇರಿ ಮಠದ ಶ್ರೀ ಪಂಪಾಪತಿ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು.

ಕಾಳಿಕಾದೇವಿ ಮಂದಿರದ ಅರ್ಚಕ ಸುರೇಶ ಆಚಾರ್ಯ, ತಾಲೂಕಾ ಅಧ್ಯಕ್ಷ ಮಲ್ಲಣ್ಣ ಪತ್ತಾರ, ವಿಜಯಕುಮಾರ ಬಡಿಗೇರ, ಚಂದ್ರಶೇಖರ ಪತ್ತಾರ, ಕರುಣೇಶ ಪತ್ತಾರ, ಮೌನೇಶ ಪತ್ತಾರ, ಕಾಳಪ್ಪ ಬಡಿಗೇರ, ವಿರುಪಾಕ್ಷಿ ಪತ್ತಾರ, ನಾರಾಯಣ ದೋಟಿಹಾಳ, ಕಾಶೀಪತಿ ಪತ್ತಾರ, ಕಾಶೀನಾಥ ಬಡಿಗೇರ, ಸುರೇಶ ಪತ್ತಾರ, ಮೌನೇಶ ಮಡಿಕೇಶ್ವರ, ಗಂಗಾಧರ ಬಾಗಲಕೋಟ, ಶಿವಾನಂದ ನಂದರಗಿ, ಮಳೆಪ್ಪ ಪತ್ತಾರ, ಬಸವರಾಜ ಬಡಿಗೇರ, ಗಂಗಾಧರ ಮಾಧುಳ, ಮಾನಪ್ಪ ಪತ್ತಾರ, ಕಾಳಪ್ಪ ಬಡಿಗೇರ, ಪುರಸಭೆ ಸದಸ್ಯರಾದ ಸಹನಾ ಬಡಿಗೇರ, ಗೌರಿ ಪತ್ತಾರ, ಮುಕ್ತಾ ಬಡಿಗೇರ, ವಿದ್ಯಾ ಕಂಚಗಾರ, ಗೀತಾ ಶಿರವಾಳ, ಮೇಘನಾ ಬಡಿಗೇರ, ಭಾಗ್ಯ ಬಡಿಗೇರ, ಕಾಮಾಕ್ಷಿ ಪತ್ತಾರ ಸೇರಿದಂತೆ ಸಮಾಜ ಬಾಂಧವರು ಹಾಗೂ ಗಣ್ಯಮಾನ್ಯರು ಪಾಲ್ಗೊಂಡಿದ್ದರು.

## ಕರಾಟೆ ತರಬೇತಿದಾರರಿಂದ ಅರ್ಜಿ ಆಹ್ವಾನ

**ಹಾವೇರಿ:** ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆ ಹಾಗೂ ವಸತಿ ಕಾಲೇಜುಗಳಲ್ಲಿ ದಾಖಲಾತಿ ಪಡೆದು 6.7.8.9 ಮತ್ತು 11ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಪ್ರಸಕ್ತ 2025-26 ನೇ ಸಾಲಿಗೆ ಕರಾಟೆ ತರಬೇತಿ ನೀಡಲು ಮಹಿಳಾ ಕರಾಟೆ ತರಬೇತಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಕರಾಟೆ-ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಸೆಪ್ಟೆಂಬರ್-2025 ರಿಂದ ಪ್ರಾರಂಭಿಸಿ, ನಿಗದಿತ 48 ಘಂಟೆಗಳ (6 ತಿಂಗಳ) ಅವಧಿಗಳಲ್ಲಿ ವಾರದಲ್ಲಿ 2 ದಿನಗಳಂತೆ ದಿನಕ್ಕೆ 60 ನಿಮಿಷಗಳಲ್ಲಿ ನುರಿತ ಕರಾಟೆ ತರಬೇತಿದಾರರಿಂದ ಕರಾಟೆ-ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ಇಲಾಖೆಯಿಂದ ಆಯೋಜಿಸಲಾಗಿರುತ್ತದೆ.

ತರಬೇತಿ ನೀಡಲು ಕಡ್ಡಾಯವಾಗಿ ಮಹಿಳಾ ತರಬೇತಿದಾರರನ್ನು ಆಯ್ಕೆ ಮಾಡಬೇಕಾಗಿರುತ್ತದೆ. ಆಸಕ್ತ ತರಬೇತುದಾರರು ಇಚ್ಛಿಸಿದ ವಸತಿ ಶಾಲೆ ಹಾಗೂ ಕಾಲೇಜುಗಳಿಗೆ ದಿನಾಂಕ 22-09-2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಅಲ್ಪಸಂಖ್ಯಾತರ ಮೌಲಾನಾ ಆಜಾದ ಭವನ ಶಿವಾಜಿ ನಗರ 3ನೇ ಕ್ರಾಸ್ ಹಾವೇರಿ ಕಚೇರಿ ದೂರವಾಣಿ ಸಂಖ್ಯೆ 08375-234505 ಕೆಲಸದ ಸಮಯದಲ್ಲಿ ಹಾಗೂ ಸಂಭಂಧಿಸಿದ ಎಲ್ಲಾ ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಟೆಕ್ನಿಶಿಯನ್ ತರಬೇತಿ

**ಹಾವೇರಿ:** ಹುಬ್ಬಳ್ಳಿಯ ಜಿಟಿಟಿಸಿ – ಮಲ್ಟಿ ಸ್ಕಿಲ್ ಡೆವಲಪ್‌ಮೆಂಟ್ ಸೆಂಟರ್‌ನಲ್ಲಿಬೆಂಗಳೂರಿನ ಬಾಷ್ ಇಂಡಿಯಾ ಪ್ರತಿಷ್ಠಾನದ ಸಹಯೋಗದಲ್ಲಿ 3 ತಿಂಗಳ ಕಾರ್ ಸರ್ವಿಸ್ ಟೆಕ್ನಿಶಿಯನ್ ತರಬೇತಿ ಆಯೋಜಿಸಲಾಗಿದೆ. ಹತ್ತನೇ ತರಗತಿ ಪಾಸ್, ಪಿಯುಸಿ/ಡಿಪ್ಲೋಮಾ ಯಾವುದೇ ಡಿಗ್ರೀ ಉತ್ತೀರ್ಣ ಅಥವಾ ಅನುತ್ತೀರ್ಣರಾದ 18 ರಿಂದ 28 ವಯೋಮಿತಿಯೊಳಗಿನ ಅಭ್ಯರ್ಥಿಗಳು ಈ ತರಬೇತಿ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.

ಅಭ್ಯರ್ಥಿಗಳಿಗೆ ವಾಹನ ವ್ಯವಸ್ಥೆ ಅಧ್ಯಯನ, ಕಾರ್ ವಾಹನದ ತಪಾಸಣೆ, ದುರಸ್ತಿ, ನಿರ್ವಹಣೆ, ಬಿಡಿ ಭಾಗಗಳ ಜೋಡಣೆ, ಉಪಕರಣಗಳ ಬಳಕೆ, ಸಂವಹನ, ವ್ಯಕ್ತಿತ್ವ ವಿಕಸನ, ಮತ್ತು ಕಂಪ್ಯೂಟರ್ ತರಬೇತಿ ನೀಡಲಾಗುವುದು. ಈ ತರಬೇತಿಗಳು ಕೈಗಾರಿಕೆಗಳ ಅವಶ್ಯಕತೆಗಳಿಗೆ ಅನುಗುಣವಾದ ಪಠ್ಯಕ್ರಮವನ್ನು ಹೊಂದಿವೆ ಮತ್ತು ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಆಟೊಮೊಬೈಲ್ ಉದ್ಯಮ ಪರಿಣಿತರಿಂದ ತರಬೇತಿ ನೀಡಲಾಗುತ್ತದೆ.



## ವಿಶ್ವಕರ್ಮ ಜಯಂತ್ಯೋತ್ಸವ

**ಹಾವೇರಿ:** ವಿಶ್ವ ಕರ್ಮ ಜಯಂತಿಯನ್ನು ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಸರಳವಾಗಿ ಆಚರಿಸಲಾಯಿತು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಕಾರ್ಯಕ್ರಮದಲ್ಲಿ, ಅಪರ ಜಿಲ್ಲಾಧಿಕಾರಿ ಡಾ.ನಾಗರಾಜ್ ಅವರು ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಮಿಸಿದರು. ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜ ಬಾಂಧವರು ಉಪಸ್ಥಿತರಿದ್ದರು.

### ‘ಅಧಿಕಾರಿಗಳ ನಡೆ ವಸತಿ ನಿಲಯದ ಕಡೆ’ ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕ ಹಂಪಣ್ಣ ಕರೆ

# ವಸತಿ ನಿಲಯಗಳ ಸದುಪಯೋಗ ಮಾಡಿಕೊಳ್ಳಿ

**ತಾಳಿಕೋಟೆ:** ಸರ್ಕಾರ ಸಮಾಜದಲ್ಲಿರುವ ಹಿಂದುಳಿದ ಬಡ ಮಕ್ಕಳು ಚೆನ್ನಾಗಿ ಓದಿ ಮುಖ್ಯ ವಾಹಿನಿಗೆ ಬರುವಂತಾಗಲು ವಸತಿ ನಿಲಯಗಳನ್ನು ತೆರೆದು ಸಕಲ ಸೌಲಭ್ಯಗಳನ್ನು ಒದಗಿಸುತ್ತದೆ ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಮಾಡಿಕೊಳ್ಳಬೇಕು ಎಂದು ಮುದ್ದೇಬಿಹಾಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜ ಪ್ರಾಧ್ಯಾಪಕ ಹಂಪಣ್ಣ ಹೇಳಿದರು.

ತಾಲೂಕಿನ ಕೊಣ್ಣೂರ ಗ್ರಾಮದ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ಜಿಪಂ ವಿಜಯಪುರ ಹಾಗೂ ಸಮಾಜ ಕಲ್ಯಾಣ ಇಲಾಖೆ ಮುದ್ದೇಬಿಹಾಳ ಇವರ ಸಹಯೋಗದಲ್ಲಿ ಹಮ್ಮಿಕೊಂಡ ಅಧಿಕಾರಿಗಳ ನಡೆ ವಸತಿ ನಿಲಯದ ಕಡೆ ಮತ್ತು ಸ್ವಚ್ಛತಾ ಅಭಿಯಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತು ಮತ್ತು ಸಮಯಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಕಠಿಣ ಹಾಗೂ ನಿರಂತರ ಪರಿಶ್ರಮದಿಂದ ಮಾತ್ರ ಶ್ರೇಷ್ಠ ಸಾಧನೆ ಮಾಡಲು ಸಾಧ್ಯ ನೀವು ಇಲ್ಲಿ ಇದ್ದು ಚೆನ್ನಾಗಿ ಓದಿ ಜೀವನದಲ್ಲಿ ಒಳ್ಳೆಯ ಸಾಧನೆ ಮಾಡಿದರೆ ನಿಮ್ಮ ಹೆತ್ತವರಿಗೆ ಒಳ್ಳೆಯ ಹೆಸರು ಬರುವುದರ ಜೊತೆಗೆ ಸಮಾಜಕ್ಕೆ ಒಬ್ಬ ಒಳ್ಳೆಯ ನಾಗರಿಕ ಸಿಗುವಂತಾಗುತ್ತದೆ ಎಂದರು.




ಪ.ಜಾ.ಉ. ಯೋಜನೆ ಉಪನಿರ್ದೇಶಕರ ಕಚೇರಿ ಅಧೀಕ್ಷಕ ಅರವಿಂದ್ ಲಂಬು ಅವರು ಮಾತನಾಡಿ ವಿದ್ಯಾರ್ಥಿಗಳು ಸಮಯಪ್ರಜ್ಞೆಯೊಂದಿಗೆ ಶಿಸ್ತನ್ನು ಕಾಪಾಡಿಕೊಂಡು ಅಧ್ಯಯನಕ್ಕೆ ಹೆಚ್ಚು ಮಹತ್ವವನ್ನು ಕೊಡುವುದರ ಜೊತೆಗೆ ನಿಲಯ ಹಾಗೂ ತಮ್ಮ ಜೀವನದಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸ.ಕ.ಇ. ಮುದ್ದೇಬಿಹಾಳ ಕಚೇರಿ ಅಧೀಕ್ಷಕ ಶಿವಲಿಂಗ ಹಚಡದ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.

ಈ ಸಮಯದಲ್ಲಿ ಸಹಕಾರ ಅಭಿವೃದ್ಧಿ ಅಧಿಕಾರಿ ವಿ.ಎಸ್.ಉತ್ನಾಳ, ನಿಲಯ ಪಾಲಕರಾದ ಎಸ್.ಜಿ. ವಾಲಿಕಾರ,ಎಸ್. ಎನ್. ಮಲ್ಲಾಡೆ, ಎನ್ವಿ ಕೋರಿ, ಎಸ್. ಎಂ.ಕಲಬುರ್ಗಿ, ಎಂ.ಎಸ್.ತಾಳಿಕೋಟಿ, ಎಸ್.ಎನ್.ಭಾಸಗಿ, ಎಸ್.ಟಿ.ಸಲಗರ, ಎನ್.ಸಿ. ಗುಡಗುಂಟಿ, ನಿಲಯದ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಇದ್ದರು. ನಿಲಯ ಪಾಲಕ ಎನ್.ವಿ.ಕೋರಿ ಸ್ವಾಗತಿಸಿ ಕೊನೆಯಲ್ಲಿ ವಂದಿಸಿದರು.

# ಪ್ರಧಾನಿ ಜನ್ಮದಿನದ ಪ್ರಯುಕ್ತ ರಕ್ತದಾನ ಶಿಬಿರ

**ಮೂಡಲಗಿ:** ಹಣಬಲ, ತೋಳಬಲ, ಜಾತಿಬಲಗಳ ಮಧ್ಯೆ ಸುತ್ತುತ್ತಿರುವ ರಾಜಕಾರಣದಲ್ಲಿ ಸಾಧಾರಣ ವ್ಯಕ್ತಿಯೊಬ್ಬ ಅಸಾಧಾರಣ ಶಕ್ತಿಯಾಗಿ ಬೆಳೆದು ನಿಂತಿರುವ ಪ್ರಧಾನಿ ನರೇಂದ್ರ ಮೋದಿ ಅವರ ರಾಜಕೀಯ ಇತಿಹಾಸ ನಮ್ಮೆಲ್ಲರಿಗೂ ಒಂದು ಜೀವಂತ ಉದಾಹರಣೆಯಾಗಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ಪ್ರಧಾನಿ ನರೇಂದ್ರ ಮೋದಿ ವ್ಯಕ್ತಿತ್ವವನ್ನು ಬಣ್ಣಿಸಿದರು.

ಬುಧವಾರ ಕಲ್ಲೋಳಿ ಪಟ್ಟಣದ ಶ್ರೀ ಸತ್ಯಸಾಯಿ ಮಂದಿರ ಆವರಣದಲ್ಲಿ ಸಾಮಾಜಿಕ, ಆರ್ಥಿಕ ಮತ್ತು ಕಲ್ಯಾಣ (ಸೇವಾ) ಸಂಸ್ಥೆ, ಮಾಜಿ ಸೈನಿಕರ ಸಂಘ, ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆ ಕಲ್ಲೋಳಿ ಹಾಗೂ ರೋಟರಿ ರಕ್ತ ಭಂಡಾರ ಕೇಂದ್ರ ಗೋಕಾಕ ಇವರುಗಳ ಸಂಯುಕ್ತ ಆಶ್ರಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ 75ನೇ ಜನ್ಮದಿನದ ಪ್ರಯುಕ್ತ ಆಯೋಜಿಸಿದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿದ ಅವರು ಮಾತನಾಡಿದರು.

370 ನೇ ಆರ್ಟಿಕಲ್ ರದ್ದತಿ, ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ, ತ್ರಿವಳಿ ತಲಾಖ್ ರದ್ದು, ಉಚಿತ ಕೋವಿಡ್ ವ್ಯಾಕ್ಸಿನೇಷನ್, ಗರೀಬ್ ಕಲ್ಯಾಣ್ ಅನ್ನ ಯೋಜನೆ, ಆಯುಷ್ಮಾನ್ ಭಾರತ್, ಕಿಸಾನ್ ಸಮ್ಮಾನ್ ನಿಧಿ, ಉಚಿತ ಗ್ಯಾಸ್ ಸಂಪರ್ಕ, ರಾಷ್ಟ್ರೀಯ ಶಿಕ್ಷಣ ನೀತಿ, ಜಿ.ಎಸ್.ಟಿ ತೆರಿಗೆ ಜಾರಿ ಮತ್ತು ಗುರುತರ ಬದಲಾವಣೆ ಈ ರೀತಿ ಭಾರತದ ಆಡಳಿತ ವ್ಯವಸ್ಥೆಯಲ್ಲಿ ಅದ್ವಿತೀಯ ಬದಲಾವಣೆ ತಂದ ಪ್ರಧಾನಿ ನರೇಂದ್ರ ಮೋದಿ ವಿಕಸಿತ ಭಾರತದ ಸಂಕಲ್ಪದೊಂದಿಗೆ ಭಾರತವನ್ನು ಆತ್ಮನಿರ್ಭರ ಗೊಳಿಸುತ್ತಿದ್ದಾರೆ ಎಂದು ಅವರ ಕಾರ್ಯಶೈಲಿಯನ್ನು ಹಾಡಿ ಹೊಗಳಿದರು.



ದೇಶದ ಒಳಗೂ ಮತ್ತು ದೇಶದ ಹೊರಗೂ ಸವಾಲು ಒಡ್ಡಿರುವ ಭಯೋತ್ಪಾದಕ ಕೃತ್ಯಗಳನ್ನು ಮೆಟ್ಟಿನಿಂತು ರಾಜತಾಂತ್ರಿಕ ನೈಪುಣ್ಯತೆಯನ್ನು ತೋರಿಸಿ, ವಿಶ್ವದ ಹಿರಿಯಣ್ಣನ ಸ್ಥಾನದಲ್ಲಿ ಅವರು ನಿಂತಿರುವುದು ಐತಿಹಾಸಿಕ ಸತ್ಯ. ಇಂತಹ ನರೇಂದ್ರ ಮೋದಿಯವರ ಜನ್ಮದಿನವಾದ ಇಂದು ಇಡಿ ದೇಶ ಹಲವಾರು ಸೇವಾ ಕಾರ್ಯಗಳಲ್ಲಿ ತೊಡಗಿ ನಿಂತಿದೆ. ಭಗವಂತ ಅವರ ಆಯುಷ್ಯ ಮತ್ತು ಆರೋಗ್ಯ ವೃದ್ಧಿಗಾಗಿ ಪ್ರಾರ್ಥನೆಯನ್ನು ಸಲ್ಲಿಸಿ, ಶುಭ ಹಾರೈಸಿದರು.

ಶಿಬಿರದಲ್ಲಿ ರೋಟರಿ ಸಂಸ್ಥೆ ಅಧ್ಯಕ್ಷ ಗಿರೀಶ್ ಜಂವರ, ಕಾರ್ಯದರ್ಶಿ ಬಸವರಾಜ ಹುಳ್ಳೇರ, ಡಾ. ಬಿ. ಆರ್. ಕಪ್ಪಲಗುದ್ದಿ, ಸೋಮಣ್ಣ ಮಗದುಮ್ಮ, ಬಿಡಿಸಿಸಿ ಬ್ಯಾಂಕ ನಿರ್ದೇಶಕ ಸತೀಶ ಕಡಾಡಿ, ಶ್ರೀಶೈಲ ತುಪ್ಪದ, ಸಾಯಿ ಸಮಿತಿ ಸದಸ್ಯ ಸುರೇಶ ಕಬ್ಬೂರ, ಬಸವರಾಜ ಕಡಾಡಿ, ಡಾ ಭೀಮಪ್ಪಾ ಲಿಂಬೋಜಿ, ಅಡಿವೆಪ್ಪ ಕುರಬೇಟ, ಅಜೀತ ಚಿಕ್ಕೋಡಿ, ಶಿವಪ್ಪ ಬಿ.ಪಾಟೀಲ. ಈಶ್ವರ ಮುರಗೋಡ, ಈರಪ್ಪ ಢವಳೇಶ್ವರ, ಗುರು ಗಂಗಣ್ಣವರ ಈಶ್ವರ ಗಾಡವಿ ಸೇರಿದಂತೆ, ಕಾರ್ಯಕರ್ತರು ಹಾಗೂ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆ ಎನ್.ಎಸ್.ಎಸ್ ಘಟಕದ ವಿಧ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು. ಸೇವಾ ಸಂಸ್ಥೆಯ ಅಧ್ಯಕ್ಷ ಪರಪ್ಪ ಗಿರೆಣ್ಣವರ ಸ್ವಾಗತಿಸಿದರು, ಲೋಹಿತ ಕಲಾಲ ಕಾರ್ಯಕ್ರಮ ನಿರೂಪಿಸಿದರು.

### ದೇಶದಲ್ಲೇ ಮೊದಲ ಕ್ಷಯ ಮುಕ್ತ ಜಿಲ್ಲೆಯಾಗಿಸಲು ಪ್ರತಿಯೊಬ್ಬರೂ ಪಣತೊಡೋಣ; ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

# 2047ಕ್ಕೆ ಭಾರತ ದೇಶ ವಿಕಸಿತ ರಾಷ್ಟ್ರವಾಗಿ ಹೊರಹೊಮ್ಮಲಿದೆ

**ಹುಬ್ಬಳ್ಳಿ:** ಭಾರತ ದೇಶ ಪೋಲೀಯೋ ಮುಕ್ತ ರಾಷ್ಟ್ರವಾದಂತೆ 2026 ರ ಮಾರ್ಚ ತಿಂಗಳೊಳಗೆ ಕ್ಷಯ ಮುಕ್ತ ರಾಷ್ಟ್ರವಾಗಬೇಕು. ಧಾರವಾಡ ಜಿಲ್ಲೆಯನ್ನು ದೇಶದಲ್ಲೇ ಮೊದಲ ಕ್ಷಯ ಮುಕ್ತ ಜಿಲ್ಲೆಯಾಗಿಸಲು ಪ್ರತಿಯೊಬ್ಬರೂ ಪಣತೊಡೋಣ ಎಂದು ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ ಜೋಶಿ ಹೇಳಿದರು.

ಇಂದು ಕಲಘಟಗಿ ತಾಲೂಕು ಆಸ್ಪತ್ರೆ ಆವರಣದಲ್ಲಿ "ಆರೋಗ್ಯವಂತ ಮಹಿಳೆ, ಸಶಕ್ತ ಪರಿವಾರ ಅಭಿಯಾನದ" ಉದ್ಘಾಟನ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸೆಪ್ಟೆಂಬರ್ 17 ರಂದು ವಿಶ್ವಕರ್ಮ ಜಯಂತಿಯ ದಿನದಂದು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಜನ್ಮದಿನವನ್ನು ಆಚರಣೆ ಮಾಡಲಾಗುತ್ತದೆ. ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 2 ರವರೆಗೆ 15 ದಿನಗಳ ಕಾಲ ಸೇವಾ ಪಾಕ್ಷಿಕ ಎಂದು ಆಚರಿಸಲಾಗುವುದು. 15 ದಿನಗಳ ಕಾಲ ತಾವು ವಾಸಿಸುವ ಬಡಾವಣೆ, ಶಾಲೆ, ಕಾಲೇಜು, ಉದ್ಯಾನವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಈ



ಸಂದರ್ಭದಲ್ಲಿ ಜನರಿಗೆ ಉತ್ತಮ ಸೇವೆ ಸಲ್ಲಿಸಲಾಗುತ್ತದೆ. ಒಬ್ಬ ಮಹಿಳೆ ಆರೋಗ್ಯವಾಗಿದ್ದರೆ ಇಡೀ ಕುಟುಂಬ ಆರೋಗ್ಯವಾಗಿರುವುದು. ಸ್ವಾಸ್ಥ್ಯ ನಾರಿ ಸಶಕ್ತ ಪರಿವಾರ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಕ್ತದೊತ್ತಡ, ಡಯಾಬಿಟಿಸ್, ಬಾಯಿಯ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಗರ್ಭಾಶಯ ಕ್ಯಾನ್ಸರ್, ರಕ್ತಹೀನತೆ ಸೇರಿದಂತೆ ಹಲವಾರು ರೋಗಗಳ ತಪಾಸಣೆ ಮಾಡಲಾಗುತ್ತದೆ. ತಪಾಸಣೆ ಶಿಬಿರದಲ್ಲಿ ವಿತರಿಸುವ ಔಷಧಿಗಳನ್ನು ಸತತವಾಗಿ ತೆಗೆದುಕೊಳ್ಳಬೇಕು. ಇದರಿಂದ ರೋಗಗಳನ್ನು ಕಡಿಮೆ ಸಮಯದಲ್ಲಿ ಗುಣಪಡಿಸಬಹುದು ಎಂದು ಅವರು ತಿಳಿಸಿದರು.

ಸ್ವಚ್ಛ ಭಾರತ ಅಭಿಯಾನದ ಮೂಲಕ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಎಲೆ, ಅಡಿಕೆ, ಗುಟಕಾ ತಿಂದು ಎಲ್ಲೆಂದರಲ್ಲಿ ಉಗುಳಬಾರದು. ಚಟಗಳನ್ನು ಮಾಡುವವರು ಶಕ್ತಿವಂತರಾಗಿರುವುದಿಲ್ಲ. ಎಲ್ಲರೂ ಮಾನಸಿಕ ಹಾಗೂ ದೈಹಿಕವಾಗಿ ಸದೃಢರಾಗಬೇಕು. ನಶಾ ಮುಕ್ತ ಅಭಿಯಾನದ ಮೂಲಕ ಜಾಗೃತಿ ಮೂಡಿಸಲಾಗುವುದು. ಸಿಎಸ್ಆರ್ ಅನುದಾನದಲ್ಲಿ ಶಾಲಾ ಕಟ್ಟಡಗಳ ನಿರ್ಮಾಣ ಮಾಡಲಾಗುತ್ತಿದೆ. ಅಲ್ಲದೇ 35 ಸಾವಿರ ಡೆಸ್ಕ ವಿತರಣೆ ಹಾಗೂ ಸುಮಾರು 800 ಶಾಲೆಗಳಿಗೆ ಬಣ್ಣವನ್ನು ಹಚ್ಚಲಾಗಿದೆ ಎಂದರು. ಈ ಸಂದರ್ಭದಲ್ಲಿ ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನದಡಿ ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ ಫಲಾನುಭವಿ ತಾಯಂದಿರಿಗೆ ಸಹಾಯಧನ ಜಮೆ ಹಾಗೂ ಆರೋಗ್ಯ ತಪಾಸಣೆ, ಯುವಕ ಯುವತಿಯರಿಂದ ರಕ್ತದಾನ ಶಿಬಿರ, ಶಿಶುಗಳಿಗೆ ಅನ್ನಪ್ರಾಶನ, ಜಿಲ್ಲೆಯ ವಿವಿಧ ಕ್ಷೇತ್ರಗಳ ಸಾಧಕರು, ಪೌರ ಕಾರ್ಮಿಕರಿಗೆ ಸನ್ಮಾನ ಹಾಗೂ ಹಿರಿಯ ನಾಗರಿಕರು ಮತ್ತು ದಿವ್ಯಾಂಗರಿಗೆ ಉಚಿತವಾಗಿ ಸಹಾಯಕ ಸಾಧನ ಮತ್ತು ಉಪಕರಣಗಳನ್ನು ವಿತರಣೆ ಮಾಡಲಾಯಿತು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ವರ್ಚುವಲ್ ಮೂಲಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಂ.ಹೊನಕೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ.ಹೆಚ್.ಹೆಚ್.ಕುಕನೂರ, ಮುಖಂಡರಾದ ನಾಗರಾಜ ಛಬ್ಬಿ, ನಿಂಗಪ್ಪ ಸುತಗಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಇತರರು ಉಪಸ್ಥಿತರಿದ್ದರು.

### ಪ್ರತಿಯೊಬ್ಬರೂ ಕೈ ಜೋಡಿಸಿ

2047ಕ್ಕೆ ಭಾರತ ದೇಶ ವಿಕಸಿತ ಭಾರತ ರಾಷ್ಟ್ರವಾಗಿ ಹೊರಹೊಮ್ಮಲಿದೆ. ಈ ನಿಟ್ಟಿನಲ್ಲಿ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು. ಎಲ್ಲರೂ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕಾಗುತ್ತದೆ. ಈಗಾಗಲೇ ಸುಮಾರು 25 ಕೋಟಿ ಜನರು ಬಡತನದಿಂದ ಹೊರ ಬಂದಿದ್ದಾರೆ ಎಂದು ಹಲವಾರು ಸಮೀಕ್ಷೆಗಳು ತಿಳಿಸಿವೆ. ಸದೃಢ ಭಾರತ ನಿರ್ಮಾಣಕ್ಕೆ ಮುಂದಾಗಬೇಕು. ಎಲ್ಲರೂ ಆರೋಗ್ಯವಂತರಾಗಬೇಕು ಎಂದು ಅವರು ಆಶಿಸಿದರು. ಪ್ರಧಾನಿ ಮೋದಿಯಂತೆ ನಾನು ಕೂಡ ನಿರ್ವಹಿಸುವೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರ 75 ನೇ ಜನ್ಮದಿನವನ್ನು ಇಂದು ಆಚರಣೆ ಮಾಡಲಾಗುತ್ತಿದೆ. ಅವರು ಈ ವಯಸ್ಸಿನಲ್ಲಿಯೂ ಸಹ ಅತ್ಯಂತ ಉತ್ಸಾಹದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ದಣಿವು ಇಲ್ಲದೇ ಸತತ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಾರೆ. ಅವರಂತೆಯೇ ನಾನು ಸಹ ನಿರಂತರವಾಗಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದೇನೆ ಎಂದರು.

## ತಾಲೂಕು ಮಟ್ಟದ ಸ್ಪರ್ಧೆಯಲ್ಲಿ ಉತ್ತಮ ಸಾಧನೆ



**ಬೆಳಗಾವಿ:** ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಳಗಾವಿ ಗ್ರಾಮೀಣ ಇವರು ಆಯೋಜಿಸಿದ್ದ ತಾಲೂಕು ಮಟ್ಟದ ಕ್ರೀಡಾ ಸ್ಪರ್ಧೆಯಲ್ಲಿ ದೇವೇಂದ್ರ ಜಿನಗೌಡ ಶಾಲೆ ಶಿಂದೋಳ್ಳಿಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಈ ಸ್ಪರ್ಧೆಯಲ್ಲಿ, ಸುಹರ್ಷ ಕಂಬಾರ್ 400 ಮೀ. ಹರ್ಡಲ್ ರೇಸ್ ಪ್ರಥಮ, ಲಾಂಗ್ ಜಂಪ್ ಮತ್ತು 200 ಮೀ. ಓಟದಲ್ಲಿ ದ್ವಿತೀಯ ಸ್ಥಾನ ಗಳಿಸಿ ದ್ದಾನೆ. ಮನೋಜ್ ಮಲ್ಲನ್ನ ವರ , ಇವನು ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾನೆ. ಪ್ರಜ್ಞಾ ಹಿಂದಿನಮಣಿ, ಸಮೀಕ್ಷಾ ಶಾ, ರತನ್ ಪಾಟೀಲ್, ಗಗನ್ ಹಂಪನ್ನವರ್, ಅದ್ವೈತ್ ಪಾಟೀಲ್ ಚೆಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ ಮತ್ತು ಮನೋಜ್ ಮೊರ್ಗೇಕರ್ 35 ಕೆಜಿ ತೂಕದ ಕರಾಟೆ ವಿಭಾಗದಲ್ಲಿ ಪ್ರಥಮ ಸ್ಥಾನ ಪ್ರಥಮ ಪ್ರಥಮ, ಮೇಘಾ ಪಾಟೀಲ್ 100 ಮೀ. ಹರ್ಡಲ್ ರೇಸ್ ತೃತೀಯ ಸ್ಥಾನ ಪಡೆದಿದ್ದಾರೆ

ಈ ಎಲ್ಲಾ ವಿದ್ಯಾರ್ಥಿಗಳು ಶಾಲೆಯ ಕ್ರೀಡಾ ಶಿಕ್ಷಕರು, ಬೋಧನಾ ಸಿಬ್ಬಂದಿ ಹಾಗೂ ಪ್ರಾಂಶುಪಾಲರು ಮತ್ತು ಸಂಸ್ಥೆಯ ಅಧ್ಯಕ್ಷರು ಮತ್ತು ನಿರ್ದೇಶಕರ ಮಂಡಳಿಯಿಂದ ಪ್ರೋತ್ಸಾಹ ಪಡೆಯುತ್ತಿದ್ದಾರೆ.

### ಪುಟ್ಟರಾಜ ಗವಾಯಿಗಳು ನೋಬೆಲ್ ಪ್ರಶಸ್ತಿಗೆ ಅರ್ಹರಾಗಿದ್ದರು: ಪ್ರೊ. ಹಿರೇಮಠ

## ಪಂಡಿತ ಪುಟ್ಟರಾಜರ 15ನೆಯ ಪುಣ್ಯಸ್ಮರಣೆ

**ಗದಗ:** ಕುರುಡರಾಗಿದ್ದರೂ ಕೂಡ ಅಂಧ, ಅನಾಥ ಮಕ್ಕಳಿಗೆ ತಂದೆಯಾಗಿ, ಪೋಷಕರಾಗಿ, ಸಂಗೀತದ ಗುರುವಾಗಿ, ಪುರಾಣ ಪ್ರವಚನಕ್ಕೆ ಪ್ರೇರಕರಾಗಿ ಶತಮಾನದ ಹತ್ತಿರದ ಇಡೀ ಬದುಕನ್ನು ದಿಕ್ಕಿಲ್ಲದ ಮಕ್ಕಳಿಗೆ ಬದುಕುವ ವಿದ್ಯೆ ನೀಡಿದ ಪಂಡಿತ ಪುಟ್ಟರಾಜ ಗವಾಯಿಗಳು ನೋಬೆಲ್ ಪ್ರಶಸ್ತಿಗೆ ಅರ್ಹರಾಗಿದ್ದರು. ಅವರ ಸಾಹಿತ್ಯ ಕಣ್ಣಿದ್ದವರನ್ನೂ ಬೆರಗುಗೊಳಿಸಿತ್ತು ಎಂದು ಅನ್ನದಾನಿ ಹಿರೇಮಠ ಅವರು ಹೇಳಿದರು. ಅವರು, ಚಿಕ್ಕಟ್ಟಿ ಸಮೂಹ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ, ಉತ್ತರ ಕರ್ನಾಟಕ ಕಲಾವಿದರ ಹಾಗೂ ಕಲಾ ಪೋಷಕರ ಸಂಘಟನೆಯಾದ ಗದುಗಿನ ಕಲಾವಿಕಾಸ ಪರಿಷತ್ತಿನವರು ಏರ್ಪಡಿಸಿದ ಪಂಡಿತ ಪುಟ್ಟರಾಜ ಗವಾಯಿಗಳ 15 ನೆ ಪುಣ್ಯ ಸ್ಮರಣೆಯನ್ನು ಸಸಿಗೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಹೇಳಿದರು.

ಮುಖ್ಯ ಅತಿಥಿಯಾಗಿ ಭಾವಹಿಸಿದ್ದ ವಿಭೂತಿ ಪತ್ರಿಕೆ ಸಂಪಾದಕ ಹಿರಿಯ ಸಾಹಿತಿ ಅಂದಾನೆಪ್ಪ ವಿಭೂತಿ ಅವರು, ಪುಟ್ಟರಾಜ ಗವಾಯಿಗಳು ಲಿಂಗೈಕ್ಯರಾದ ಸಂದರ್ಭದಲ್ಲಿ ಗದಗ ಬೆಟಗೇರಿ ಜನರು ಜಾತ್ಯಾತೀತ ವಾಗಿ ಭಕ್ತಿಯಿಂದ ಪ್ರೀತಿಯಿಂದ ಅಭಿಮಾನದಿಂದ ಅಂತಿಮ ನಮನದಲ್ಲಿ ಸೇವೆ ಸಲ್ಲಿಸಿದ್ದನ್ನು ಸ್ಮರಿಸಿಕೊಂಡರು.

ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಎಸ್ ವಾಯ್ ಚಿಕ್ಕಟ್ಟಿ ಅವರು, ಸಮಾರಂಭದ ಅಧ್ಯಕ್ಷತೆವಹಿಸಿ, ಪುಟ್ಟರಾಜ ಗವಾಯಿಗಳೊಂದಿಗಿನ ಒಡನಾಟವನ್ನು ನೆನಪಿಸಿಕೊಳ್ಳುವುದರಂದಿಗೆ ಕಲಾ ವಿಕಾಸ ಪರಿಷತ್ ಸಿ. ಕೆ. ಹೆಚ್. ಶಾಸ್ತ್ರಿಯವರು 15 ವರ್ಷಗಳಿಂದ ಪೂಜ್ಯರ ಪುಣ್ಯಸ್ಮರಣೆಯನ್ನು ನಮ್ಮ ಸಂಸ್ಥೆಯಲ್ಲಿ ಆಯೋಜಿಸುತ್ತಿರುವುದು ನಮ್ಮ ಸಂಸ್ಥೆಯ ಭಾಗ್ಯವಿಶೇಷವೆಂದು ಹೇಳಿದರು. ಪ್ರಾರಂಭದಲ್ಲಿ ಚಿಕ್ಕಟ್ಟಿ ಸಿಬಿಎಸ್ ಶಾಲೆಯ ವಿದ್ಯಾರ್ಥಿಗಳಿಂದ ಪ್ರಾರ್ಥನೆ ನಡೆಯಿತು. ಡಾ. ಪಂಡಿತ ಪುಟ್ಟರಾಜ ಸೇವಾ ಸಮಿತಿಯ ಅಧ್ಯಕ್ಷ ವೇ. ಫಕ್ಕೀರೇಶ್ವರ ಶಾಸ್ತ್ರೀಗಳು ಹಿರೇಮಠ ಗದಗ ಇವರು ಸರ್ವರನ್ನು ಸ್ವಾಗತಿಸಿದರು. ಕಲಾವಿಕಾಸ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷರಾದ ಪಂ. ಸಿ ಕೆ ಎಚ್ ಶಾಸ್ತ್ರಿಗಳು (ಕಡಣಿ) ಪ್ರಾಸ್ತಾವಿಕವಾಗಿ ಮಾತನಾಡಿ ಕಲಾವಿಕಾಸ ಪರಿಷತ್ತು ನಡೆದು ಬಂದ ದಾರಿಯನ್ನು ಸ್ಮರಿಸಿ ಪುಟ್ಟರಾಜ ಗವಾಯಿಗಳ ಸಂಗೀತ ಬದುಕಿನ ಹಲವಾರು ಸಾಧನೆಗಳನ್ನು ಮೆಲುಕು ಹಾಕಿದರು. ವೇದ ಮಂತ್ರಗಳ ಪಠಣೆಯಂದಿಗೆ ಪೂಜ್ಯ ಗುರು ಪುಟ್ಟರಾಜರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಲಾಯಿತು. ಶಿಕ್ಷಕ ಸಾಹಿತಿ ಶ್ರೀಶೈಲ ಬಡಿಗೇರ ಇವರು ಪುಟ್ಟರಾಜ ಗುರುಗಳ ಕುರಿತು ಸ್ವರಚಿತ ಕವನಗಳ ವಾಚನ ಮಾಡಿದರು.

ವೇದಿಕೆಯಲ್ಲಿ ಬಿ ಬಿ ಎ ಕಾಲೇಜಿನ ಪ್ರಾಚಾರ್ಯ ಬಿಪಿನ್ ಚಿಕ್ಕಟ್ಟಿ, ಪ್ರಾ. ಶೋಭಾ ಸ್ಥಾವರಮಠ, ಪ್ರಾ. ರಿಯಾನಾ ಮುಲ್ಲಾ, ವೇದಿಕೆಯಲ್ಲಿ ಇದ್ದರು. ಶಿಕ್ಷಕಿ ರಜನಿ ಕುರಿ ಕಾರ್ಯಕ್ರಮ ನಿರೂಪಿಸಿದರು ಶಿಕ್ಷಕ ಗಣೇಶ ಬಡ್ನಿ ವಂದಾರ್ಪಣೆ ಮಾಡಿದರು. ಸಿ ಕೆ ಹೆಚ್. ಶಾಸ್ತ್ರೀಯವರು ರಚಿಸಿದ ಪುಟ್ಟರಾಜ ಗುರುಗಳ ಗೀತೆಗಳನ್ನು ಚಿತ್ರಿಕರಿಸಿದ ವಿಡಿಯೊ ಪ್ರದರ್ಶನಮಾಡುವುದರಂದಿಗೆ ಪುಣ್ಯಸ್ಮರಣೆಗೆ ಮಂಗಳ ಹಾಡಲಾಯಿತು.

## ಸ್ವಚ್ಛತೆ ನಮ್ಮ ನಿತ್ಯದ ಜೀವನಶೈಲಿ ಆಗಲಿ



**ಇಂಡಿ:** "ಸ್ವಚ್ಛತೆಯಿರುವ ಕುಟುಂಬ ಸುಖಿ ಕುಟುಂಬ" ಎಂಬ ಪ್ರತೀತಿಯಿದೆ. ಸ್ವಚ್ಛತೆ ಕೇವಲ ಅಭ್ಯಾಸವಲ್ಲ. ಅದು ಜೀವನಶೈಲಿ ಆಗಬೇಕು. ಮನೆ, ಶಾಲೆ, ಸಾರ್ವಜನಿಕ ಸ್ಥಳದ ಸ್ವಚ್ಛತೆಗೆ ಮೊದಲ ಆದ್ಯತೆ ನೀಡುವ ಅಭ್ಯಾಸ ಪ್ರತಿಯೊಬ್ಬರು ರೂಢಿಸಿಕೊಳ್ಳಬೇಕು ಅಂದಾಗ ಆರೋಗ್ಯದಾಯಕ ವಾತಾವರಣ ನಮ್ಮದಾಗಲಿದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ತಾಲೂಕಿನ ಹಿರೇರೂಗಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ಸ್ವಚ್ಛ ಭಾರತ ಅಭಿಯಾನದ 11ನೇ ವಾರ್ಷಿಕೋತ್ಸವ ನಿಮಿತ್ತ ಹಮ್ಮಿಕೊಂಡ "ಸ್ವಚ್ಛತೆಯೇ ಸೇವೆ 2025: ಸ್ವಚ್ಛೋತ್ಸವ"ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸ್ವಚ್ಛತೆಯು ನಮ್ಮ ಆರೋಗ್ಯ, ಯೋಗಕ್ಷೇಮ ಮತ್ತು ನಮ್ಮ ಸುತ್ತಲಿನ ಪರಿಸರದ ಮೇಲೆ ಪರಿಣಾಮ ಬೀರುವ ಅತ್ಯಗತ್ಯ ಅಭ್ಯಾಸವಾಗಿದೆ. ಉತ್ತಮ ಪರಿಸರ ಮತ್ತು ಸಮಾಜಕ್ಕಾಗಿ ಸ್ವಚ್ಛತೆಗೆ ನಾವು ಮೊದಲ ಆದ್ಯತೆ ನೀಡೋಣ ಎಂದು ಹೇಳಿದರು.

ಪರಶುರಾಮ ಹೊಸಮನಿ ಮಾತನಾಡಿ, ಸ್ವಚ್ಛತೆಯು ನಿಜವಾಗಿಯೂ ಆರೋಗ್ಯಕರ ಜೀವನ ಮತ್ತು ಜವಾಬ್ದಾರಿಯುತ ಸಮಾಜದ ಅಡಿಪಾಯವಾಗಿದೆ.

ಸ್ವಚ್ಛತೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಮುಖ್ಯ ಶಿಕ್ಷಕ ಅನಿಲ ಪತಂಗಿ ಮಾತನಾಡಿ, ಸ್ವಚ್ಛತೆ ಉತ್ತಮ ಆರೋಗ್ಯಕ್ಕೆ ರಹದಾರಿ, ಕೈಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ಬಾತ್ ರೂಮ್ ಬಳಸಿದ ನಂತರ ಕೈ ತೊಳೆಯುವಂತಹ ಸಣ್ಣ ಕ್ರಮಗಳು ಸ್ವಚ್ಛತೆಗೆ ಪೂರಕವಾಗಿವೆ ಎಂದು ಹೇಳಿದರು.

ಗ್ರಾಮದ ಸುದರ್ಶನ ಬೇನೂರ, ಉಮೇಶ ಹಲಸಂಗಿ, ಬಸವರಾಜ ತಳಕೇರಿ, ವ್ಹಿ ವೈ ಪತ್ತಾರ, ಎಸ್ ಎಂ ಪಂಚಮುಖಿ, ಮಲ್ಲಮ್ಮ ಚವ್ಹಾಣ, ಶರಣು ನಾಟಿಕಾರ, ಸಚೀನ ಹೊಸೂರ, ನಿಂಗಪ್ಪ ಡಂಗಿ ಸೇರಿದಂತೆ ಅನೇಕ ಗ್ರಾಮಸ್ಥರು ಭಾಗವಹಿಸಿದ್ದರು.

## ಇಂದು ಶಿಕ್ಷಕ ದಿನಾಚರಣೆ

**ಹುಬ್ಬಳ್ಳಿ:** ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಮತ್ತು ಧಾರವಾಡ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ(ರಿ) ಸಹಯೋಗದಲ್ಲಿ ದಿ.19–09–2025 ರ ಶುಕ್ರವಾರ ಕೆ.ಎಲ್.ಇ ತಾಂತ್ರಿಕ ವಿಶ್ವವಿದ್ಯಾಲಯ ಬಯೋ ಟೆಕ್ನಾಲಜಿ ಸಭಾಂಗಣದಲ್ಲಿ ಶಿಕ್ಷಕ ದಿನಾಚರಣೆ ಹಾಗೂ ಶೈಕ್ಷಣಿಕ ಕಾರ್ಯಾಗಾರ ಮತ್ತು ನಿವೃತ್ತ ಪ್ರಾಚಾರ್ಯರರು, ಉಪನ್ಯಾಸಕರು ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಸನ್ಮಾನ. ಡಾಕ್ಟರೇಟ್ ಪಡೆದಿರುವ ಪ್ರಾಚಾರ್ಯರರು ಮತ್ತು ಉಪನ್ಯಾಸಕರಿಗೆ ಸನ್ಮಾನ, ಜಿಲ್ಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ. ರಾಷ್ಟ್ರ ಮಟ್ಟದಲ್ಲಿ ಭಾಗವಹಿಸಿರುವ ಕ್ರೀಡಾ ಪಟುಗಳಿಗೆ ಸನ್ಮಾನ. ಮತ್ತು ವಿಶೇಷ ಸಾಧಕ ಪ್ರಾಂಶುಪಾಲರಿಗೆ ಸನ್ಮಾನ. ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟಣೆಯನ್ನು ಗೌರವಾನ್ವಿತ ಸಭಾಪತಿಗಳಾದ ಬಸವರಾಜ ಹೊರಟ್ಟಿ ವಹಿಸಿಕೊಳ್ಳುವರು, ನವಲಗುಂದ ಶಾಸಕರಾದ ಎನ್ ಎಚ್ ಕೋನರಡ್ಡಿ ವೆಬ್‌ಸೈಟ್ ಅನಾವರಣಗೊಳಿಸುವರು. ಮುಖ್ಯ ಅತಿಥಿಗಳಾಗಿ ಹು–ಧಾ ನಗರಾಭಿವೃದ್ಧೀ ಪ್ರಾಧಿಕಾರದ ಅಧ್ಯಕ್ಷರಾದ ಶಾಕೀರ ಸನದಿ, ಉಪ ನಿರ್ದೇಶಕರಾದ ತೇಜಸ್ವಿನಿ ನಾರಾಯಣಕರ, ಅಧ್ಯಕ್ಷರಾದ ಡಿ ಹನುಮಂತಪ್ಪ ಪ್ರಧಾನ ಕಾರ್ಯದರ್ಶಿ ಸಂದೀಪ ಬೂದಿಹಾಳ, ಉಪಾಧ್ಯಕ್ಷರಾದ ಎಫ್ ಬಿ ಸೊರಟೂರ, ಉಪಾಧ್ಯಕ್ಷರಾದ ಸಲೀನಾ ಬೋರಗಾವಿ ಭಾಗವಹಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಜಿ ದೇವದಾಸಿ ಮರುಸಮೀಕ್ಷೆ

**ಕೊಪ್ಪಳ:** ಕೊಪ್ಪಳ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ನೆಡೆಸಲಾಗುತ್ತಿರುವ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆಯಲ್ಲಿ ಭಾಗವಹಿಸಲು ಬಯಸುವ ಮಹಿಳೆಯರು ಮತ್ತು ಕುಟುಂಬಗಳಿಂದ ನಿಗಧಿತ ನಮೂನೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಕೊಪ್ಪಳ ಜಿಲ್ಲೆಯಲ್ಲಿ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ–2025ಯನ್ನು ಕೈಗೊಂಡಿದ್ದು, ಈಗಾಗಲೇ ಸರ್ಕಾರದಿಂದ 1993–94 ಮತ್ತು 2007–08ನೇ ಸಾಲುಗಳಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಇದ್ದು, ಮರಣ ಹೊಂದಿರುವ ಮಹಿಳೆಯ ಕುಟುಂಬದ ಅಧೀಕೃತ ಸದಸ್ಯರು ನಮೂನೆ–1 ರಲ್ಲಿ, ಆ ಸಮೀಕ್ಷೆಯಲ್ಲಿ ಹೊರಗುಳಿದ, ಹಾಲಿ ಜೀವಂತವಿರುವ ಹೊಸದಾಗಿ ದೇವದಾಸಿ ಪಟ್ಟಿಗೆ ಸೇರ್ಪಡೆ ಬಯಸುವ ದೇವದಾಸಿ ಮಹಿಳೆಯರು ನಮೂನೆ–2 ರಲ್ಲಿ ಹಾಗೂ ಸಮೀಕ್ಷೆಯಲ್ಲಿ ಹೊರಗುಳಿದ ಮತ್ತು ಪ್ರಸ್ತುತ ಮರಣ ಹೊಂದಿರುವ ಮಹಿಳೆಯರ ಕುಟುಂಬದ ಅಧೀಕೃತ ಸದಸ್ಯರು ನಮೂನೆ–3 ರಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ದಾಖಲೆಗಳಾದ ಮಹಿಳೆಯ ಆಧಾರ ಕಾರ್ಡು, ಮಹಿಳೆಯ ಮರಣ ಪ್ರಮಾಣ ಪತ್ರ, ವಂಶವೃಕ್ಷ, ಕುಟುಂಬದ ಅಧೀಕೃತ ಸದಸ್ಯರ ಆಧಾರ ಕಾರ್ಡು ಮತ್ತು ಹೊಸ ಸೇರ್ಪಡೆ ಬಯಸುವ ಮಹಿಳೆಯರ ವಯಸ್ಸಿನ ದೃಢೀಕರಣ ಪತ್ರಗಳೊಂದಿಗೆ ಅರ್ಜಿಯನ್ನು ಸಂಬಂಧಪಟ್ಟ ಆಯಾ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಅಥವಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಅಕ್ಟೋಬರ್ 2ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆ ಜಿಲ್ಲಾ ಮಟ್ಟದ ಸಮಿತಿಯ ಕಾರ್ಯದರ್ಶಿಗಳ ಪ್ರಕಟಣೆಯು ತಿಳಿಸಿದೆ.

# ವಿಶ್ವಕರ್ಮ ಎಲ್ಲ ಕುಶಲಕರ್ಮಿಗಳ ದೇವತೆ

**ತಾಳಿಕೋಟೆ:** ದುಷ್ಟರ ಉಪಟಳ ಎನ್ನುವದು ಹೆಚ್ಚಾದಾಗ ಅವರನ್ನು ಸಂಹಾರ ಮಾಡಲು ದೇವರ ಅಪೇಕ್ಷೆಯಂತೆ ಆಯುಧಗಳನ್ನು ಮಾಡಿಕೊಟ್ಟವನೇ ವಿಶ್ವಕರ್ಮನಾಗಿದ್ದು ಇತ ದೇವತೆಗಳಿಗೆ ಅಪೇಕ್ಷಿತ ಪ್ರೀತಿಯ ಭಕ್ತನಾಗಿದ್ದನೆಂದು ಸ್ಥಳೀಯ ಸಂಸ್ಕೃತ ಪಂಡಿತರು ಹಾಗೂ ಗ್ರಾಮದೇವತೆ ಅರ್ಚಕರಾದ ವೇ.ವಿಶ್ವನಾಥ ಶರ್ಮಾ ಅವರು ನುಡಿದರು.

ಬುಧವಾರರಂದು ಸ್ಥಳೀಯ ವಿಶ್ವಕರ್ಮ ಸಮಾಜ ಬಾಂದವರ ವತಿಯಿಂದ ಏರ್ಪಡಿಸಲಾದ ವಿಶ್ವಕರ್ಮ ಜಯಂತ್ಯೋತ್ಸವ ಹಾಗೂ ಅಮರ ಶಿಲ್ಪಿ ಜಕಣಾಚಾರಿ ವೃತ್ತದ ಭೂಮಿ ಪೂಜಾ ಕಾರ್ಯಕ್ರಮದಲ್ಲಿ ಮಹಾ ಪೂಜಾ ಕಾರ್ಯಕ್ರಮವನ್ನು ನೇರವೇರಿಸಿ ಮಾತನಾಡುತ್ತಿದ್ದ ಅವರು ವಿಶ್ವಕರ್ಮ ಇತ ವಿಶ್ವದ ದೈವಿಕ ವಾಸ್ತು ಶಿಲ್ಪಿಯಾಗಿದ್ದು ಋಷ್ವೇದದಲ್ಲಿ ದೈವಿಕ ಸೃಜನಶೀಲತೆಯ ವ್ಯಕ್ತಿ ಎಂದು ಪರಿಗಣಿಸಲಾಗಿದೆ ಶ್ರೀಕೃಷ್ಣನಿಗಾಗಿ ದ್ವಾರಕನಗರ ಪಾಂಡವರಿಗಾಗಿ ಇಂದ್ರ ಪ್ರಸ್ತರ ಅರಮನೆ ಹಾಗೂ ದೇವತೆಗಳಿಗೆ ಅನೇಕ ಅದ್ಭುತ್ ಆಯುಧಗಳನ್ನು ನಿರ್ಮಿಸಿ ನೀಡಿದಂತಹ ಕೀರ್ತಿ ವಿಶ್ವಕರ್ಮನಿಗೆ ಸಲ್ಲುತ್ತದೆ ಎಂದರು.

ವಿಷ್ಣುವಿನ ಸುದರ್ಶನ ಚಕ್ರ, ಶಿವನ ತ್ರಿಶೂಲ, ಮತ್ತು ಕಾರ್ತಿಕೇಯನ ಭರ್ಚಿ, ಯಂತ್ರ ಶಾಸ್ತ್ರ ಮತ್ತು ವಾಸ್ತು



ಶಿಲ್ಪದ ವಿಜ್ಞಾನವಾದ ಸ್ಥಾಪತ್ಯೆವೇದವನ್ನು ಬರೆದಿದ್ದರ ಬಗ್ಗೆ ಪರಿಗಣಿಸಲಾಗಿದ್ದು ಈ ವಿಶ್ವಕರ್ಮನನ್ನು ಎಲ್ಲ ಕುಷಲ ಕರ್ಮಿಗಳ ದೇವತೆಗಳೆಂದು ಪರಿಗಣಿಸಲಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ.ವಿಜಯಕುಮಾರ ಕಾರ್ಚಿ ಅವರು ಮಾತನಾಡಿ ಕಳೆದ 40 ವರ್ಷಗಳಿಂದ ತಾಳಿಕೋಟೆಯ ವಿಶ್ವಕರ್ಮ ಸಮಾಜದವರ ಇತಿಹಾಸ ಬಲ್ಲೆ ಇಂದಿನ ದಿನಮಾನದಲ್ಲಿ ಚಿನ್ನದ ಬೆಲೆ ಏರುತ್ತಾ ಸಾಗಿದೆ ಆದರೆ ವಿಶ್ವಕರ್ಮ ಸಮಾಜ ಎನ್ನುವದರಲ್ಲಿ ಒಗ್ಗಟ್ಟಿನಿಂದ ಮೇಲಕ್ಕೇಳುತ್ತಿರುವದು ಕಂಡು ಬರುತ್ತಿಲ್ಲಾ ಚಿಕ್ಕ ಸಮಾಜವಾಗಿದ್ದರೂ ಚೊಕ್ಕ ಸಮಾಜವಾಗಿದೆ ಆದರೂ ಈ ಸಮಾಜದ ಏಳಿಗೆಗೆ ಶ್ರಮಿಸಬೇಕಾಗಿದೆ ಎಂದು ಕಿವಿಮಾತೇಳಿದ ಡಾ.ಕಾರ್ಚಿ ಅವರು ದಯಮಾಡಿ ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಿ ಮೋಬೈಲ್ ಸಂಪರ್ಕದಿಂದ ದೂರವಿಡಿ ಎಂದು ಸಮಾಜ ಬಾಂದವರಿಗೆ ತಿಳಿ ಹೇಳಿದ ಅವರು ಮಹತ್ವದ ಕಾರ್ಯಕ್ರಮಗಳು ನೇರವೇರಿದ್ದರ ಕುರಿತು ಡಾ.ವಿಜಯಕುಮಾರ ಅವರು ಸಂತಸ ಪಟ್ಟರು.

ಇನ್ನೋರ್ವ ಅತಿಥಿ ಹಿರಿಯರಾದ ಹಂಚಲಿಯ ಈಶ್ವರ ಪತ್ತಾರ ಅವರು ಮಾತನಾಡಿ ವಿಶ್ವಕರ್ಮ ಎನ್ನುವದು ಕುಷಲಕರ್ಮಿಗಳ ದೇವತೆ ಎಂದೇ ಪರಿಗಣಿಸಲಾಗಿದೆ ಆತ ಜಗದ್ಗುರು ಆತನ ಸ್ಮರಣೆ ಮಾಡುವದು ಅಗತ್ಯವಾಗಿದೆ ವೇದವೇ ಸಾದಕ, ವೇದವೇ ಭಾರತವೆನ್ನಲಾಗುತ್ತಿದೆ ಪರಮಾತ್ಮನನ್ನು ಪ್ರತ್ಯಕ್ಷ ಮಾಡಿಕೊಂಡು ಮೋಕ್ಷದ ಮಾರ್ಗವನ್ನು ತೊರಿದ ವಿಶ್ವಕರ್ಮನನ್ನು ಹಾಗೂ ಅಮರ ಶಿಲ್ಪಿ ಜಕಣಾಚಾರಿಯನ್ನು ಏಷ್ಟು ಸ್ಮರಿಸಿದರೂ ಸಾಲದೆಂದರು.

**ಭೂಮಿ ಪೂಜೆ:** ಕಾರ್ಯಕ್ರಮದ ಮೊದಲಿಗೆ ದೇವರ ಹಿಪ್ಪರಗಿ ಮುಖ್ಯ ರಸ್ತೆಯ ಮದ್ಯಭಾಗದಲ್ಲಿ ಅಮರಶಿಲ್ಪಿ ಜಕಣಾಚಾರ್ಯ ವೃತ್ತದ ಭೂಮಿ ಪೂಜಾ ಕಾರ್ಯಕ್ರಮಕ್ಕೆ ತಾಳಿಕೋಟೆ ತಾಲೂಕಾ ತಹಶಿಲ್ದಾರರಾದ ಡಾ.ವಿನಯಾ ಹೂಗಾರ ಹಾಗೂ ಪಿಎಸ್ಐ ಜ್ಯೋತಿ ಖೋತ್ ಹಾಗೂ ಪುರಸಭೆ ಅಧ್ಯಕ್ಷರಾದ ಜುಬೇದಾ ಜಮಾದಾರ, ಸದಸ್ಯರುಗಳಾದ ಅಕ್ಕಮಹಾದೇವಿ ಕಟ್ಟಿಮನಿ, ಮುತ್ತಪ್ಪಣ್ಣ ಚಮಲಾಪೂರ, ಅಣ್ಣಾಜಿ ಜಗತಾಪ, ಪರಶುರಾಮ ತಂಗಡಗಿ, ಸಮಾಜದ ಅಧ್ಯಕ್ಷರಾದ ಶ್ರೀನಿವಾಸ ಸೋನಾರ, ಉಪಾಧ್ಯಕ್ಷ ಪ್ರಭಾಕರ ಹಿಪ್ಪರಗಿ, ಖಜಾಂಚಿ ಶ್ರೀನಿವಾಸ ಕೆ ಪತ್ತಾರ ಹಾಗೂ ನಿರ್ದೇಶಕರುಗಳಾದ ಗಂಗಾಧರ ಬಡಿಗೇರ, ಸುನೀಲ ವರದಪ್ಪನವರ, ರಾಜು ಪತ್ತಾರ, ಆರ್.ಆರ್.ಬಡಿಗೇರ ಹಾಗೂ ಗಣ್ಯ ಮಾನ್ಯರು ಹಿತೈಷಿಗಳು ಪಾಲ್ಗೊಂಡು ಚಾಲನೆ ನೀಡಿದರು.

## ಭ್ರಷ್ಟಾಚಾರ ವಿರುದ್ಧ ಜಾಗೃತಿ ಅಭಿಯಾನ



**ಹುಬ್ಬಳ್ಳಿ:** ಕನಕದಾಸ ಶಿಕ್ಷಣ ಸಮಿತಿಯ ವಿಜಯನಗರ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ರಾಷ್ಟ್ರೀಯ ಸೇವಾ ಯೋಜನಾ ಎರಡೂ ಘಟಕಗಳ ಸಹಯೋಗದಲ್ಲಿ ಇಂದು ಪಿ.ಯು ಸಭಾಂಗಣದಲ್ಲಿ ಭ್ರಷ್ಟಾಚಾರ ವಿರುದ್ಧ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ನೆರವೇರಿಸಲಾಯಿತು.

ಈ ಕಾರ್ಯಕ್ರಮದ ಕುರಿತು ವಿಶೇಷ ಉಪನ್ಯಾಸವನ್ನು ತಾಲೂಕು ಕಾನೂನು ಸೇವಾ ಸಮಿತಿ ಹಾಗೂ ವಕೀಲರ ಸಂಘ ಹುಬ್ಬಳ್ಳಿ ವಕೀಲರಾದ ಮಂಗಳ ಗೌರಿ ವಿಶೇಷ ಉಪನ್ಯಾಸ ನೀಡಿದರು. ಪೋಕ್ಸು ಕಾಯ್ದೆ ಕುರಿತು ಹಾಗೂ ಭ್ರಷ್ಟಾಚಾರದ ವಿರುದ್ಧ ಜಾಗೃತಿಯನ್ನು ನಮ್ಮ ರಾಷ್ಟ್ರೀಯ ಸ್ವಯಂಸೇವಕರಿಗೆ ವಿವರಿಸಿದ್ದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಸಂದೀಪ್ ಬೂದಿಹಾಳ್ ಮತ್ತು ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಅಧಿಕಾರಿಗಳಾದ ಸಿ. ವೈ. ಹೊಸಮನಿ ಶ್ರೀಮತಿ ಕೆ.ಎಸ್. ಬೇಲೇರಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು ಹಾಗೂ ಉಪನ್ಯಾಸಕರಾದ ಬಿ ಹೆಚ್ ದಳವಾಯಿ ಡಾ. ಅಶೋಕ್ ಗಡಾದ್ ಎಸ್.ಬಿ ಮಾಸಗೋನೆ ಎನ್.ಡಿ ಹಾದಿಮನಿ ಎಸ್.ಎ ನಾಯ್ಕರ್ ಭಾಗವಹಿಸಿದ್ದರು ಕಾರ್ಯಕ್ರಮವನ್ನು ಉಪನ್ಯಾಸಕರಾದ ಕೆ.ಬಿ ಕುರಿಯವರು ನಿರೂಪಿಸಿದರು.

## ಎಚ್.ಐ.ವಿ ಏಡ್ಸ್ ಜಾಗೃತಿಗಾಗಿ ಬೈಕ್ ರ್‍ಯಾಲಿ

**ಗದಗ:** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಲಾಖೆ ಸಹಯೋಗದಲ್ಲಿ ತೀವ್ರಗೊಳಿಸಿದ ಎಚ್‌ಐವಿ ಏಡ್ಸ್ ಪ್ರಚಾರಾಂದೋಲನ ಬೈಕ್ ರ್‍ಯಾಲಿಗೆ ಡಿಟಿಓ ಡ್ಯಾಪ್ಕೋ ಅಧಿಕಾರಿ ಡಾ. ಅರುಂಧತಿ ಕೆ ಬುಧವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಚಾಲನೆ ನೀಡಿದರು.

ಬೈಕ್ ರ್‍ಯಾಲಿಯು ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಟಿಪ್ಪು ಸರ್ಕಲ್ , ಮುಳಗುಂದ ನಾಕಾ, ಜುಮ್ಮಾ ಮಸೀದಿ, ಟಾಂಗಾ ಕೂಟ , ಮಹೇಂದ್ರ ಕರ ಸರ್ಕಲ್ , ಗಾಂಧಿ ಸರ್ಕಲ್ , ಪೋಸ್ಟ್ ಆಫೀಸ್ ಮುಂದೆ ಸಾಗಿ ನಗರದ ಕೆ.ಸಿ.ರಾಣಿ ರೋಡ್ ದಲ್ಲಿರುವ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಬಂದು ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ನೌಕರರ ಸಂಘದ ಅಧ್ಯಕ್ಷ ಡಾ.ಬಸವರಾಜ ಬಳ್ಳಾರಿ, ಜಿಲ್ಲಾ ಮೇಲ್ವಿಚಾರಕರಾದ ಬಸವರಾಜ ಲಾಳಗಟ್ಟಿ, ಆರೋಗ್ಯ ಇಲಾಖೆಯ ಎನ್ ಟಿ ಇಪಿ , ಡ್ಯಾಪ್ಕೋ, ಐಸಿಟಿಸಿ ,ಎಆರ್‌ಟಿ ಸಿಬ್ಬಂದಿ ರಕ್ಷಣೆ, ಸೃಷ್ಟಿ ಸಂಕುಲ, ನವಚೇತನ ಮತ್ತು ಚೈತನ್ಯ ಸಂಸ್ಥೆಯ ಸಿಬ್ಬಂದಿಗಳು ಹಾಜರಿದ್ದರು.



### ಬ್ಯಾಂಕಾಕ್‌ನಲ್ಲಿ ಕನ್ನಡ ಬಳಗ ವತಿಯಿಂದ 51ನೇ ಅಂತಾರಾಷ್ಟ್ರೀಯ ಸಂಸ್ಕೃತಿ ಉತ್ಸವ

# ಕನ್ನಡ ಸಾಹಿತ್ಯಕ್ಕೆ ಪ್ರಪಂಚವನ್ನು ಒಗ್ಗೂಡಿಸುವ ಶಕ್ತಿ ಇದೆ

**ಮೋಳೆ:** ಕನ್ನಡ ಸಾಹಿತ್ಯ, ಸಂಗೀತಕ್ಕೆ ಪ್ರಪಂಚವನ್ನೇ ಒಗ್ಗೂಡಿಸುವ ದೈವಶಕ್ತಿ ಇದೆ. ಅಂತೆಯೇ ಕನ್ನಡ ನಾಡು, ನುಡಿ ಸಾಹಿತ್ಯ, ಸಂಗೀತ ಪರಂಪರೆ ವಿದೇಶದಲ್ಲಿಯೂ ಹಾಸು ಹೊಕ್ಕಾಗಿದೆ ಎನ್ನುವುದಕ್ಕೆ ಈ ಸಮ್ಮೇಳನವೇ ಸಾಕ್ಷಿ ಎಂದು ಸಾಹಿತಿ ಡಾ, ಅರ್ಚನಾ ಅಥಣಿ ಅಭಿಪ್ರಾಯ ಪಟ್ಟರು.

ಅವರು ಥೈಲ್ಯಾಂಡ್ ದೇಶದ 'ಬ್ಯಾಂಕಾಕ್‌ನಲ್ಲಿ ಕನ್ನಡ ಬಳಗ ಹಾಗೂ ಅಂತಾರಾಷ್ಟ್ರೀಯ ಸಂಸ್ಕೃತಿ ಉತ್ಸವ ಸಮಿತಿ ಇವರು ಏರ್ಪಡಿಸಿದ 51 ನೇ ಅಂತಾರಾಷ್ಟ್ರೀಯ ಸಂಸ್ಕೃತಿ ಉತ್ಸವದಲ್ಲಿ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ರಡ್ಡೇರಹಟ್ಟಿ ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕಿ ಸಾಹಿತಿ ಡಾ, ಅರ್ಚನಾ ಅಥಣಿಯವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡುತ್ತಿದ್ದರು.




ಕನ್ನಡ ಸಾಹಿತ್ಯ, ಸಂಗೀತವನ್ನು ಕೇವಲ ಮನರಂಜನೆಗಾಗಿ ಬಳಸದೆ ದೇವರ ಸೇವೆಗಾಗಿ, ಮನಸ್ಸಿನ ನೆಮ್ಮದಿ ಹಾಗೂ ದೈವತ್ವದ ಸಾಧನೆಗಾಗಿ ಪರಿವರ್ತನೆಯಾಗಿದೆ, ಅಂಥ ಶಕ್ತಿ ಕನ್ನಡ ಭಾಷೆಗಿದೆ ಎಂದರು. ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿದ್ದು, ಹಲವಾರು ರಾಜ ಮನೆತನಗಳು ಆಳ್ವಿಕೆ ಮಾಡಿ ಭಾಷೆಯನ್ನು ಶ್ರೀಮಂತಗೊಳಿಸಲು ಶ್ರಮಿಸಿವೆ. ಅದಕ್ಕಾಗಿ ಇಂದು ಭಾರತ ದೇಶದಲ್ಲಿ ಅಷ್ಟೇ ಅಲ್ಲ ಇಡೀ ವಿಶ್ವದಲ್ಲಿಯೇ ಕನ್ನಡ ಭಾಷೆ ವಿಶೇಷ ಮಾನ್ಯತೆ ಪಡೆದುಕೊಂಡಿದೆ ಎಂದರು.

ಈ ವೇಳೆ ಡಾ.ಅರ್ಚನಾ ಅಥಣಿಯವರನ್ನು ಸನ್ಮಾನಿಸಿದರು. ಥೈಲ್ಯಾಂಡ್‌ನಲ್ಲಿ ಜರುಗಿದ ಸಾಂಸ್ಕೃತಿಕ ಸಮ್ಮೇಳನದಲ್ಲಿ ಕನ್ನಡಕ್ಕೆ ಸಂಬಂಧಿಸಿದಂತೆ ಕವಿಗೋಷ್ಠಿ, ಹಾಸ್ಯಗೋಷ್ಠಿ, ಮಾಧ್ಯಮಗೋಷ್ಠಿ, ಹಾಗೂ ಅನಿವಾಸಿ ಕನ್ನಡಿಗರ ಗೋಷ್ಠಿಜರುಗಿದವು. ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ಭರತ ನಾಟ್ಯ, ಜಾನಪದ ನೃತ್ಯ, ರೂಪಯಕ್ಷಗಾಯನ,ಪುಸ್ತಕ ಬಿಡುಗಡೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರನ್ನು ಪ್ರಶಸ್ತಿ ನೀಡಿ ಸನ್ಮಾನಿಸಿದರು.

ಈ ಸಮಾರಂಭದ ಕರ್ನಾಟಕದಿಂದ ಹಲವು ಸಾಧಕರು, ಸಾಹಿತಿಗಳು ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.




ಯರಗಟ್ಟಿ: ತಾಲೂಕಿನ ಅಕ್ಕಿಸಾಗರ ಗ್ರಾಮದ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಂದ ಹಮ್ಮಿಕೊಂಡದ ರೇಬಿಸ್ ರೋಗದ ಅಭಿಯಾನಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಎ. ಎ. ಖಾಜಿ ಚಾಲನೆ ನೀಡಿದರು. ಈ ವೇಳೆ ಶಾಲೆಯ ಮುಖ್ಯೋಪಾಧ್ಯಾಯರು ಶ್ರೀಮತಿ ವ್ಹಿ. ಜಿ. ನಿಷಾನಿಮಠ ಹಾಗೂ ಪಶು ಸಂಗೋಪನಾ ಇಲಾಖೆಯ ತಾಲೂಕಾ ಅಧಿಕಾರಿ ಡಾ. ಎಂ. ವ್ಹಿ. ಪಾಟೀಲ, ಕಿರಿಯ ಪಶು ವೈದ್ಯ ಪರಿಕ್ಷಕ ಜಿ. ಎಚ್. ಮಾಳಿ, ಶಿಕ್ಷಕರಾದ ಆರ್. ಎ. ಕಾಂಬಳೆ, ಎಸ್. ಡಿ. ಬಾಗೇವಾಡಿ, ಎಸ್. ಬಿ. ಬಾಳೋಜಿ, ಎಸ್. ಡಿ. ಕೊಟಬಾಗಿ, ಎಸ್. ಎಂ. ನಾಯ್ಕ ಸೇರಿದಂತ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನೀರಾವರಿ ಯೋಜನೆ: ರೈತರಿಂದ ಅರ್ಜಿ ಆಹ್ವಾನ

**ಕೊಪ್ಪಳ:** 2025–26ನೇ ಸಾಲಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಲ್ಲೊಂದಾದ ಕಒ–ಖಏಗಿಜ–ಕಆಒಆ ಯೋಜನೆಯ ಸೂಕ್ಷ್ಮ ನೀರಾವರಿ ಯೋಜನೆಯಡಿ ತುಂತುರು ನೀರಾವರಿ ಘಟಕವನ್ನು(ಸ್ಪ್ರಿಂಕ್ಲರ್) ಶೇ.90 ರಷ್ಟು ಸಹಾಯಧನದಲ್ಲಿ ವಿತರಿಸಲಾಗುತ್ತಿದ್ದು, ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ರೈತರು ಹೊಂದಿರುವ ಹಿಡುವಳಿಗನುಗುಣವಾಗಿ ಗರಿಷ್ಠ 5 ಹೆಕ್ಟೇರ್‌ವರೆಗೆ ಸರ್ಕಾರದಿಂದ ಸಹಾಯಧನ ಪಡೆಯಲು ಅವಕಾಶವಿರುತ್ತದೆ. ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ ಮೊದಲು 2 ಹೆಕ್ಟೇರ್ ಪ್ರದೇಶದವರೆಗೆ ಶೇ.90 ಮತ್ತು 2 ಹೆಕ್ಟೇರ್ ನಂತರದ ಪ್ರದೇಶಕ್ಕೆ ಶೇ.45 ರಷ್ಟು ಸಹಾಯಧನ ಪಡೆಯಬಹುದಾಗಿದೆ. ಮುಂದುವರೆದು 2 ಹೆಕ್ಟೇರ್‌ಗೆ ಸಂಬಂಧಿಸಿದಂತೆ ಈಗಾಗಲೇ 1 ಹೆಕ್ಟೇರ್‌ಗೆ ಸಹಾಯಧನ ಪಡೆದಿದ್ದಲ್ಲಿ ಅಂತಹ ರೈತರಿಗೆ ಬಾಕಿ 1 ಹೆಕ್ಟೇರ್‌ಗೆ ಶೇ.90 ರಷ್ಟು ಸಹಾಯಧನ ಪಡೆಯಬಹುದಾಗಿರುತ್ತದೆ. ಈಗಾಗಲೇ 2025–26ನೇ ಸಾಲಿನ ಕ್ರಿಯಾ ಯೋಜನೆಯು ಕೇಂದ್ರ ಕಚೇರಿಯಿಂದ ಅನುಮೋದನೆಗೊಂಡಿದ್ದು, ಜೇಷ್ಠತಾ ಆಧಾರದ ಮೇಲೆ ಸರ್ಕಾರದಿಂದ ಸಹಾಯಧನದಡಿ ಸ್ಪ್ರಿಂಕ್ಲರ್ ಪಡೆಯುವ ಆಸಕ್ತ ರೈತರು ತಮಗೆ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಜಿಯೊಂದಿಗೆ ಪಹಣಿ, ಆಧಾರ್ ಕಾರ್ಡ್ ಪ್ರತಿ, ಎಫ್‌ಐಡಿ ಸಂಖ್ಯೆ, ನೀರಾವರಿ ದೃಢೀಕರಣ ಪ್ರಮಾಣ ಪತ್ರ(ಕಡ್ಡಾಯ), ಛಾಪಾ ಕಾಗದದ ಮೇಲೆ ಮುಚ್ಚಳಿಕೆ ಪತ್ರ, ಬ್ಯಾಂಕ್ ಪಾಸ್ ಬುಕ್ ಪ್ರತಿ, ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು, ಜಾತಿ ಪ್ರಮಾಣ ಪತ್ರ(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಾಗಿದ್ದಲ್ಲಿ ಮಾತ್ರ) ಸಲ್ಲಿಸಬೇಕು. ಎಲ್ಲಾ ವರ್ಗದ ರೈತರಿಗೆ ಮಾರ್ಗಸೂಚಿ ಪ್ರಕಾರ ಒಮ್ಮೆ ಸೂಕ್ಷ್ಮ ನೀರಾವರಿ ಘಟಕವನ್ನು ಸಹಾಯಧನದಡಿ ಪಡೆದ ನಂತರ ಅಂತಹ ಫಲಾನುಭವಿಗಳು 7 ವರ್ಷಗಳವರೆಗೆ ಪುನಃ ಸಹಾಯಧನ ಪಡೆಯಲು ಅವಕಾಶವಿರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನ



**ಧಾರವಾಡ:** ಧಾರವಾಡ ನಗರದ ವಾರ್ಡ್ ನಂ. 8 ಆರೋಗ್ಯ ಕೇಂದ್ರದಲ್ಲಿ ನಿನ್ನೆ (ಸೆ.17) ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನವನ್ನು ಮಹಾನಗರ ಪಾಲಿಕೆ ಸದಸ್ಯ ಶಂಕರ ಶೇಳಕೆ ಅವರು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಒಂದೇ ಸೂರಿನಡಿಯಲ್ಲಿ ಗರ್ಭಿಣಿ ತಪಾಸಣೆ, ಬಾಣಂತಿ ತಪಾಸಣೆ, ಲಸಿಕಾ ಕಾರ್ಯಕ್ರಮ, ಎನ್‌ಸಿಡಿ ಕಾರ್ಯಕ್ರಮ, ಕಿಶೋರಿಯರಿಗೆ ಋತುಚಕ್ರದ ಶುಚಿತ್ವದ ಬಗ್ಗೆ, ಪೌಷ್ಟಿಕ ಆಹಾರದ ಬಗ್ಗೆ, ತಿಳಿಸಲಾಯಿತು. ಕಿವಿ, ಕಣ್ಣು, ಗಂಟಲು, ಮೂಗು ತಪಾಸಣೆ, ರಕ್ತಹೀನತೆ ಪರೀಕ್ಷೆ, ಕ್ಯಾನ್ಸರ್ ಪರೀಕ್ಷೆ, ಕ್ಷಯರೋಗ ಪರೀಕ್ಷೆ, ಟೆಲಿ ಮಾನಸ ಸೌಲಭ್ಯಗಳು, ಸಿಕಲ್ ಸೆಲ್ ರಕ್ತಹೀನತೆ, ತಾಯಿ ಕಾರ್ಡ್ ವಿತರಣೆ, ಪೌಷ್ಟಿಕ ಆಹಾರ ಶಿಬಿರ, ಅಂಗದಾನ ಮತ್ತು ರಕ್ತದಾನದ ಬಗ್ಗೆ ವಿಶೇಷ ಮಾಹಿತಿ ನೀಡಲಾಯಿತು.

ಮನೆ ಬಾಗಿಲಿಗೆ ಆರೋಗ್ಯ ಸೇವೆಗಳನ್ನು ಸರ್ಕಾರದಿಂದ ಉಚಿತವಾಗಿ ತಲುಪಿಸಿಲಾಗುತ್ತಿದ್ದು, ಅದರ ಸದುಪಯೋಗವನ್ನು ಪಡೆಯುವಂತೆ ಜನರಿಗೆ ತಿಳಿಸಲಾಯಿತು.

ವೈದ್ಯಾಧಿಕಾರಿ ಡಾ.ಅರಣಾ ಅನ್ವೇಕರ ಅವರು ಅಭಿಯಾನದ ಕುರಿತು ಮಾಹಿತಿ ನೀಡಿದರು. ಪ್ರಾಥಮಿಕ ಆರೋಗ್ಯ ಸುರಿಕ್ಷಾಧಿಕಾರಿ ಚಂದ್ರಿಕಾ ದಮ್ಮಳ್ಳಿ ಅವರು ನಿರೂಪಿಸಿದರು.

ಈ ಸಂದರ್ಭದಲ್ಲಿ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

# 16 ಕೆ.ಜಿ 790 ಗ್ರಾಂ. ಗಾಂಜಾ ನಾಶ

**ಧಾರವಾಡ:** ಧಾರವಾಡ ಪೊಲೀಸರಿಂದ ಜಪ್ತ ಮಾಡಲಾದ 15 ಪ್ರಕರಣದಲ್ಲಿನ 16 ಕೆ.ಜಿ 790 ಗ್ರಾಂ. ಗಾಂಜಾ ನಾಶ ಮಾದಕ ವಸ್ತು ಮತ್ತು ಸಂಘಟಿತ ಅಪರಾಧಗಳ ವಿಭಾಗ ಹಾಗೂ ಎ.ಎನ್.ಟಿ.ಎಫ್ ನೋಡಲ್ ಅಧಿಕಾರಿಗಳು, ಸಿಐಡಿ ಬೆಂಗಳೂರು ಅವರ ನಿರ್ದೇಶನದಂತೆ, ಧಾರವಾಡ ಜಿಲ್ಲೆಯಲ್ಲಿ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಜಪ್ತ ಮಾಡಲಾಗಿರುವ ಮಾದಕ ವಸ್ತುಗಳನ್ನು ನಾಶಪಡಿಸುವ ಸಲುವಾಗಿ ಪೊಲೀಸ್ ಅಧೀಕ್ಷಕರು ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯ ಅಧಿಕಾರಿಗಳು ಸೆಪ್ಟೆಂಬರ 12, 2025 ರಂದು ಸಭೆ ನಡೆಸಿ, ಚರ್ಚಿಸಿ ತೀರ್ಮಾನಿಸಿರುವಂತೆ, 2024 ಮತ್ತು 2025 ನೇ ಸಾಲಿನಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಜಪ್ತ ಮಾಡಲಾಗಿರುವ ಗಾಂಜಾ ಮಾದಕ ವಸ್ತುವನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬೆಂಗಳೂರ ರವರ ಸುತ್ತೋಲೆ No PCB /WMC/ 314/ HWM(2016)2018-2019/5076 DATED 29-12-2019 C£ÀéAiÀÄ 29-12-2019 gÀ£ÀéAiÀÄ M/s Rio Green India Ltd(CBMWTF) Plot No:126/L Tarihal Industrial area Tq: Hubballi ಯಲ್ಲಿ ಸೆಪ್ಟೆಂಬರ 18,2025 ರಂದು ಸುಟ್ಟು ನಾಶಪಡಿಸಲು ತೀರ್ಮಾನಿಸಿದ್ದು ಇರುತ್ತದೆ.

ಅದರಂತೆ ಗುರುವಾರ ಧಾರವಾಡ ಜಿಲ್ಲೆಯ ಎಲ್ಲ ಪೊಲೀಸ್ ಠಾಣೆಗಳಲ್ಲಿ 2024 ಮತ್ತು 2025 ನೇ ಸಾಲಿನಲ್ಲಿ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ದಾಖಲಾಗಿರುವ ಪ್ರಕರಣಗಳ ಪೈಕಿ 15 ಪ್ರಕರಣಗಳಲ್ಲಿ ಜಪ್ತ ಮಾಡಲಾಗಿರುವ ಗಾಂಜಾ (ಮಾದರಿ ತೆಗೆದಿರಿಸಿದ ಗಾಂಜಾ ಹೊರತುಪಡಿಸಿ) ಒಟ್ಟು ತೂಕ 16 ಕೆಜಿ 790 ಗ್ರಾಂ, ಮಾದಕ ವಸ್ತುವನ್ನು ಧಾರವಾಡ ಜಿಲ್ಲಾ ಪೊಲೀಸ್ ಅಧಿಕಾರಿಗಳಾದ ಪೊಲೀಸ್ ಅಧೀಕ್ಷಕರು, ಡಿ.ಎಸ್.ಪಿ ಧಾರವಾಡ ಗ್ರಾಮೀಣ ಉಪ–ವಿಭಾಗ, ಸಿ.ಪಿ.ಐ ನವಲಗುಂದ ವೃತ್ತ ರವರನ್ನೊಳಗೊಂಡ " ಆಡಿಣಾರ ಊಠಿಥಚಿಟ ಛಿಂಟಟುಣಣಜಜ" ರವರ ಸಮಕ್ಷಮ ಮುಖ್ಯಾಧಿಕಾರಿಗಳು ಕರ್ನಾಟಕ ರಾಜ್ಯ ವಾಯು ಮಾಲಿನ್ಯ ನಿಯಂತ್ರಣ ಮಂಡಳಿ, ಲಕಮನಹಳ್ಳಿ ಧಾರವಾಡ ಅವರ ಸಮ್ಮುಖದಲ್ಲಿ M/s Rio Green India Ltd(CBMWTF) Plot No:126/L Tarihal Industrial area Tq: Hubballi ಅವರಲ್ಲಿ ಸುಟ್ಟು ನಾಶ ಪಡಿಸಲಾಯಿತು ಎಂದು ಧಾರವಾಡ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾವೋಬಾಬ್ ಗಿಡಗಳಿಂದ ಅಂತರ್ಜಲ ಹೆಚ್ಚಳ



**ಮುದ್ದೇಬಿಹಾಳ:** ಬಾವೋಬಾಬ್ ಮರಗಳು ಅತೀ ದೀರ್ಘ ಕಾಲದ ಆಯುಷ್ಯ ಹೊಂದಿದ್ದು, ಅವುಗಳ ನೆಡುವಿಕೆಯಿಂದ ಅಂತರ್ಜಲ ಹೆಚ್ಚಲಿದೆ ಎಂದು ತಾಲ್ಲೂಕು ವಲಯ ಅರಣ್ಯಾಧಿಕಾರಿ ಬಸನಗೌಡ ಬಿರಾದಾರ ಹೇಳಿದರು.

ಅವರು ಬುಧವಾರ, ಬಿದರಕುಂದಿ ಬೆಟ್ಟದಲ್ಲಿರುವ ಸಾಲುಮರದ ತಿಮ್ಮಕ್ಕ ವೃಕ್ಷೋದ್ಯಾನದಲ್ಲಿ ನಡೆದ ವನಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ವೃಕ್ಷೋದ್ಯಾನದಲ್ಲಿ ಗಿಡಗಳನ್ನು ನೆಡುವ ಹಾಗೂ ಅದರ ಸೌಂದರ್ಯ ಹೆಚ್ಚಿಸುವ ಕಾರ್ಯ ಸಮರೋಪಾದಿಯಲ್ಲಿ ನಡೆದಿದೆ ಎಂದರು.

ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ಸಹಾಯಕ ವಲಯ ಅರಣ್ಯಾಧಿಕಾರಿ, ರಾಜೇಂದ್ರ ಹುನ್ನೂರ, ಅರಣ್ಯ ಇಲಾಖೆಯ ವಿಠ್ಠಲ ಬೋರಟಗಿ, ವಿಜಯಕುಮಾರ್ ಕಿತ್ತೂರ, ಯಲಗೂರಪ್ಪ, ಹಸಿರು ತೋರಣ ಬಳಗದ ಅಧ್ಯಕ್ಷ ಬಿ.ಎಚ್.ಬಳಬಟ್ಟಿ, ಕಾರ್ಯದರ್ಶಿ ಅಮರೇಶ ಗೂಳಿ, ಸಂಚಾಲಕ ಮಹಾಬಲೇಶ್ವರ ಗಡೇದ, ತಾಲ್ಲೂಕು ಪಂಚಾಯತ ಮಾಜಿ ಸದಸ್ಯ ಶ್ರೀಶೈಲ ಮರೋಳ, ಮಾಜಿ ಅಧ್ಯಕ್ಷರಾದ ನಾಗಭೂಷಣ ನಾವದಗಿ, ಅಶೋಕ ರೇವಡಿ, ರವಿ ಗೂಳಿ, ಸದಸ್ಯರಾದ ಮಲ್ಲಿಕಾರ್ಜುನ ಬಾಗೇವಾಡಿ, ಸುರೇಶ ಕಲಾಲ, ವಿಲಾಸರಾವ್ ದೇಶಪಾಂಡೆ, ವೆಂಕನಗೌಡ ಪಾಟೀಲ, ಅಮರೇಶ ಐಹೊಳೆ, ಕಿರಣ ಪಾಟೀಲ, ವಿನಯ ಹಿರೇಮಠ, ಮಹಾಂತೇಶ ಬಸನಗೌಡ್ರ, ಈರಯ್ಯ ಮಠ, ಆದೇಶ ಕೋಳೂರ, ರೇಷ್ಮಾ ಮಾಳನೂರ ಬಿದರಕುಂದಿ, ಸೀತಿಮನಿ, ಚಿಕ್ಕ ನರಗುಂದ, ಮತ್ತಿತರರು ಇದ್ದರು. ಪರಮಾನಂದ ಪಾಟೀಲ ಪ್ರಾರ್ಥಿಸಿದರು. ಮಹಾಬಲೇಶ್ವರ ಗಡೇದ ಸ್ವಾಗತಿಸಿ, ನಿರೂಪಿಸಿದರು.

# ಸಂಭ್ರಮದ ವಾಲ್ಮಿಕಿ ಜಯಂತಿ ಆಚರಣೆಗೆ ಸೂಚನೆ

**ಬೆಳಗಾವಿ:** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಅಕ್ಟೊಬರ 7 ರಂದು ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಅತಿ ವಿಜೃಂಭಣೆಯಿಂದ ಆಚರಿಸಲಾಗುವುದು. ಕಾರ್ಯಕ್ರಮಕ್ಕೆ ಅಗತ್ಯವಿರುವ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಶ್ರೀ ಮಹರ್ಷಿ ವಾಲ್ಮಿಕಿ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಸಂಗೊಳ್ಳಿ ರಾಯಣ್ಣನೊಂದಿಗೆ ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಮರಣ ದಂಡನೆ ಹಾಗೂ ಜೀವಾವದಿ ಶಿಕ್ಷೆಗೆ ಒಳಗಾದ ಸಮುದಾಯದ ನಾಯಕರಾದ ಹೆಸರುಗಳನ್ನು ಕಾರ್ಯಕ್ರಮದ ವೇದಿಕೆಗೆ ಇಡಲು ಸೂಚಿಸಿದರು.



ಕಾರ್ಯಕ್ರಮದ ದಿನದಂದು ಕೋಟೆ ಕೆರೆ ಆವರಣದಿಂದ ಸಂಗೋಳ್ಳಿ ರಾಯಣ್ಣ ಮಾರ್ಗವಾಗಿ ಕುಮಾರ ಗಂಧರ್ವ ರಂಗಮಂದಿರದ ವರೆಗೆ ಭವ್ಯ ಮೆರವಣಿಗೆ ಆಯೋಜಿಸಲು ತೀರ್ಮಾನಿಸಲಾಯಿತು.

ಮೆರವಣಿಗೆಯಲ್ಲಿ ಜಾನಪದ ಕಲಾ ತಂಡ ಹಾಗೂ ಮಹಿಳೆಯರಿಂದ ಕುಂಭ ಮೆರವಣಿಗೆ ಆಯೋಜಿಸಲು ಕ್ರಮ ಜರುಗಿಸಬೇಕು. ವೇದಿಕೆ ಕಾರ್ಯಕ್ರಮ ಹಾಗೂ ಮೆರವಣಿಗೆಯಲ್ಲಿ ಎಲ್ಲ ಸರಕಾರಿ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಕ್ರಮ ವಹಿಸಲು ಸೂಚಿಸಿದ ಅವರು ನಗರದ ಪ್ರವೇಶ ಸ್ಥಳಗಳಲ್ಲಿ ಸ್ವಾಗತ ಕಮಾನು ನಿರ್ಮಾಣ ಹಾಗೂ ಪ್ರಮುಖ ಸ್ಥಳಗಳಲ್ಲಿ ಬ್ಯಾನರ್ ಅಳವಡಿಸಲು ತಿಳಿಸಿದರು.

ಕಾರ್ಯಕ್ರಮದ ಕುರಿತು ಮುದ್ರಿಸಲಾಗುವ ಆಮಂತ್ರಣ ಪತ್ರಿಕೆಗಳನ್ನು ಶಿಷ್ಟಾಚಾರದ ಪ್ರಕಾರ ಮುದ್ರಿಸಿ ಗಣ್ಯರುಗಳಿಗೆ ಸಾಕಷ್ಟು ಮುಂಚಿತವಾಗಿ ತಲುಪಿಸುವ ಕಾರ್ಯವಾಗಬೇಕು. ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮಿಕಿ ಅವರ ಜೀವನ ಸಂದೇಶಗಳನ್ನು ಜನ ಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳನ್ನು ಅಂತಿಮಗೊಳಿಸಲು ಸೂಚಿಸಿದರು.

ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ ಸೇರಿದಂತೆ ಸರಕಾರಿ ಕಚೇರಿ, ಬ್ಯಾಂಕುಗಳಲ್ಲಿ ಕಡ್ಡಾಯವಾಗಿ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಮವನ್ನು ಆಚರಿಸಿ ವರದಿ ಸಲ್ಲಿಸಲು ಸೂಚನೆ ನೀಡಲಾಗುವದು ಎಂದರು.

ಕಾರ್ಯಕ್ರಮದಲ್ಲಿ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವೇದಿಕೆಯಲ್ಲಿ ಸನ್ಮಾನಿಸಲು ತೀರ್ಮಾನಿಸಲಾಯಿತು. ತಾಲೂಕುಗಳಲ್ಲಿ ತಹಶೀಲ್ದಾರರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲು ನಿರ್ದೇಶನ ನೀಡಲಾಗುವದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಅವರು ಮಾತನಾಡಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಉದ್ಯೋಗ ಮೇಳ ಆಯೋಜಿಸಲು ಕ್ರಮವಹಿಸಲಾಗುವುದು ಎಂದರು.

ಸಭೆಯಲ್ಲಿ ಪೋಲಿಸ ಆಯುಕ್ತರಾದ ಬೊರಸೆ ಗುಲಾಬರಾವ್ ಭೂಷಣ, ಮಹಾನಗರ ಪಾಲಿಕೆ ಆಯುಕ್ತೆ ಶುಭಾ ಬಿ, ಸೇರಿದಂತೆ ವಿವಿಧ ಇಲಾಖೆಗಳ ಅಧಕಾರಿಗಳು ಹಾಜರಿದ್ದರು. ಸಭೆಯಲ್ಲಿ ಉಪಸ್ಥಿತರಿದ್ದ ಸಮುದಾಯದ ಮುಖಂಡರು, ಗಣ್ಯರು ಮಹರ್ಷಿ ವಾಲ್ಮಿಕಿ ಜಯಂತಿ ಅರ್ಥಪೂರ್ಣ ಆಚರಣೆಗೆ ಸಂಬಂಧಿಸಿದಂತೆ ಸಲಹೆಗಳನ್ನು ನೀಡಿದರು.

# ಗ್ರಾಹಕರ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡುತ್ತೇವೆ

**ಘಟಪ್ರಭಾ:** ಮಲ್ಲಾಪೂರ ಪಿ ಜಿ ಗ್ರಾಮದ ಅನೇಕ ಹಿರಿಯರು 59 ವರ್ಷಗಳ ಹಿಂದೆ ಸಾಲ ಸಿಗದ ಕಾಲದಲ್ಲಿ ಅಷ್ಟೇನು ಬೆಳವಣಿಗೆ ಹೊಂದದ ಘಟಪ್ರಭಾ ಗ್ರಾಮದ ಪರಿಸ್ಥಿತಿ ಮನಗಂಡ ಅವರು ಪಕ್ಕದ ಊರಿನ ಸಹಕಾರಿ ಬ್ಯಾಂಕ್ ಅಧ್ಯಕ್ಷರಿಗೆ ಸಾಲ ನೀಡಲು ಮನವಿ ಮಾಡಿದಾಗ ಅವರು ನಿರಾಕರಿಸಿದಾಗ ದಿ. ಮಲ್ಲಪ್ಪ ಹತ್ತರವಾಟ ಹಾಗೂ ಅನೇಕ ಹಿರಿಯರು ದೃಢ ಸಂಕಲ್ಪ ಮಾಡಿ ಸಹಕಾರಿ ಬ್ಯಾಂಕ ಸ್ಥಾಪನೆ ಮಾಡುವ ಉದ್ದೇಶದಿಂದ ಶೇರು ಸಂಗ್ರಹಣೆ ಮಾಡಿದಾಗ ಅದಕ್ಕೂ ಕಡಿಮೆ ಬಿದ್ದಾಗ ಹಿರಿಯ ಶ್ರೀಗಳ ಜೋಳಿಗೆಯಿಂದ ರೂ. 3200/– ಪಡೆದು ಬ್ಯಾಂಕ ಸ್ಥಾಪನೆ ಮಾಡಿ ನಮಗೆ ಬ್ಯಾಂಕ ವರದಾನವಾಗಿ ಕೊಟ್ಟಿದ್ದಾರೆ. ಹಾಗೂ ಬ್ಯಾಂಕಿನ ಪ್ರಥಮ ವ್ಯವಸ್ಥಾಪಕರಾಗಿ ನಮ್ಮ ತಂದೆ ದಿ. ಮಲ್ಲಪ್ಪ ತುಕ್ಕಾನಟ್ಟಿ ಅವರು ಸಹಕಾರಿ ಸೇವಕರಗಿ ಕೆಲಸ ಮಾಡಿ ಘಟಪ್ರಭಾ ಹಾಗೂ ಸುತ್ತಮುತ್ತಲಿನ ಜನರ ಆರ್ಥಿಕ ಪರಿಸ್ಥಿತಿ ಸುಧಾರಣೆಗೆ ಕೆಲಸ ಮಾಡಿದ್ದಾರೆ ಎಂದು ಮಲ್ಲಾಪೂರ ಅರ್ಬನ ಬ್ಯಾಂಕಿನ ಅಧ್ಯಕ್ಷ ರಮೇಶ ತುಕ್ಕಾನಟ್ಟಿ ಹೇಳಿದರು.

ಅವರು ಗುರುವಾರದಂದು ಪಟ್ಟಣದ ದಿ ಮಲ್ಲಾಪೂರ ಅರ್ಬನ್ ಕೋ ಆಪ ಬ್ಯಾಂಕ ಲಿ. ಘಟಪ್ರಭಾ ಇದರ 2024– 25 ನೇ ಸಾಲಿನ 59 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಉದ್ದೇಸಿಸಿ ಮಾತನಾಡಿ ಕೃಷಿ, ಕೈಗಾರಿಕೆ, ವ್ಯಾಪಾರ, ಶಿಕ್ಷಣ ಕ್ಷೇತ್ರಕ್ಕೆ ಸಾಲ ನೀಡಿ, ಅವರ ಬೆಳವಣಿಗೆಗೆ ಬ್ಯಾಂಕ ಪ್ರಮುಖ ಪಾತ್ರ ವಹಿಸಿದೆ




ಎಂದರು. ಈ ಬ್ಯಾಂಕ ಬೆಳವಣಿಗೆಗೆ ಆಡಳಿತ ಮಂಡಳಿ ಸಹಕಾರ, ಸಿಬ್ಬಂದಿ ಶ್ರಮ, ಗ್ರಾಹಕರ, ಶೇರುದಾರರ ವಿಶ್ವಾಸವೇ ಕಾರಣ ಎಂದರು.

ಬ್ಯಾಂಕಿನ ವ್ಯವಸ್ಥಾಪಕರಾದ ರಮೇಶ ಮುರಗೋಡ ವರದಿ ವಾಚನ ಮಾಡಿ ಮಾತನಾಡಿ ಸನ್ 2024–25 ನೇ ಸಾಲಿಗೆ ಬ್ಯಾಂಕು 4921 ಸದಸ್ಯರನ್ನು ಹೊಂದಿದ್ದು, ರೂ. 99,31,200/– ಗಳ ಶೇರ್ ಬಂಡವಾಳ, ರೂ.4,53,00,283–99 ಗಳ ಕಾಯ್ದಿಟ್ ನಿಧಿ, ರೂ. 23,02,97,566–18 ಗಳ ಠೇವಣಿ, ರೂ. 16,60,79,982/– ಗಳ ಸಾಲ ನೀಡಿದೆ. ರೂ. 29,62,77,395–91 ಗಳ ದುಡಿಯುವ ಬಂಡವಾಳ ಹೊಂದಿದೆ. ಪ್ರಸಕ್ತ ವರ್ಷ ಬ್ಯಾಂಕು ರೂ. 29,19,913–25 ಗಳ ಲಾಭ ಗಳಿಸಿ ಮತ್ತು 5 ಲಕ್ಷ ರೂಪಾಯಿ ವರೆಗಿನ ಠೇವಣಿಗೆ ವಿಮಾ ಸೌಲಭ್ಯ ಕಲ್ಪಿಸಿ ಸಹಕಾರಿ ರಂಗದ ಉತ್ತಮ ಬ್ಯಾಂಕ ಆಗಿ ಮುನ್ನಡೆಯುತ್ತಿದೆ ಎಂದರು.

ಈ ಸಂದರ್ಭದಲ್ಲಿ ಬ್ಯಾಂಕಿನ ಉಪಾಧ್ಯಕ್ಷರಾದ ಹೊನ್ನಜ್ಜ ಚ. ಕೋಳಿ, ಹಾಗೂ ಆಡಳಿತ ಮಂಡಳಿಯ ಸದಸ್ಯರಾದ ಶ್ರೀಶೈಲ ಮ. ಮಗದುಮ್ಮ, ಆನಂದ ದು ಕಬಾಡಗಿ, ಸತೀಶ ಬಿ ಹತ್ತರವಾಟ, ಶುಭಾಶಚಂದ್ರ ಶೆ ಕಾಡದವರ, ಮಹಾದೇವ ಕಾ. ಬಟನೂರೆ, ಮಹಾವೀರ ಪಾ ಹುಲ್ಲೋಳಿ, ಡಾ. ರಾಜಶೇಖರ ಗೊ. ತುಕ್ಕಾನಟ್ಟಿ, ಕಲ್ಲೋಳೆಪ್ಪಾ ಹ. ಜಮಖಂಡಿ, ರಾಮಪ್ಪ ಬ ನಾಯಿಕ, ಶ್ರೀಮತಿ ರೇವಕ್ಕ ಶಂ. ಕಮತ, ಶ್ರೀಮತಿ ಶೃತಿ ಮ. ಮಟಗಾರ, ಶ್ರೀಕಾಂತ ಸು. ಗಾಡವಿ, ರಮೇಶ ನಿ. ಬಂಗಾರಿ ,ಹಾಗೂ ಮಲ್ಲಾಪೂರ ಪಿಕೆಪಿಎಸ್ ಅಧ್ಯಕ್ಷ ಮುತ್ತಣ್ಣ ಹತ್ತರವಾಟ, ಮಂಜು ಮಟಗಾರ, ಜಿ ಎಸ್ ರಜಪೂತ,ಮಾರುತಿ ಹುಕ್ಕೇರಿ, ಎ ಕೆ ಚೌಗಲಾ,ಸತೀಶ ಪಾಟೀಲ, ವೀರಭದ್ರ ಕರೋಶಿ, ಮಲ್ಲಪ್ಪ ಬನ್ನನವರ, ಸಾಮಾಜಿಕ ಕಾರ್ಯಕರ್ತ ಶ್ರೀಕಾಂತ ಮಹಾಜನ, ಶ್ರೀಕಾಂತ ಕುಲಕರ್ಣಿ, ಎಮ್ ಎ ಪಾಟೀಲ, ಬಸವರಾಜ ಬಾಗೇವಾಡಿ, ಪಾರೇಶ ಗಡ್ಡಿ, ಗುಡಸ ಪಿಕೆಪಿಎಸ್ ಅಧ್ಯಕ್ಷ ಮಲ್ಲು ನರಸನ್ನವರ, ಶಿವನಪ್ಪ ನೇರ್ಲಿ,ಅಲ್ಲಪ್ಪ ಹುಕ್ಕೇರಿ ಹಾಗೂ ಘಟಪ್ರಭಾ ಹಾಗೂ ಸುತ್ತಮುತ್ತಲಿನ ರೈತರು, ಮುಖಂಡರು, ಶೇರುದಾರರು, ಸಿಬ್ಬಂದಿ ಭಾಗವಹಿಸಿದ್ದರು.

### ವಿವಿಧ ಕಲಾ ತಂಡಗಳಿಂದ ಪ್ರದರ್ಶನದೊಂದಿಗೆ ನಡೆದ ಭವ್ಯ ಮೆರವಣಿಗೆ

# ದಾಖಲೆ ನಿರ್ಮಿಸಿದ ದಾನೇಶ್ವರಶ್ರೀಗಳ ಅಮೃತ ಮಹೋತ್ಸವ

**ರಬಕವಿ–ಬನಹಟ್ಟಿ:** ಕಣ್ಣು ಹಾಯಿಸಿದಷ್ಟು ಜನವೋ ಜನ.. ನಾಡಿನ ನೂರಾರು ಕಲಾವಿದರಿಂದ ವಿವಿಧ ಕಲಾ ತಂಡಗಳಿಂದ ಪ್ರದರ್ಶನದೊಂದಿಗೆ ನಡೆದ ಭವ್ಯ ಮೆರವಣಿಗೆ 'ನ ಭೂತೋ.. ನ ಭವಿಷ್ಯತೆ' ಎಂಬಂತೆ ಸಾಕ್ಷಿಯಾಗುವ ಮೂಲಕ ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠದ ದಾನೇಶ್ವರಶ್ರೀಗಳ 'ಅಮೃತ ಮಹೋತ್ಸವ' ಕಾರ್ಯಕ್ರಮ ದಾಖಲೆ ನಿರ್ಮಿಸಿತು.

ಗುರುವಾರ ರಬಕವಿಯ ಭಗೀರಥ ವೃತ್ತದಿಂದ ಬನಹಟ್ಟಿಯ ನೂಲಿನ ಗಿರಣಿವರೆಗೆ ಸುಮಾರು 5 ಕಿ.ಮೀ.ನಷ್ಟು ನಡೆದ ಭವ್ಯ ಮೆರವಣಿಗೆಯುದ್ದಕ್ಕೂ ಹಾಡು, ಕಲಾ ತಂಡ, ನೃತ್ಯ, ಗೊಂಬೆ ಕುಣಿತದೊಂದಿಗೆ ಭಕ್ತರು ಕೋಲಾಟದೊಂದಿಗೆ ತಮ್ಮ ಕಲಾ ಸಿರಿವಂತಿಕೆ ತೋರಿಸುವಲ್ಲಿ ಯಶಸ್ವಿಯಾದರು.

ಸಚಿವ ಆರ್.ಬಿ. ತಿಮ್ಮಾಪೂರ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿ, 'ಭಕ್ತರೇ ಮಠದ ದೊಡ್ಡ ಆಸ್ತಿ' ಎಂಬುದಕ್ಕೆ ಬಂಡಿಗಣಿಮಠ ಇಂದು ಸಾಕ್ಷಿಯಾಗಿ ನಿಂತಿದೆ ಎಂದರು.

ದಾನೇಶ್ವರಶ್ರೀಗಳು ಮಾತನಾಡಿ, ಬಸವಣ್ಣನವರ ನುಡಿದಂತೆ ನಡೆ ಎನ್ನುವ ತತ್ವ ಇಂದಿನ ಸಮಾಜಕ್ಕೆ ಅಗತ್ಯವಾಗಿದೆ. ಆಧ್ಯಾತ್ಮಿಕ ಶಕ್ತಿ, ತಪೋಶಕ್ತಿ, ಅನುಷ್ಠಾನದಿಂದ ಮಾತ್ರ ಪವಾಡ ಮಾಡಲು ಸಾಧ್ಯ. ಸಮಾಜವೇ ತಂದೆ, ತಾಯಿಗಳು ಎಂಬ ಭಾವನೆ ಮಠಾಧೀಶರಲ್ಲಿ ಮೂಡಬೇಕು. ಭಕ್ತರು ಮಾತೃಸ್ವರೂಪಿಗಳು ಜಂಗಮ ಪರಂಪರೆ, ದಾಸೋಹಗಳು



ಬಂಡಿಗಣಿಮಠದಿಂದ ದಿನ ನಿತ್ಯ ಜರುಗುತ್ತಿದೆ. ಎಂದಿಗೂ ನಿಲ್ಲುವದಿಲ್ಲವೆಂದರು. ಇಂದಿನ ಭವ್ಯ ಮೆರವಣಿಗೆ ಭಗವಂತನಿಗೆ ಸಲ್ಲುತ್ತದೆ. ನಾನು ಮಾಡಿರುವದು ಏನೂ ಇಲ್ಲ. ಎಲ್ಲವೂ ಆ ದೇವನಿಂದಲೇ ನಡೆಯುತ್ತಿದೆ ಎಂದು ಮೌನವಾದರು.

ಜೆಸಿಬಿ ಮೂಲಕ ಹೂವಿನ ಮಳೆ: ರಸ್ತೆಯುದ್ದಕ್ಕೂ ಹೂವಿನ ಮಳೆ ಸುರಿದರೆ ಅಲ್ಲಲ್ಲಿ ವೃತ್ತಗಳ ಪ್ರದೇಶಗಳಲ್ಲಿ ಜೆಸಿಬಿಗಳ ಮೇಲೆ ನಿಂತು ಪುಷ್ಪವೃಷ್ಟಿ ಸುರಿಯಿತು. ಗುಲಾಬಿ, ಸೇವಂತಿ, ಚಂಡು ಹೂಗಳ ಪಕಳೆಗಳಲ್ಲಿ ಮುಳುಗಿ ಹೋದ ರಸ್ತೆ ಹಳದಿ, ಕೆಂಪುಮಯವಾಗಿತ್ತು.

ಹರಿದು ಬಂದ ಭಕ್ತಸಾಗರ: ಕರ್ನಾಟಕ, ಮಹಾರಾಷ್ಟ್ರ ಹಾಗು ಆಂಧ್ರ ಪ್ರದೇಶದಿಂದ ಲಕ್ಷಕ್ಕೂ ಅಧಿಕ ಭಕ್ತರು ಉತ್ಸವದಲ್ಲಿ ಭಾಗಿಯಾಗಿದ್ದರು. ದೇಶೀಯ ಸೊಗಡಿನ ಸಾಂಸ್ಕೃತಿಕ ವೇಷ ಭೂಷಣಗಳು ಮೆರವಣಿಗೆಯುದ್ದಕ್ಕೂ ಕಲಾ ಸಿರಿವಂತಿಕೆಗೆ ಪಾತ್ರವಾಗಿದ್ದವು.

ಹಿರೇಮಠದ ಶರಣಬಸವ ಶಿವಾಚಾರ್ಯರು ಸಾನಿಧ್ಯ ವಹಿಸಿದ್ದರು. ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ, ದೇವರಾಜ ಅರಸು ಹಿಂದುಳಿದ ವರ್ಗಗಳ ನಿಗಮದ ಅಧ್ಯಕ್ಷ ಕೀರ್ತಿ ಗಣೇಶ ಎನ್.ಜಿ, ಬಿಜೆಪಿ ಯುವ ಮುಖಂಡ ವಿದ್ಯಾಧರ ಸವದಿ ಸೇರಿದಂತೆ ಅನೇಕ ಗಣ್ಯರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಸಂಜೆ 6 ರಿಂದ ಸರಿಗಮಪ ವಿಜೇತೆ ಕು. ಶಿವಾನಿ ಶಿವದಾಸ ಸ್ವಾಮಿ ಹಾಗು ಗದಗನ ಮಹಿಬೂಬಾಸಾಬರಿಂದ ಸಂಗೀತ ಸುಧೆ ಹಾಗು ರಾತ್ರಿ 9 ಕ್ಕೆ ಸ್ವರಾಜಶೆಟ್ಟಿ ಅಭಿನಯದ ಶಿವಧೂಗ ಗೂಳಿಗ ಪ್ರದರ್ಶನ ಜರುಗಿತು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016 DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :192, Postal Reg No. PMG/KA/NK/BM/135/25-27 / POST AT Vantamury Colony Post Office